ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 225
1–3–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 225

## ವಿಶ್ವವಿದ್ಯಾಲಯ ನಾಮನಿರ್ದೇಶಿತ ಸದಸತ್ವ ಕೊಡಿಸುವುದಾಗಿ ಹೇಳಿ 2.78, ಲಕ್ಷ ರೂ. ವಂಚಿಸಿದ್ದ ಆರೋಪಿ ಬಂಧನ

**ದಾವಣಗೆರೆ:** ವಿಶ್ವವಿದ್ಯಾಲಯಗಳಿಗೆ ನಾಮನಿರ್ದೇಶಿತ ಸದಸ್ಯತ್ವ ಕೊಡಿಸುವುದಾಗಿ ಹೇಳಿ ವಂಚಿಸುತ್ತಿದ್ದ ಅಂತರ್ ಜಿಲ್ಲಾ ಆರೋಪಿಯನ್ನು ಪೋಲೀಸರು ಬಂಧಿಸಿದ್ದಾರೆ.

ಚಿತ್ರದುರ್ಗ ತಾಲ್ಲೂಕು ಹುಲ್ಲೇಹಾಳ್ ಗ್ರಾಮದ ಸದ್ರುಲ್ಲಾ ಖಾನ್ ಬಂಧಿತ. ಈತನ ಬ್ಯಾಂಕ್ ನಲ್ಲಿದ್ದ 2.19 ಲಕ್ಷ ರೂ. ಫ್ರಿಜ್ ಮಾಡಿ ಹಾಗೂ ಎರಡು ಮೊಬೈಲ್ ವಶಪಡಿಸಿಕೊಳ್ಳಲಾಗಿದೆ.

ಈತ ತಾನು ರಾಜ್ಯಪಾಲರ ಸೆಕ್ರೆಟರಿಯೆಟ್ ಆಗಿ ಕೆಲಸ ಮಾಡುತ್ತಿದ್ದು. ಯುನಿರ್ವಸಿಟಿಗಳಿಗೆ ರಾಜ್ಯಪಾಲರ ನಾಮನಿರ್ದೇಶಿತ ಸದಸ್ವತಗಳ ಹೆಸರನ್ನು ನಾನೇ ನಾಮಿನೇಟ್ ಮಾಡುತ್ತೇನೆಂದು ದಾವಣಗೆರೆ ನಗರದ ವೈದ್ಯರಿಗೆ ಪೋನ್ ಕರೆ ಮಾಡಿದ್ದನು. ವೈದ್ಯರಿಗೆ ರಾಜೀವ್ ಗಾಂಧಿ ಯುನಿವರ್ಸಿಟಿ ಆಫ್ ಹೇಲ್ತ್ ಸೈನ್ಸ್ ಬೆಂಗಳೂರು ಮತ್ತು ವೈದ್ಯರ ಪತ್ನಿಗೆ ವಿ.ಟಿ.ಯು ಬೆಳಗಾವಿಯಲ್ಲಿ ರಾಜ್ಯಪಾಲರ ನಾಮನಿರ್ದೇಶಿತ ಸದಸತ್ವ ಕೊಡಿಸುವುದಾಗಿ ಹೇಳಿ ಒಟ್ಟು 2,78,720 ರೂ.ಗಳನ್ನು ಆನ್ ಲೈನ್ ಮೂಲಕ ಹಣ ವರ್ಗಾವಣೆ ಮಾಡಿಕೊಂಡು ವಂಚನೆ ಮಾಡಿದ್ದನು.

ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸಿದ ಸಿ.ಇ.ಎನ್ ಅಪರಾಧ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕಿ ಪದ್ಮಶ್ರೀ ಗುಂಜೀಕರ್ ರವರ ಮಾರ್ಗದರ್ಶನದಲ್ಲಿ ಸಿ.ಇ.ಎನ್ ಠಾಣೆಯ ಪ್ರಭಾರ ಪೊಲೀಸ್ ಇನ್ಸ್ ಪೆಕ್ಟರ್ ಶ್ರೀಮತಿ. ಶಿಲ್ಪ ವೈ, ಸುನೀಲ್ ತೇಲಿ, ಪಿ.ಎಸ್.ಐ ಸಿ.ಇ.ಎನ್ ಪೊಲೀಸ್ ಠಾಣೆ ರೂಪ ತೆಂಬದ್ ಪಿ.ಎಸ್.ಐ ಸಿ.ಇ.ಎನ್ ಪೊಲೀಸ್ ಠಾಣೆ ಮತ್ತು ಸಿಬ್ಬಂದಿಗಳಾದ ಅಶೋಕ, ಗೋವಿಂದರಾಜ್, ಸೋಮಶೇಖರ್, ಲೋಹಿತ್, ಯೋಗೀಶ್ ನಾಯ್ಕ ರವರಿಗೆ ಜಿಲ್ಲಾ ಪೊಲೀಸ್ ಅಧೀಕ್ಷಕಿ ಉಮಾ ಪ್ರಶಾಂತ್ ಶ್ಲಾಘಿಸಿರುತ್ತಾರೆ.

## ಎಂಇಎಸ್ ಪುಂಡಾಟ ವಿರೋಧಿಸಿ ಮಾ 23ರಂದು ಕರ್ನಾಟಕ ಬಂದ್

**ಬೆಂಗಳೂರು,ಫೆ.28–** ಮಹಾರಾಷ್ಟ್ರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ಸುಗಳ ಮೇಲೆ ಶಿವಸೇನೆ ಕಾರ್ಯಕರ್ತರು ನಡೆಸುತ್ತಿರುವ ದಾಳಿ ಮತ್ತು ಬೆಳಗಾವಿಯಲ್ಲಿ ಎಂಇಎಸ್ ಕಾರ್ಯಕರ್ತರು ನಡೆಸುತ್ತಿರುವ ಪುಂಡಾಟಿಕೆ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಕರ್ನಾಟಕ ಬಂದ್ ನಡೆಸಲು ಕನ್ನಡ ಪರ ಹೋರಾಟಗಾರರು ತೀರ್ಮಾನಿಸಿದ್ದಾರೆ. ಮಾಜಿ ಶಾಸಕ ಹಾಗೂ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್, ಡಾ. ರಾಜಕುಮಾರ್ ಅಭಿಮಾನಿಗಳ ಸಂಘದ ಸಾರಾ ಗೋವಿಂದು ನೇತೃತ್ವದಲ್ಲಿ ಸಭೆ ಸೇರಿದ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಮಾರ್ಚ್ 22ರಂದು ಕರ್ನಾಟಕ ಬಂದ್ ನಡೆಸಲು ತೀರ್ಮಾನಿಸಿದರು.

### ಬಿಜೆಪಿ ಶಾಸಕರು, ಸಂಸದರಿಂದ ಸಿಎಂ ಭೇಟಿ

# ಬಜೆಟ್‌ನಲ್ಲಿ ನಗರಕ್ಕೆ ಹೆಚ್ಚಿನ ಹಣ ಹಂಚಿಕೆಗೆ ಮನವಿ



**ಬೆಂಗಳೂರು:** ಬೆಂಗಳೂರಿನ ಬಿಜೆಪಿ ಶಾಸಕರು ಮತ್ತು ಸಂಸದರ ನಿಯೋಗ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಮುಂಬರುವ ರಾಜ್ಯ ಬಜೆಟ್‌ನಲ್ಲಿ ನಗರದ ಅಭಿವೃದ್ಧಿಗೆ ಹೆಚ್ಚಿನ ಹಣ ಹಂಚಿಕೆ ಮಾಡುವಂತೆ ಮನವಿ ಮಾಡಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಮತ್ತು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ನೇತೃತ್ವದ ಬಿಜೆಪಿ ನಿಯೋಗವು ನಗರದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 150 ಕೋಟಿ ರೂ. ಅನುದಾನ ನೀಡುವಂತೆ ಆಗ್ರಹಿಸಿತು.

ಮೆಟ್ರೋ ದರ ಹೆಚ್ಚಳ, ಮೊದಲ ಬಾರಿಗೆ ಶಾಸಕರು ಪ್ರತಿನಿಧಿಸುವ ಕ್ಷೇತ್ರಗಳಿಗೆ ಹಣ ಹಂಚಿಕೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ) ಚುನಾವಣೆ ಆದಷ್ಟು ಬೇಗ ನಡೆಸುವುದು ಸೇರಿದಂತೆ ಹಲವು ವಿಷಯಗಳ ಕುರಿತು ಸಿಎಂ ಜೊತೆ ಚರ್ಚಿಸಲಾಯಿತು.

ಹಣಕಾಸು ಖಾತೆಯನ್ನೂ ಹೊಂದಿರುವ ಸಿದ್ದರಾಮಯ್ಯ ಅವರು ಮಾರ್ಚ್ 7 ರಂದು 2025–26 ರ ಬಜೆಟ್ ಅನ್ನು ಮಂಡಿಸಲಿದ್ದಾರೆ, ಇದು ಅವರ 16ನೇ ಬಜೆಟ್ ಆಗಿದೆ.

"ನಮ್ಮ ಬೆಂಗಳೂರಿನ ಎಲ್ಲಾ ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು ಮತ್ತು ಜಿಲ್ಲಾ ಘಟಕದ ಅಧ್ಯಕ್ಷರು ಮುಖ್ಯಮಂತ್ರಿಯನ್ನು ಭೇಟಿಯಾಗಿ ಬಜೆಟ್‌ನಲ್ಲಿ ಬೆಂಗಳೂರಿನ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಶಾಸಕರಿಗೆ ತಮ್ಮ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಹಣ ನೀಡುವಂತೆ ಮನವಿ ಮಾಡಿದ್ದೇವೆ" ಎಂದು ಸಿಎಂ ಭೇಟಿ ಬಳಿಕ ವಿಜಯೇಂದ್ರ ತಿಳಿಸಿದ್ದಾರೆ.

ಮುಖ್ಯಮಂತ್ರಿಗಳನ್ನು ಭೇಟಿಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರು ಈ ಹಿಂದೆ ಮುಖ್ಯಮಂತ್ರಿಗಳಾಗಿದ್ದಾಗ ಪ್ರತಿ ಬಜೆಟ್‌ನಲ್ಲಿ ಬೆಂಗಳೂರಿನ ಅಭಿವೃದ್ಧಿಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ)ಗೆ 6,000–8,000 ಕೋಟಿ ರೂ. ನೀಡುತ್ತಿದ್ದರು ಎಂದು ಹೇಳಿದರು. "ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರಿಗೆ ಅಂತಹ ಯಾವುದೇ ಹಣ ಹಂಚಿಕೆ ಮಾಡಲಾಗಿಲ್ಲ. ಆದ್ದರಿಂದ ನಾವು ಬಜೆಟ್‌ನಲ್ಲಿ ಬೆಂಗಳೂರು ನಗರಕ್ಕೆ 6,000–8,000 ಕೋಟಿ ರೂ.ಗಳನ್ನು ಕೇಳಿದ್ದೇವೆ" ಎಂದು ಅವರು ತಿಳಿಸಿದರು. ಮೇಲ್ಸೇತುವೆಗಳು ಮತ್ತು ಇತರ ಮೂಲಸೌಕರ್ಯ ಯೋಜನೆಗಳು ನಿಧಾನಗತಿಯಲ್ಲಿ ನಡೆಯುತ್ತಿವೆ. ಅಂತಹ ಯೋಜನೆಗಳಿಗೆ ಹೆಚ್ಚಿನ ಹಣವನ್ನು ಮಂಜೂರು ಮಾಡುವ ಮೂಲಕ ಅವುಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಬೇಕು ಎಂದು ಹೇಳಿದರು.

ಸಭೆಯಲ್ಲಿ ಬೆಂಗಳೂರಿನ ಸಂಸದರಾದ ಪಿ.ಸಿ. ಮೋಹನ್ ಮತ್ತು ತೇಜಸ್ವಿ ಸೂರ್ಯ ಅವರು, ಇತ್ತೀಚೆಗೆ ಹೆಚ್ಚಿಸಲಾದ ಮೆಟ್ರೋ ದರವನ್ನು ಕಡಿಮೆ ಮಾಡಲು ಶುಲ್ಕ ನಿಗದಿ ಸಮಿತಿಗೆ ಮತ್ತೊಮ್ಮೆ ಪತ್ರ ಬರೆಯುವಂತೆ ಮುಖ್ಯಮಂತ್ರಿಗೆ ಕೇಳಿಕೊಂಡರು ಎಂದು ಅವರು ಹೇಳಿದರು.

ನೀವು ಮೆಟ್ರೋಗೆ ಮತ್ತೊಂದು ಪತ್ರ ಬರೆಯಿರಿ. ನಾವು ಮೂರೂ ಜನ ಸಂಸದರು ಸೇರಿಕೊಂಡು ಮೂರು ದಿನಗಳಲ್ಲಿ ಮೆಟ್ರೋ ಪ್ರಯಾಣ ದರ ಇಳಿಕೆ ಮಾಡಿಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯಗೆ ಸಂಸದ ತೇಜಸ್ವಿ ಸೂರ್ಯ ತಿಳಿಸಿದರು.

ಈ ಬಗ್ಗೆ ಬಿಎಂಆರ್‌ಸಿಎಲ್ ಎಂಡಿ ಜೊತೆ ಮಾತಾಡುತ್ತೇನೆ. ದರ ನಿಗದಿ ಸಮಿತಿಗೆ ಮತ್ತೊಂದು ಪತ್ರ ಬರೆಯುವ ಬಗ್ಗೆ ಹೇಳುತ್ತೇನೆ" ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದರು.

## ಭಾರತ ಬರೀ ಹೆಸರಲ್ಲ ಜ್ಞಾನಪ್ರಕಾಶದ ದ್ಯೋತಕ: ಡಾ. ಎಚ್.ಬಿ. ಮಂಜುನಾಥ್



**ದಾವಣಗೆರೆ:** ಭಾರತ ಎಂಬುದು ಕೇವಲ ಒಂದು ದೇಶದ ಹೆಸರಲ್ಲ, ಇದು ಜ್ಞಾನವನ್ನು ಪ್ರೀತಿಸುವ, ಆರಾಧಿಸುವ ದ್ಯೋತಕವಾಗಿದೆ ಎಂದು ಹಿರಿಯ ಪತ್ರಕರ್ತ ಡಾ.ಎಚ್ ಬಿ ಮಂಜುನಾಥ ಹೇಳಿದರು.

ಅವರು ಇಂದು ನಗರದ ಬಾಪೂಜಿ ತಾಂತ್ರಿಕ ಮಹಾವಿದ್ಯಾಲಯದ ಎಸ್. ಎಸ್. ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ನಿರ್ದೇಶನದ ಮೇರೆಗೆ ನೆರವೇರಿದ ಭಾರತೀಯ ಜ್ಞಾನವಿಧಾನದಲ್ಲಿ ವೇದಗಳ ಸಮಗ್ರತೆ ಎಂಬ ವಿಷಯವಾಗಿ ಮಾತನಾಡಿದರು.

'ಭ' ಎಂದರೆ 'ಬೆಳಕು', 'ರತಿ' ಅಥವಾ 'ರತ' ಎಂದರೆ ಪ್ರೀತಿಸುವುದು, 'ಭಾರತ' ಎಂದರೆ ಜ್ಞಾನ ಪ್ರಕಾಶವನ್ನು ಗೌರವಿಸುವುದು ಎಂದು ಆಗುತ್ತದೆ. ವಿಶ್ವದ ಅತ್ಯಂತ ಪ್ರಾಚೀನ ವಾಜ್ಞಯವಾದ ವೇದ ವೇದಾಂತಗಳು ಜೀವ ಜಗತ್ತಿನ ಸ್ವಾಸ್ಥ್ಯದ ಕುರಿತಾಗಿ ಕರ್ಮಕಾಂಡದಲ್ಲಿಯೂ ಜೀವನ್ ಮುಕ್ತಿಯ ಬಗ್ಗೆ ಜ್ಞಾನ ಕಾಂಡದಲ್ಲಿಯೂ ಹೇಳಿದ್ದು ಮತ ಭೇದವಿಲ್ಲದೆ ಎಲ್ಲರಿಗೂ ಇದು ಅನ್ವಯ ಯೋಗ್ಯವಾಗಿದೆ ಎಂಬುದನ್ನು ಸ್ವಾರಸ್ಯಕರ ಉದಾಹರಣೆಗಳ ಮೂಲಕ ಪ್ರತಿಪಾದಿಸಿದರು.

ಪರಿಪೂರ್ಣ ಅಸ್ತಿತ್ವವು 'ಸತ್' ಆದರೆ ಪರಿಪೂರ್ಣ ಅರಿವು 'ಚಿತ್' ಆಗುತ್ತದೆ, ಪರಿಪೂರ್ಣ ಅನುಭವವು 'ಆನಂದ'ವಾಗುತ್ತದೆ, ಈ ಸತ್ ಚಿತ್ ಆನಂದವೇ 'ಸಚ್ಚಿದಾನಂದ', ಇದು ವೇದಾದಿ ಸನಾತನ ಸಾಹಿತ್ಯಗಳ ಅಧ್ಯಯನದಿಂದ ಸಾಧ್ಯ.ಸನಾತನ ಎಂದರೆ ಪ್ರಾಚೀನವಾದದ್ದು ಶಾಶ್ವತವಾದದ್ದು ಎಂದರ್ಥವೆಂದರು.

ಕಾಲೇಜು ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪನವರ ಉಪಸ್ಥಿತಿಯಲ್ಲಿ ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ಶ್ರೀನಿಧಿ ಕುಲಕರ್ಣಿ ಸ್ವಾಗತಿಸಿದರು. ಸಂಜನಾ ಪರಿಚಯ ನುಡಿಗಳ ನಾಡಿದರು.

ಜವಳಿ ವಿಭಾಗದ ಪ್ರಾಧ್ಯಾಪಕ ಎಸ್. ಎಮ್. ಚಂದ್ರಶೇಖರ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.

## ಸಾಂಸ್ಕೃತಿಕ ಕಲಾತಂಡಗಳೊಂದಿಗೆ ಸಂಭ್ರಮದಿಂದ ಜರುಗಿದ ಜಾಥ



**ಚಿಕ್ಕಮಗಳೂರು:** ಬಸವತತ್ವ ಸಮಾವೇಶ ಹಾಗೂ ಶ್ರೀ ಬಸವ ತತ್ವ ಪೀಠದ ನೂತನ ಕಟ್ಟಡ ಉದ್ಘಾಟನೆ ಪ್ರಯುಕ್ತ ಇಂದು ಬೆಳಗ್ಗೆ 05 ಗಂಟೆಗೆ ಮಠದಲ್ಲಿ ಇಷ್ಟಲಿಂಗ ಪೂಜೆ ಹಾಗೂ 7:00 ಗಂಟೆಗೆ ಷಡುಸ್ಥಲ ಧ್ವಜಾರೋಹಣ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು. ಬೆಳಿಗ್ಗೆ 7.30ಕ್ಕೆ ಶ್ರೀ ಬಸವ ತತ್ವ ಪೀಠದ ಕರ್ತೃಗಳಾದ ಜಯಚಂದ್ರಶೇಖರ ಮಹಾಸ್ವಾಮಿಗಳವರ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಲಾಯಿತು.

ವಿಶ್ವಗುರು ಬಸವಣ್ಣನವರ, ಶ್ರೀ ಚಂದ್ರಶೇಖರ ಮಹಾಸ್ವಾಮಿಗಳವರ, ಜಯ ಚಂದ್ರಶೇಖರ ಮಹಾಸ್ವಾಮಿಗಳವರ ಉತ್ತಮದ ಪ್ರಯುಕ್ತ ವಿವಿಧ ಜಾನಪದ ಕಲಾತಂಡಗಳೊಂದಿಗೆ ಶ್ರೀ ಬಾಲ ಗಂಗಾಧರನಾಥ ಮಹಾಸ್ವಾಮಿಗಳವರ ವೃತ್ತದಿಂದ ಶ್ರೀ ಬಸವೇಶ್ವರ ರಸ್ತೆಯ ಮೂಲಕ ಮಠದವರೆಗೆ ಜಾಥ ನಡೆಯಿತು.



## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಗುವಿನ ಚಿಕಿತ್ಸೆ ಎಲ್ಲಾ ಸಮಸ್ಯೆಗಳಿಗೂ ಮದ್ದಾಗಿರುವುದರಿಂದ ನಿಮ್ಮ ಅನಾರೋಗ್ಯ ಗುಣಪಡಿಸಲು ನಗುವಿನ ಚಿಕಿತ್ಸೆ ಬಳಸಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

### ವೃಷಭ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಈಗ ತಾನೇ ಪರಿಚಯವಾದವರ ಜೊತೆ ನಿಮ್ಮ ವೈಯಕ್ತಿಕ ವಿಷಯಗಳನ್ನು ಹಂಚಿಕೊಳ್ಳಬೇಡಿ. ನಿಮ್ಮ ಸಂಗಾತಿಯ ಮೇಲೆ ಭಾವನಾತ್ಮಕ ಬೆದರಿಕೆಯನ್ನು ಬಳಸಬಾರದು.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ. ಇದರಿಂದಾಗಿ ನಿಮ್ಮ ಪ್ರೀತಿಪಾತ್ರರು ನಿಮ್ಮ ಮೇಲೆ ಕೋಪಗೊಳ್ಳಬಹುದು. ಇಂದು ಕೆಲಸದ ಸ್ಥಳದಲ್ಲಿ ನಿಮ್ಮ ಯಾವುದೊ ಹಳೆಯ ಕೆಲಸವನ್ನು ಪ್ರಶಂಸಿಸಬಹುದು.

### ಕರ್ಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ ಮಕ್ಕಳು ಮತ್ತು ಕುಟುಂಬ ಇಂದು ನಿಮ್ಮ ಕೇಂದ್ರಬಿಂದುವಾಗಿರುತ್ತದೆ. ಇಂದು ನಿಮ್ಮ ಹೃದಯ ಬಡಿತವು ನಿಮ್ಮ ಸಂಗಾತಿಯೊಡನೆ ಲಯದಲ್ಲಿ ಪ್ರೀತಿಯ ಸಂಗೀತವನ್ನು ನುಡಿಸುತ್ತದೆ.

### ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ನೀವು ಗುಂಪಿನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ನೀವು ಹೊಸ ಸ್ನೇಹಿತರನ್ನು ಸಂಪಾದಿಸುತ್ತೀರಿ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

### ಕನ್ಯಾ ರಾಶಿ

ನಿಮ್ಮ ದಿಟ್ಟ ಮತ್ತು ನಿರ್ಭಯ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮಗೌರವವನ್ನು ಹಾನಿ ಮಾಡಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್ಗಳು ಮತ್ತು ಮ್ಯೂಚುವಲ್ ಫಂಡ್ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ. ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು

### ತುಲಾ ರಾಶಿ

ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಹತ್ತಿರದ ಗೆಳೆಯರು ಹಾಗು ಸ್ನೇಹಿತರು ಆಕ್ರಮಣಕಾರಿಯಾಗುತ್ತಾರೆ ಪಡೆಯಲು ಮತ್ತು ನಿಮಗೆ ಜೀವನವನ್ನು ಕಠಿಣಗೊಳಿಸುತ್ತಾರೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ. ನಿಮ್ಮ ಕೆಲಸಕ್ಕೆ ಅಂಟಿಕೊಳ್ಳಿ ಮತ್ತು ಇಂದು ನಿಮಗೆ ಸಹಾಯ ಮಾಡಲು ಇತರರನ್ನು ಅವಲಂಬಿಸಬೇಡಿ.

### ವೃಶ್ಚಿಕ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ಕುಟುಂಬದ ರಹಸ್ಯ ಸುದ್ದಿ ನಿಮಗೆ ಅಚ್ಚರಿ ನೀಡಬಹುದು.

### ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮಕ್ಕಳು ನಿಮಗೆ ಸಂತಸದ ಸುದ್ದಿ ತರಬಹುದು ಪ್ರೇಮ ಜೀವನ ಸ್ವಲ್ಪ ಕಠಿಣವಾಗಿರಬಹುದು. ಕೆಲಸದ ಒತ್ತಡ ಇನ್ನೂ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ.

### ಮಕರ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ.ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಕುಂಭ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹ್ತಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

### ಮೀನ ರಾಶಿ

ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ – ಯಾವುದೇ ಹೂಡಿಕೆಗಳನ್ನು ಮಾಡುವ ಮೊದಲು ವ್ಯಕ್ತಿಯ ವಿಶ್ವಾಸಾರ್ಹತೆ ಮತ್ತು ಪ್ರಾಮಾಣಿಕತೆಯನ್ನು ದೃಢೀಕರಿಸಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು, ನೀವು ಅದೃಷ್ಟವಂತರು.

## ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಆಲ್ ದ ಬೆಸ್ಟ್



ವಿದ್ಯಾರ್ಥಿಗಳೇ, ನಿಮ್ಮ ಮಹತ್ವದ ದ್ವಿತೀಯ ಪಿಯುಸಿ ಪರೀಕ್ಷೆ ಇಂದಿನಿಂದ ಬರೆಯುತ್ತಿದ್ದೀರಿ ಈ ಹಂತ ನಿಮ್ಮ ಭವಿಷ್ಯದ ಪ್ರಮುಖ ಹಂತವಾಗಿದೆ. ಇದು ಕೇವಲ ಒಂದು ಪರೀಕ್ಷೆಯಲ್ಲ, ನಿಮ್ಮ ಕನಸುಗಳಿಗೆ ತಲುಪುವ ದಾರಿಯ ಆರಂಭ. ಈ ಸಮಯದಲ್ಲಿ ಆತ್ಮವಿಶ್ವಾಸ ಮತ್ತು ಧೈರ್ಯ ಎತ್ತಿಹಿಡಿಯುವುದು ಮುಖ್ಯ.
ಅಧ್ಯಯನ ಮತ್ತೆ ಸಿದ್ಧತೆ ? ಯಶಸ್ಸಿನ ಹಾದಿ

"ಯಶಸ್ಸು ಶ್ರಮಪಡುವವರಿಗೆ ಮಾತ್ರ ಸಿಗುತ್ತದೆ" ಎಂಬ ಮಾತು ಯಾವಾಗಲೂ ಸತ್ಯ. ನೀವು ಇದುವರೆಗೆ ಎಷ್ಟೇ ಓದಿರಲಿ, ಪರೀಕ್ಷೆಗೆ ಮುನ್ನ ಸರಿಯಾದ ಪ್ಲಾನ್ ಮಾಡಿ. ದಿನನಿತ್ಯದ ಓದಲು ಸೂಕ್ತ ಸಮಯ ಮೀಸಲಿಟ್ಟು, ಪ್ರತಿದಿನವೂ ತಪ್ಪದೆ ಅಭ್ಯಾಸ ಮಾಡಿ. ಪಠ್ಯವನ್ನು ಸಂಪೂರ್ಣವಾಗಿ ಓದಿ, ಪರಿಕಲ್ಪನೆಗಳನ್ನು ಅರ್ಥೈಸಿ ಮತ್ತು ಹಳೆಯ ಪ್ರಶ್ನೆಪತ್ರಿಕೆಗಳನ್ನು ನೋಡಿ.

ಆತ್ಮವಿಶ್ವಾಸವೇ ನಿಮ್ಮ ಶಕ್ತಿ ಒಂದು ಕ್ಷಣವೂ ಆತಂಕಪಡಬೇಡಿ. "ನನಗೆ ಸಾಧ್ಯ" ಎಂಬ ವಿಶ್ವಾಸವನ್ನು ಯಾವತ್ತೂ ಕಳೆದುಕೊಳ್ಳಬೇಡಿ. ನೀವು ಪ್ರಯತ್ನಪಟ್ಟು ಓದಿದರೆ ಫಲಿತಾಂಶ ಉತ್ತಮವಾಗಿಯೇ ಇರಲಿದೆ. ಹಠಾತ್ ಓದುವ ಬದಲು, ಸ್ಥಿರ ಹಾಗೂ ಏಕಾಗ್ರತೆಯೊಂದಿಗೆ ಅಧ್ಯಯನ ಮಾಡುವುದು ಉತ್ತಮ.

*ಪರೀಕ್ಷಾ ದಿನದಂದು ನೆನಪಿಡಬೇಕಾದ ಅಂಶಗಳು

* **ಶಾಂತ ಮನಸ್ಸು:** ದಿನದ ಶುಭಾರಂಭವನ್ನು ಮಾಡುವ ಮುನ್ನ, ಸ್ವಲ್ಪ ಸಮಯ ಧ್ಯಾನ ಅಥವಾ ಪ್ರಾಣಾಯಾಮ ಮಾಡಿ.
* **ಪ್ರಶ್ನೆಪತ್ರಿಕೆಯನ್ನು ಓದುವಿಕೆ:** ಪ್ರಶ್ನೆಗಳನ್ನು ಎಚ್ಚರಿಕೆಯಿಂದ ಓದಿ, ಸೂಕ್ತ ಸಮಯ ವಿನ್ಯಾಸ ಮಾಡಿ.
* **ಸಂಕ್ಷಿಪ್ತ ಮತ್ತು ಸ್ಪಷ್ಟ ಉತ್ತರ:** ಉತ್ತರಗಳನ್ನು ನಿರ್ದಿಷ್ಟವಾಗಿ ಬರೆಯಿರಿ, ಅಗತ್ಯಕ್ಕಿಂತ ಹೆಚ್ಚು ಬರೆಯಬೇಡಿ.
* **ಆತ್ಮವಿಶ್ವಾಸ:** ನಿಮಗೆ ಸರಿ ಹೊಂದುತ್ತದೆ ಎಂಬ ಭರವಸೆ ಇಟ್ಟುಕೊಳ್ಳಿ.
* **ಆರೋಗ್ಯದ ಕಡೆ ಗಮನ:** ಸಮರ್ಪಕ ಆಹಾರ ಸೇವಿಸಿ, ನಿದ್ರೆ ತಪ್ಪಿಸಿಕೊಳ್ಳಬೇಡಿ.

ನಿಮ್ಮ ಭವಿಷ್ಯ ಪ್ರಭಾವಶಾಲಿಯಾಗಲಿ! ನಿಮ್ಮ ಶ್ರಮಕ್ಕೆ ಶ್ರೇಷ್ಠ ಫಲ ಸಿಗಲಿ! ಈ ಪರೀಕ್ಷೆಯೇ ಅಂತಿಮವಲ್ಲ, ಆದರೆ ಇದು ನಿಮ್ಮ ಮುಂದಿನ ಹಾದಿಯನ್ನು ಸುಗಮಗೊಳಿಸಬಲ್ಲ ಒಂದು ಮಹತ್ವದ ಹಂತ. ನಿಮ್ಮ ಪ್ರಯತ್ನ ವಿಫಲವಾಗುವುದಿಲ್ಲ ? ಯಶಸ್ಸು ನಿಮ್ಮದೇ! "All the Best! ನಿಮ್ಮ ಭವಿಷ್ಯ ಉಜ್ವಲವಾಗಲಿ!"

Dr. Venkatesh Babu S
Associate Professor
Davangere

## ತುಂತುರು ನೀರಾವರಿ ಘಟಕ ಪಡೆಯಲು ಅರ್ಜಿ ಆಹ್ವಾನ

**ಹಾಸನ :** ಪಿ.ಎಂ.ಕೆ.ಎಸ್.ವೈ ಸೂಕ್ಷ್ಮ ನೀರಾವರಿ (ಎಸ್.ಸಿ.ಪಿ) ಯೋಜನೆಯಡಿ 2024–25ನೇ ಸಾಲಿನ ಭೂ ಹಿಡುವಳಿ ಹೊಂದಿರುವ ಪರಿಶಿಷ್ಟ ಜಾತಿ (ಎಸ್.ಸಿ.) ರೈತರಿಗೆ ತುಂತುರು ನೀರಾವರಿ ಘಟಕಗಳನ್ನು ವಿತರಿಸಲು ಕಾರ್ಯಕ್ರಮ ನಿಗದಿಯಾಗಿರುತ್ತದೆ. ನೀರಾವರಿ ಸೌಲಭ್ಯ ಹೊಂದಿರುವ ರೈತರಿಂದ ತುಂತುರು ನೀರಾವರಿ ಘಟಕಗಳಿಗೆ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಿದ ಎಲ್ಲಾ ರೈತರಿಗೆ ತುಂತುರು ನೀರಾವರಿ ಘಟಕಗಳನ್ನು ನೀಡಲಾಗುವುದು. ಪ್ರತಿ ತುಂತುರು ನೀರಾವರಿ ಘಟಕಕ್ಕೆ 19,429/– ರೂಗಳ ಸಹಾಯಧನವಿದ್ದು, ರೈತರು 4,139/– ರೂಗಳನ್ನು ರೈತರ ವಂತಿಕೆಯಾಗಿ ಬ್ಯಾಂಕ್‌ಗೆ ಪಾವತಿ ಮಾಡಬೇಕಾಗಿರುತ್ತದೆ.

ತುಂತುರು ನೀರಾವರಿ ಘಟಕಗಳನ್ನು ಪಡೆಯಲು ರೈತರು ಅರ್ಜಿ ನಮೂನೆ, ಆದಾರ್ ಕಾರ್ಡ್, ಪಹಣಿ, ಜಮೀನಿನ ಚಕ್ಕುಬಂದಿ, ನೀರಿನ ಲಭ್ಯತೆ ಪ್ರಮಾಣ ಪತ್ರ, ಪೋಟೋ, ಬ್ಯಾಂಕ್ ಪಾಸ್ ಬುಕ್, ಜಾತಿ ಪ್ರಮಾಣ ಪತ್ರ ದಾಖಲಾತಿಗಳನ್ನು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಿಗೆ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಹಾಸನದ ಜಂಟಿ ಕೃಷಿ ನಿರ್ದೇಶಕರು ತಿಳಿಸಿರುತ್ತಾರೆ.

## ಬೀದಿ ನಾಟಕ ಕಲಾತಂಡಗಳಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಡಿಯಲ್ಲಿ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳು ಮತ್ತು ಯೋಜನೆಗಳ ಬಗ್ಗೆ ಜಾನಪದ ಕಲಾ ಪ್ರಕಾರದಲ್ಲಿ ಬೀದಿ ನಾಟಕಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲು ಕಲಾ ಪ್ರದರ್ಶನ ನೀಡಲು ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಮಾರ್ಚ್ 7 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಐ.ಇ.ಸಿ ವಿಭಾಗ ರೂಂ.ನಂ–3ಕ್ಕೆ ಭೇಟಿ ನೀಡಬೇಕೆಂದು ಜಿಲ್ಲಾ ಆರೋಗ್ಯಾಧಿಕಾರಿ ಷಣ್ಮುಖಪ್ಪ ತಿಳಿಸಿದ್ದಾರೆ.

## ಬಡಾವಣೆಗಳ ನಿವೇಶನ ಮಾರಾಟಕ್ಕೆ ಇ–ಸ್ವತ್ತು ಪೂರಕ: ಶಾಸಕ ಬಿ.ದೇವೇಂದ್ರಪ್ಪ



**ಜಗಳೂರು:** ಬಡಾವಣೆಗಳ ನಿವೇಶನ ಮಾರಾಟ ವಹಿವಾಟುಗಳಿಗೆ ಇ– ಖಾತೆ ಪೂರಕವಾಗಲಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಗುರುವಾರ ಪಟ್ಟಣದ ಪಟ್ಟಣ ಪಂಚಾಯತಿ ಸಭಾಂಗಣದಲ್ಲಿ ಪಟ್ಟಣ ಪಂಚಾಯತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಇ– ಖಾತಾ ಅಭಿಯಾನ , ಇ– ಸ್ವತ್ತು ಪಡೆಯಲು ಸರಳ ವಿಧಾನ ಕುರಿತು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ವೈಯಕ್ತಿಕವಾಗಿ ಭೂಪರಿವರ್ತನೆಗೊಳಿಸಿ ಬಡಾವಣೆಗಳಲ್ಲಿ ನಿವೇಶನ ಖರೀದಿಮಾಡುವಾಗ ಅಗತ್ಯದಾಖಲೆಗಳಿಲ್ಲದೆ ಸಾಕಷ್ಟು ತೊಂದರೆಯಿಂದ ಆರ್ಥಿಕ ವಹಿವಾಟುಗಳಿಗೆ ಹಿನ್ನೆಡೆಯಾಗಿ ವನವಾಸ ಅನುಭವಿಸುವಂತಾಗಿತ್ತು.ರಾಜ್ಯಮಟ್ಟದ ಸಮಸ್ಯೆಯಾಗಿರುವ ಈ ಬಗ್ಗೆ ನಾನು ಅಧಿವೇಶನದಲ್ಲಿ ಸಂಬಂಧಿಸಿದ ಸಚಿವರು,ಹಾಗೂ ಸರ್ಕಾರದ ಗಮನಸೆಳೆದ ಪರಿಣಾಮ ಇ ಖಾತಾ ಅಭಿಯಾನಕ್ಕೆ ಕಾನೂನು ಆದೇಶ ಹೊರಡಿಸಿರುವುದು ಸ್ವಾಗತರ್ಹ.ಪಟ್ಟಣದ 13 ಬಡವಾಣೆಗಳಲ್ಲಿನ ನಿವಾಸಿಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಇ–ಖಾತೆಯ ಸದುಪಯೋಗಪಡೆದುಕೊಳ್ಳಬೇಕು ಎಂದು ಹೇಳಿದರು.

ಪ.ಪಂ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ ಮಾತನಾಡಿ, ರಾಜ್ಯದಲ್ಲಿ ಅನಧಿಕೃತ ಬಡಾವಣೆಗಳ ಸಂಖ್ಯೆ ಅಧಿಕವಾಗಿದ್ದವು ಮಾನ್ಯ ಶಾಸಕ ಬಿ. ದೇವೇಂದ್ರಪ್ಪ ಅಧಿವೇಶನದಲ್ಲಿ ಹಲವಾರು ಭಾರಿ ಗಮನಕ್ಕೆ ತಂದು ಚರ್ಚೆ ಮಾಡಿದ್ದರ ಹಿನ್ನಲೆಯಲ್ಲಿ ಸರಕಾರ ಉಪ ಸಮಿತಿ ರಚನೆ ಮಾಡಿತು ಸಮಿತಿಯ ತಿರ್ಮಾ ನದಂತೆ ಸರಕಾರ ಅನುಮೊದನೆ ನೀಡಿತು ಹಾಗಾಗಿ ಇಂದು ಬಿ ಖಾತೆ ನೀಡಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ನವೀನ್ ಕುಮಾರ್,ಉಪಾಧ್ಯಕ್ಷೆ ಲೋಕಮ್ಮ ಓಬಳೇಶ್,ಸದಸ್ಯರಾದ ವಿಶಾಲಾಕ್ಷಿ,ಮಂಜಮ್ಮ,ಲಲಿತಮ್ಮ,

ದೇವರಾಜ್,ತಿಪ್ಪೇಸ್ವಾಮಿ,ರವೇಶ್ ರೆಡ್ಡಿ,ಆದರ್ಶ,ಲುಕ್ಮಾನ್ ಖಾನ್,ಶಕೀಲ್ ಅಹಮ್ಮದ್,ನಜರುನ್ನೀಸಾ,ಲೋಲಾಕ್ಷಮ್ಮ,ನಿರ್ಮಲಕುಮಾರಿ,ರೇವಣ್ಣ,ಮಹಮ್ಮದ್ ಅಲಿ,ಮಂಜುನಾಥ್,ಪಾಪಲಿಂಗಪ್ಪ,ನಾಮನಿರ್ದೇಶಿತ ಸದಸ್ಯರಾದ ಶಾಂತಪ್ಪ,ಜಯ್ಯಣ್ಣ,ತಾನಾಜಿಗೋಸಾಯಿ,ಶಾಸಕರ ಆಪ್ತರಾದ ಗೌಸ್ ಅಹಮ್ಮದ್,ಸೇರಿದಂತೆ ಉಪಸ್ಥಿತರಿದ್ದರು.

## ಭಾಗ್ಯಲಕ್ಷ್ಮಿ ಬಾಂಡ್ ವಿತರಿಸುವ ಮೂಲಕ ಬಿಎಸ್ ವೈ ಹುಟ್ಟುಹಬ್ಬ ಆಚರಣೆ



**ದಾವಣಗೆರೆ:** ಭಾರತೀಯ ಜನತಾ ಪಾರ್ಟಿ ಜಿಲ್ಲಾ ಘಟಕದ ವತಿಯಿಂದ ಹುಟ್ಟು ಹೋರಾಟಗಾರರು, ರೈತ ನಾಯಕರು, ಮಾಜಿ ಮುಖ್ಯ ಮಂತ್ರಿಗಳಾದ ಯಡಿಯೂರಪ್ಪ ಅವರ 82 ನೇ ಹುಟ್ಟುಹಬ್ಬವನ್ನು ಆಚರಿಸಲಾಯಿತು.

ವಿಶೇಷವಾಗಿ ಮಹಿಳಾ ಮೋರ್ಚಾ ವತಿಯಿಂದ ಭಾಗ್ಯಲಕ್ಷ್ಮಿ ಬಾಂಡ್ ಪಲಾನುಭವಿಗಳಿಗೆ ಹಾಗೂ ರೈತ ಮುಖಂಡರುಗಳಿಗೆ ಸನ್ಮಾನಿಸುವ ಮೂಲಕ ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ರಾಜಶೇಖರ್ ನಾಗಪ್ಪ, ಮಾಜಿ ಸಚೇತಕ ಡಾ. ಎ.ಎಚ್. ಶಿವಯೋಗಿ ಸ್ವಾಮಿ, ಪ್ರಧಾನ ಕಾರ್ಯದರ್ಶಿ ಧನಂಜಯ ಕಡ್ಲೇಬಾಳು, ಅನಿಲ್ ಕುಮಾರ್ ನಾಯಕ್, ಅಣ್ಣೇಶ್ ಐರಣಿ, ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷರಾದ ಹೆಚ್.ಸಿ. ಜಯಮ್ಮ, ಎಲ್.ಎನ್. ಕಲ್ಲೇಶ್, ಲೋಕಿಕೆರೆ ನಾಗರಾಜ್, ಕೆ.ಎಂ. ಸುರೇಶ್ ಉಪಸ್ಥಿತರಿದ್ದರು.

ಉತ್ತರಮಂಡಲ ಅಧ್ಯಕ್ಷ ತಾರೇಶ್ ನಾಯಕ್, ಮಾಜಿ ಮಹಾನಗರ ಪಾಲಿಕೆ ಸದಸ್ಯ ಕೆ. ಪ್ರಸನ್ನ ಕುಮಾರ್, ಶಿವಾನಂದ, ಜಿಲ್ಲಾ ಮಾಧ್ಯಮ ಸಂಚಾಲಕರಾದ ವಿಶ್ವಾಸ್ ಹೆಚ್. ಪಿ., ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ, ಪ್ರಧಾನ ಕಾರ್ಯದರ್ಶಿಗಳಾದ ಪುಷ್ಪವಾಲಿ, ಭಾಗ್ಯ ಪಿಸಾಳೆ, ನೀತು, ಗೌರಮ್ಮ ಪಾಟೀಲ್ ರೇಣುಕಾ, ರೂಪ, ವಿಜೇತ, ಕಮಲ, ಮಂಜುಳಾ ಇಟಗಿ, ಹಾಲೇಶ್, ಕಿಶೋರ್ ಕುಮಾರ್, ಪ್ರವೀಣ ಪಂಜು, ಬಾತಿ ಸಿದ್ದೇಶ್, ಹಾಗೂ ಪಕ್ಷದ ಮುಖಂಡರುಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

## ಇಂದು ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ

**ಹಾಸನ :** ಸಹಕಾರ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ರವರ ಅಧ್ಯಕ್ಷತೆಯಲ್ಲಿ ಹಾಸನ ಜಿಲ್ಲೆಯ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮವು ಸೇರಿದಂತೆ), 2024–25ನೇ ಸಾಲಿನ 3ನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯನ್ನು ಮಾ.01 ರಂದು ಬೆ.11 ಗಂಟೆಗೆ ಹಾಸನ
ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಹೊನಲು–ಬೆಳಕಿನ ಕಬಡ್ಡಿ ಪ್ರಿಮಿಯರ್ ಲೀಗ್




**ದಾವಣಗೆರೆ:** ದಾವಣಗೆರೆ ಜಿಲ್ಲಾ ಅಮೆಚೂರ್ ಕಬಡ್ಡಿ ಸಂಸ್ಥೆ (ರಿ), ಸೃಷ್ಟಿ ಕಬಡ್ಡಿ ಅಕಾಡೆಮಿ ಹಾಗೂ ಜನಪ್ರಿಯ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ದ್ವಿತೀಯ ಬಾರಿಗೆ ದಾವಣಗೆರೆ ಜಿಲ್ಲಾ ಮಟ್ಟದ ಹೊನಲು–ಬೆಳಕಿನ ಕಬಡ್ಡಿ ಪ್ರಿಮಿಯರ್ ಲೀಗ್ (ಜೆಕೆಪಿಎಲ್) –2025 ಫೆ. 28 ರಿಂದ ಮಾರ್ಚ್ 2 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಫೆ. 28 ಸಂಜೆ 6 ಗಂಟೆಗೆ ಪಂದ್ಯಾವಳಿ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ದೂಡಾ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್,ಜಿ.ಪಂ. ಸಿಇಓ ಸುರೇಶ್ ಬಿ. ಇಟ್ನಾಳ್, ಗಣ್ಯರಾದ ಶಿವಗಂಗಾ ಶ್ರೀನಿವಾಸ್, ಎಂ. ದೊಡ್ಡಪ್ಪ, ಕುರುಡಿ ಗಿರೀಶ್,

ಎಂ. ನಾಗರಾಜ್, ಕಬಡ್ಡಿ ಮಲ್ಲು, ಹೆಚ್ ಚಂದ್ರಪ್ಪ ಪಾಲ್ಗೊಳ್ಳಲಿದ್ದಾರೆ ಎಂದರು.ಪ್ರತಿದಿನ ಸಾಯಂಕಾಲ 6 ಗಂಟೆಯಿಂದ ಕಬಡ್ಡಿ ಪಂದ್ಯಗಳನ್ನು ಪ್ರಾರಂಭಿಸಲಾಗುವುದು. ಲೀಗ್ ಮಾದರಿಯಲ್ಲಿ ಪ್ರತಿದಿನ 10 ಪಂದ್ಯಗಳನ್ನು ನಡೆಸಲಾಗುವುದು. ಒಟ್ಟು 24 ಲೀಗ್ ಪಂದ್ಯಗಳನ್ನು ಹಾಗೂ ಲೀಗ್ ನಲ್ಲಿ ಟಾಪ್ 4 ಮಾದರಿಯಲ್ಲಿ ಆಡಿಸಲಾಗುವುದು. ಸ್ಥಾನ ಪಡೆದ ತಂಡಗಳನ್ನು ನಾಕ್‌ಔಟ್ ಮಾದರಿಯಲ್ಲಿ ಆಡಿಸಲಾಗುವುದು.

ಜಿಲ್ಲಾ ಮಟ್ಟದ ಹೊನಲು–ಬೆಳಕಿನ ಕಬಡ್ಡಿ ಪ್ರಿಮಿಯರ್ ಲೀಗ್ ನ ಪ್ರಥಮ ಬಹುಮಾನ ವಿಜೇತರಿಗೆ 2 ಲಕ್ಷ ರೂಪಾಯಿ ನಗದು, ದ್ವಿತೀಯ 1 ಲಕ್ಷ ರೂಪಾಯಿ, ತೃತೀಯ 25,000ರೂಪಾಯಿ ಹಾಗೂ ನಾಲ್ಕನೇ ಬಹುಮಾನವಾಗಿ 25,000 ರೂಪಾಯಿಗಳನ್ನು ಆಕರ್ಷಕ ಟ್ರೋಫಿಯೊಂದಿಗೆ ನೀಡಲಾಗುವುದು ಎಂದು ಮಾಹಿತಿ ನೀಡಿದರು.

## ಗ್ಯಾರಂಟಿ ಯೋಜನೆಗಳ ಪ್ರಾಧಿಕಾರ ಅಧ್ಯಕ್ಷರ ಪ್ರವಾಸ

**ಹಾಸನ:** ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ ಅವರ ಮಾ01 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಮಾ.01 ರಂದು ಬೆ.11 ಗಂಟೆಗೆ ಹಾಸನ ಜಿಲ್ಲಾ ಪಂಚಾಯಿತಿಯ ಹೊಯ್ಸಳ ಸಂಭಾಗಣದಲ್ಲಿ ನಡೆಯುವ ಹಾಸನ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿ ಭಾಗವಹಿಸಲಿದ್ದಾರೆ ನಂತರ ಸರ್ಕಾರಿ ವಸತಿ ಗೃಹದಲ್ಲಿ ಅಲ್ಪಾವಧಿ ವಾಸ್ತವ್ಯ ನಂತರ ಮಧ್ಯಾಹ್ನ 03 ಗಂಟೆಗೆ ರಸ್ತೆ ಮೂಲಕ ಬೆಂಗಳೂರಿಗೆ ತೆರಳಿದ್ದಾರೆ.

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ಹಾಸನ :** ಸರ್ಕಾರದ 05 ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲಸಲು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಮಾ.01 ರಂದು ಬೆ.11 ಗಂಟೆಗೆ ಹಾಸನ ಜಿಲ್ಲಾ ಪಂಚಾಯಿತಿಯ ಹೊಯ್ಸಳ ಸಭಾಂಗಣದಲ್ಲಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ತಿಳಿಸಿದ್ದಾರೆ.

## ಸಂವಿಧಾನ ರಚಿಸಿದ ಅಂಬೇಡ್ಕರ್ ಸ್ಮರಣೆ ಅಗತ್ಯ

**ಜಗಳೂರು:** ಸಮಾನತೆ ಸಾರುವ ಶ್ರೇಷ್ಠ ಸಂವಿಧಾನ ರಚಿಸಿದ ಅಂಬೇಡ್ಕರ್ ಸ್ಮರಿಸುವ ಜಾಗರಣೆ ಪ್ರಸ್ತುತ ಅವಶ್ಯಕವಾಗಿದೆ ಎಂದು ಮಾಜಿ ಜಿ.ಪಂ ಸದಸ್ಯ ಕೆ.ಪಿ. ಪಾಲಯ್ಯ ಅಭಿಪ್ರಾಯ ವ್ಯಕ್ತಪಡಿಸಿದರು.

ಬುಧವಾರ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಪ್ರಗತಿಪರ ಸಂಘಟನೆವತಿಯಿಂದ ಮಹಾಶಿವರಾತ್ರಿ ಹಬ್ಬದ ಅಂಗವಾಗಿ ಹಮ್ಮಿಕೊಂಡಿದ್ದ 'ಅಂಬೇಡ್ಕರ್ ಮಹಾರಾತ್ರಿ ಜಾಗರಣೆ'ವಿಶೇಷ ಕಾರ್ಯಕ್ರಮದಲ್ಲಿ ಪುತ್ಥಳಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.


'ಭಾರತ ಹಲವುಧರ್ಮ, ಬಹು ಸಂಸ್ಕೃತಿಯ ನೆಲೆಬೀಡು. ಸಮಾಜದಲ್ಲಿ ಜಾತ್ಯಾತೀತ,ಧರ್ಮಾತೀತವಾಗಿ ಶಾಂತಿ ಸಾಮರಸ್ಯತೆಯೊಂದಿಗೆ ಧಾರ್ಮಿಕ ಹಬ್ಬ ಹರಿದಿನಗಳು ಜರುಗಬೇಕು. ದೇವರು ಧರ್ಮದ ಹೆಸರಿನಲ್ಲಿ ಜನತೆಯ ಮೇಲೆ ಭಾವನಾತ್ಮಕ ಹಲ್ಲೆಗಳು, ಮೌಢ್ಯತೆ, ಕಂದಾಚಾರಗಳು ಕೊನೆಯಾಗಬೇಕು. ಮಹಿಳೆಯರು ಸೇರಿದಂತೆ ಶೋಷಿತ ವರ್ಗಗಳು ಶಿಕ್ಷಣಪಡೆದು ಮುಖ್ಯವಾಹಿನಿಗೆ ಬರಬೇಕಿದೆ ಎಂದು ಸಲಹೆ ನೀಡಿದರು.ವಕೀಲ ಸಂಘದ ತಾಲ್ಲೂಕು ಅಧ್ಯಕ್ಷ ಟಿ.ಬಸವರಾಜ್ ಮರೇನಹಳ್ಳಿ ಮಾತನಾಡಿ, ದೇಶದಲ್ಲಿ ಮನುಸ್ಮೃತಿ ವಿಜೃಂಭಿಸುತ್ತಿದ್ದ ವೇಳೆ ಅತ್ಯಂತ ಶೋಷಣೆಗೊಳಗಾಗಿದ್ದ ಮಹಿಳೆಯರಿಗೆ ಸಂವಿಧಾನಬದ್ಧ ಧಾರ್ಮಿಕ ಹಕ್ಕು ನೀಡಿ ದೇವಾಲಯಗಳ ಪ್ರವೇಶನೀಡಿದ ಡಾ.ಬಿ.ಆರ್ ಅಂಬೇಡ್ಕರ್ ಅವರನ್ನು ಸ್ಮರಿಸದೆ ದೇವಾಲಯಗಳ ಮುಂದೆ ಸಾಲಾಗಿ ನಿಲ್ಲುತ್ತಿರುವುದು,ಮೌಢ್ಯಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು. ವೈಜ್ಞಾನಿಕ ಮತ್ತು ವೈಚಾರಿಕತೆ ಮೈಗೂಡಿಸಿಕೊಳ್ಳಬೇಕು ಎಂದರು.

ದಲಿತ ಮುಖಂಡ ಬಿ.ಶಂಭುಲಿಂಗಪ್ಪ ಮಾತನಾಡಿ,ಅಂಬೇಡ್ಕರ್ ಅವರನ್ನು ಜಾತಿಗೆ ಸೀಮಿತಗೊಳಿಸದೆ ಮೀಸಲಾತಿ ಅನುಭವಿಸುವ ಎಲ್ಲಾ ವರ್ಗದವರು ಇಂತಹ ವಿನೂತನ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಸಂಘಟನೆಗಳು ಜನಜಾಗೃತಿ ಮೂಡಿಸಬೇಕು.ಶಿವರಾತ್ರಿ ಜಾಗರಣೆಯ ದಿನದಂದು ಆಹಾರ ಪದ್ಧತಿ ಆಯ್ಕೆ ಪ್ರತಿಯೊಬ್ಬರ ಹಕ್ಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ದೊಣೆಹಳ್ಳಿ ಗ್ರಾ.ಪಂ ಅಧ್ಯಕ್ಷ ತಿಪ್ಪೇಸ್ವಾಮಿ,ಪ್ರಾಂಶುಪಾಲ ನಾಗಲಿಂಗಪ್ಪ,ವಕೀಲರಾದ ಸಣ್ಣ ಓಬಯ್ಯ, ನಾಗೇಶ್, ಪ್ರಗತಿಪರ ಸಂಘಟನೆ ಮುಖಂಡರಾದ ಚಿಕ್ಕಮ್ಮನಹಟ್ಟಿ ಮಂಜಣ್ಣ, ಕುಬೇಂದ್ರಪ್ಪ, ಗುತ್ತಿದುರ್ಗ ರುದ್ರೇಶ್, ಅಹಮ್ಮದ್ ಅಲಿ, ರಾಜಪ್ಪ ವ್ಯಾಸಗೊಂಡನಹಳ್ಳಿ, ಮಾದಿಹಳ್ಳಿ ಮಂಜಪ್ಪ, ಸತೀಶ್ ಮಲೆಮಾಚಿಕೆರೆ, ಸಿದ್ದಮ್ಮನಹಳ್ಳಿ ಬಸವರಾಜ್ , ವಕೀಲ ಅಂಜಿನಪ್ಪ, ಭರಮಸಮುದ್ರ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

## ನಿಧನ ಸುದ್ದಿಗಳು

### ರಾಮಣ್ಣ ನಿಧನ



**ದಾವಣಗೆರೆ:** ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರು, ಸಮಾಜ ಸೇವಕರು ಕಡ್ಲೆಬಾಳು ಹನುಮ ಭೀಮ ಮಧ್ವ ಟ್ರಸ್ಟಿನ ಅಧ್ಯಕ್ಷರು, ಬ್ರಾಹ್ಮಣ ವಿದ್ಯಾರ್ಥಿ ನಿಲಯದ ಮಾಜಿ ಅಧ್ಯಕ್ಷರು, ಎಲ್ಲರಿಗೂ ರಾಮಣ್ಣ ಎಂದೆ ಚಿರಪರಿಚಿತರಾಗಿದ್ದ ಶ್ರೀ ಎಂ ವಿ. ರಾಮರಾವ್ ಶಾನುಭಾಗ್ (ರಾಮಣ್ಣ) ಸ್ವವಗ್ರಹದಲ್ಲಿ ನಿಧನರಾಗಿದ್ದಾರೆ.

## ಅಮೆರಿಕದಿಂದ ಗಡಿಪಾರು: ಪನಾಮದಿಂದ ನವದೆಹಲಿಗೆ ಬಂದಿಳಿದ 12 ಭಾರತೀಯರು!

**ನವದೆಹಲಿ:** ಅಮೆರಿಕದಿಂದ ಪನಾಮಗೆ ಗಡಿಪಾರು ಮಾಡಲಾಗಿದ್ದ 12 ಭಾರತೀಯ ಪ್ರಜೆಗಳನ್ನು ಹೊತ್ತ ವಿಮಾನವೊಂದು ಭಾನುವಾರ ಸಂಜೆ ನವದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಿತು.ಅಮೆರಿಕ ಸುಮಾರು 299 ಅಕ್ರಮ ವಲಸಿಗರನ್ನು ಪನಾಮಕ್ಕೆ ಗಡಿಪಾರು ಮಾಡಲಾದ ನಂತರ ಅಲ್ಲಿಂದ ವಾಪಸ್ಸಾದ ಭಾರತೀಯರ ಮೊದಲ ಬ್ಯಾಚ್ ಇದಾಗಿದೆ. ಅಕ್ರಮ ವಲಸಿಗರನ್ನು ಪನಾಮ ಮತ್ತು ಕೋಸ್ಟ್ ರಿಕಾಕ್ಕೆ ಗಡಿಪಾರು ಮಾಡಲಾಗುತ್ತಿದೆ. ಬಳಿಕ ಅಲ್ಲಿಂದ ತವರು ರಾಷ್ಟ್ರಗಳಿಗೆ ಕಳುಹಿಸಲಾಗುತ್ತಿದೆ.ಪನಾಮದಿಂದ ಇಸ್ತಾನ್ ಬುಲ್ ಮಾರ್ಗವಾಗಿ ಬಂದ ಟರ್ಕಿಸ್ ಏರ್ ಲೈನ್ಸ್ ವಿಮಾನದ ಮೂಲಕ ಭಾರತದ ಪ್ರಜೆಗಳು ರಾಷ್ಟ್ರ ರಾಜಧಾನಿಗೆ ಬಂದಿಳಿದರು. ಇವರಲ್ಲಿ ನಾಲ್ವರು ಪಂಜಾಬ್, ಮೂವರು ಹರಿಯಾಣ ಹಾಗೂ ಮೂವರು ಉತ್ತರ ಪ್ರದೇಶಕ್ಕೆ ಸೇರಿದವರಾಗಿದ್ದಾರೆ. ಒಬ್ಬರು ಯಾವ ರಾಜ್ಯ–ಕ್ಕೆ ಸೇರಿದವರು ಎಂಬುದು ತಿಳಿದುಬಂದಿಲ್ಲ. ಪಂಜಾಬಿನವರನ್ನು ವಿಮಾನದಲ್ಲಿ ಅಮೃತಸರಕ್ಕೆ ಕಳುಹಿಸಲಾಗಿದೆ. ಪನಾಮಗೆ ಗಡಿಪಾರು ಮಾಡಲಾದ 299 ವಲಸಿಗರ ಪೈಕಿ ಭಾರತೀಯ ಪ್ರಜೆಗಳ ಸಂಖ್ಯೆ ಸ್ಪಷ್ಟವಾಗಿ ತಿಳಿದುಬಂದಿಲ್ಲ. ಇವರನ್ನು ಕಳೆದ ವಾರ ಮೂರು ವಿಮಾನಗಳಲ್ಲಿ ಪನಾಮಗೆ ಕಳುಹಿಸಲಾಗಿತ್ತು. ಸದ್ಯ ಅಲ್ಲಿರುವ 299 ದಾಖಲೆಗಳಿಲ್ಲದ ವಲಸಿಗರ ಪೈಕಿ ಕೇವಲ 171 ಮಂದಿ ಮಾತ್ರ ತಮ್ಮ ತವರು ರಾಷ್ಟ್ರಗಳಿಗೆ ತೆರಳಲು ಒಪ್ಪಿಗೆ ನೀಡಿದ್ದಾರೆ ಎನ್ನಲಾಗಿದೆ.

## ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ–ಡಾ.ಜಿ ಪರಮೇಶ್ವರ್

**ಬೆಂಗಳೂರು:** ರಾಜ್ಯ ಸರ್ಕಾರದ ನಾಯಕತ್ವ ಬದಲಾವಣೆ ಊಹಾಪೋಹಗಳ ನಡುವೆ ಗೃಹ ಸಚಿವ ಡಾ.ಜಿ ಪರಮೇಶ್ವರ್ ರಾಜೀನಾಮೆ ನೀಡುವ ಬಗ್ಗೆ ಮಾತನಾಡಿರುವುದು ಚರ್ಚೆಗೆ ಗ್ರಾಸವಾಗಿದೆ. ತುಮಕೂರಿನ ಕೊರಟಗೆರೆಯ ರಾಜೀವ್ ಭವನದಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಗೃಹ ಸಚಿವ ಪರಮೇಶ್ವರ್, ಕಾರ್ಯಕರ್ತರು ಬಯಸಿದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂದು ಹೇಳಿರುವುದು ಕುತೂಹಲ ಮೂಡಿಸಿದೆ. ಇತ್ತೀಚೆಗೆ ಕ್ಷೇತ್ರದ ಕಾರ್ಯಕರ್ತರೊಂದಿಗೆ ಬೆರೆಯಲು ಆಗುತ್ತಿಲ್ಲ. ನಿಮ್ಮ ಮನಸಿನ ಆಕಾಂಕ್ಷೆಯಂತೆ ಸ್ಪಂದಿಸಲು ಆಗುತ್ತಿಲ್ಲ. ನೀವು ಹೇಳಿದ್ರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂದು ಹೇಳಿದ್ದಾರೆ. ಇತ್ತೀಚೆಗೆ ದೆಹಲಿಗೆ ತೆರಳಿದ್ದ ಪರಮೇಶ್ವರ್, ರಾಜ್ಯದಲ್ಲಿ ಉನ್ನತ ಸ್ಥಾನದ ಬದಲಾವಣೆಯಾದರೆ ತಮ್ಮನ್ನೂ ಪರಿಗಣಿಸಬೇಕೆಂದು ಹೇಳಿದ್ದರು. ಈ ಬೆನ್ನಲ್ಲೇ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂಬ ಹೇಳಿಕೆ ನೀಡಿರುವುದು ಕುತೂಹಲ ಮೂಡಿಸಿದೆ.

## ಚಾಮುಂಡಿ ಬೆಟ್ಟದಲ್ಲಿ ಬೆಂಕಿ: ಸುಟ್ಟು ಕರಕಲಾದ 35 ಎಕರೆ ಕಾಡು!

**ಬೆಂಗಳೂರು:** ಚಾಮುಂಡಿ ಬೆಟ್ಟದಲ್ಲಿ ಮಾನವನ ಅಜಾಗರೂಕತೆಯಿಂದ ಉಂಟಾದ ಬೆಂಕಿ ಚಾಮುಂಡಿ ಬೆಟ್ಟವನ್ನು ಆವರಿಸಿದ್ದು, ದೇವಿಕೆರೆ, ಗೊಲ್ಲಹಳ್ಳಿ ಭಾಗದಲ್ಲಿ 35 ಎಕರೆ ಕಾಡು ಸಂಪೂರ್ಣ ಸುಟ್ಟು ಹೋಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಉದ್ದೇಶ ಪೂರ್ವಕವಾಗಿ ಬೆಂಕಿ ಹಾಕಿದ್ದಾರೆ. ಆ ಬಗ್ಗೆ ತನಿಖೆ ನಡೆಯುತ್ತಿದೆ ಗಾಳಿ ವೇಗ ಹಾಗೂ ಬಿಸಿಲಿನ ವಾತಾವರಣ ಇದ್ದುದರಿಂದ ಬೆಂಕಿ ಹೆಚ್ಚಿತ್ತು ನಾವು ಎಷ್ಟೇ ಪ್ರಯತ್ನ ಪಟ್ಟರೂ ಆ ಜಾಗಕ್ಕೆ ಹೋಗಲು ಸಾಧ್ಯವಾಗಲಿಲ್ಲ. ಅಗ್ನಿಶಾಮಕ ದಳ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಗಳು ಬೆಂಕಿ ನಂದಿಸಲು ಶ್ರಮ ಹಾಕಿದ್ದಾರೆ. ಸದ್ಯ ಬೆಂಕಿ ನಿಯಂತ್ರಣಕ್ಕೆ ಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಿಗಳಿಗೆ ಹಾನಿಯಾಗಿಲ್ಲ. ವಾಚರ್ ಕಣ್ಣಿಗೆ ಚಿರತೆ ಹಾಗೂ ಮರಿಗಳು ಬಿದ್ದಿದೆ. ಬೆಂಕಿ ಬಿದ್ದ ತಕ್ಷಣ ಪ್ರಾಣಿಗಳು ಒಂದು ಕಡೆಯಿಂದ ಮುಂದು ಭಾಗಕ್ಕೆ ಹೋಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಹಾಸನ: ಅಪಘಾತ, ಇಬ್ಬರು ಸಾವು!

**ಬೆಂಗಳೂರು:** ಶಿವರಾತ್ರಿಗಾಗಿ ಧರ್ಮಸ್ಥಳಕ್ಕೆ ತೆರಳುತ್ತಿದ್ದ ಪಾದಚಾರಿಗಳ ಮೇಲೆ ಖಾಸಗಿ ಬಸ್ ಹರಿದ ಪರಿಣಾಮ ಇಬ್ಬರು ಸಾವನ್ನಪ್ಪಿದ್ದು, ಓರ್ವ ಗಂಭೀರ ಗಾಯಗೊಂಡ ಘಟನೆ ಹಾಸನ ತಾಲೂಕಿನ ಕೆಂಚಟ್ಟಹಳ್ಳಿ ಬಳಿ ನಡೆದಿದೆ. ಮೃತರು ಮಂಡ್ಯ ಜಿಲ್ಲೆ, ಕೆಆರ್ ಪೇಟೆ ತಾಲೂಕಿನ ಆನಗೋಳು ಗ್ರಾಮದವರಾಗಿದ್ದು, ಘಟನೆಯಲ್ಲಿ ಗಂಭೀರ ಗಾಯಗಳಿಗೀಡಾದ ದಿನೇಶ್ಗೆ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಹಾಸನ ನಗರದ ಹೊರ ವಲಯದ ಎಚ್ ಕೆಎಸ್ ಇಂಟರನ್ಯಾಷನಲ್ ಶಾಲೆ ಬಳಿ ಘಟನೆ ನಡೆದಿದ್ದು, ಆತಂಕಗೊಂಡ ಬಸ್ ಚಾಲಕ ಪ್ರಯಾಣಿಕರನ್ನು ಬಿಟ್ಟು ಅಲ್ಲಿಂದ ಪರಾರಿಯಾಗಿದ್ದಾನೆ.

# ಕ್ಷೇತ್ರ ಮರುವಿಂಗಡಣೆಗೆ ಸಂಬಂಧಿಸಿದಂತೆ ಗೃಹ ಸಚಿವ ಅಮಿತ್ ಶಾ ಹೇಳಿಕೆ ನಂಬಿಕೆಗೆ ಅರ್ಹವಲ್ಲ

**ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮಾಧ್ಯಮ ಪ್ರಕಟಣೆ**

**ಬೆಂಗಳೂರು:** ಕ್ಷೇತ್ರ ಮರುವಿಂಗಡಣೆ ನಡೆದಾಗ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎನ್ನುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ನಂಬಿಕೆಗೆ ಅರ್ಹವಾಗಿಲ್ಲ. ಇದು ದಕ್ಷಿಣದ ರಾಜ್ಯಗಳಲ್ಲಿ ಗೊಂದಲ ಹುಟ್ಟಿಸುವ ದುರುದ್ದೇಶದಿಂದ ಕೂಡಿದೆ.

ಕೇಂದ್ರ ಗೃಹ ಸಚಿವರ ಬೀಸು ಹೇಳಿಕೆಯನ್ನು ನೋಡಿದರೆ ಅವರಿಗೆ ಒಂದೋ ಮಾಹಿತಿಯ ಕೊರತೆ ಇದೆ, ಇಲ್ಲವಾದರೆ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳಾದ ತೆಲಂಗಾಣ, ತಮಿಳುನಾಡು, ಕೇರಳ ಮತ್ತು ಆಂಧ್ರಪ್ರದೇಶಗಳಿಗೆ ಅನ್ಯಾಯ ಮಾಡುವ ದುರುದ್ದೇಶ ಇದೆ ಎಂದು ಅರ್ಥಮಾಡಿಕೊಳ್ಳಬಹುದು.

ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡಬಾರದೆಂಬ ಸದುದ್ದೇಶ ಕೇಂದ್ರ ಸರ್ಕಾರ ಹೊಂದಿರುವುದಾಗಿದ್ದರೆ ಕ್ಷೇತ್ರ ಮರುವಿಂಗಡಣೆಯನ್ನು ಜನಸಂಖ್ಯೆಯ ಅನುಪಾತದ ಆಧಾರದಲ್ಲಿ ಮಾಡಲಾಗುವುದೋ? ಇಲ್ಲವೇ ಲೋಕಸಭಾ ಸದಸ್ಯರ ಈಗಿನ ಸಂಖ್ಯೆಯ ಅನುಪಾತದಲ್ಲಿ ಮಾಡಲಾಗುವುದೋ? ಎಂಬ ಮುಖ್ಯ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಬೇಕಾಗುತ್ತದೆ. ಇತ್ತೀಚಿನ ಜನಸಂಖ್ಯೆಯ ಅನುಪಾತದಲ್ಲಿ ಕ್ಷೇತ್ರ ಮರುವಿಂಗಡಣೆ ನಡೆದರೆ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಕಟ್ಟಿಟ್ಟ ಬುತ್ತಿ ಎನ್ನುವುದು ನಮಗೆ ಸ್ಪಷ್ಟವಾಗಿ ಅರ್ಥವಾಗಿದೆ. ಈ ಅನ್ಯಾಯವನ್ನು ತಪ್ಪಿಸಲಿಕ್ಕಾಗಿಯೇ ಸಂವಿಧಾನಕ್ಕೆ ತಿದ್ದುಪಡಿ ಮಾಡಿ ಹಿಂದಿನ ಎರಡು ಕ್ಷೇತ್ರ ಮರುವಿಂಗಡಣೆಗೆ 1971ರ ಜನಗಣತಿಯನ್ನೇ ಆಧಾರವಾಗಿಟ್ಟುಕೊಳ್ಳಲಾಗಿತ್ತು. ಕಳೆದ 50 ವರ್ಷಗಳಲ್ಲಿ ದಕ್ಷಿಣದ ರಾಜ್ಯಗಳು ಪರಿಣಾಮಕಾರಿ ಕ್ರಮಗಳ ಮೂಲಕ ಜನಸಂಖ್ಯೆಯನ್ನು ನಿಯಂತ್ರಿಸಿರುವುದು ಮಾತ್ರವಲ್ಲ, ಅಭಿವೃದ್ಧಿಯ ಪಥದಲ್ಲಿ ಮುನ್ನಡೆಯುತ್ತಿವೆ. ಇದೇ ವೇಳೆ ಉತ್ತರಪ್ರದೇಶ, ಬಿಹಾರ, ಮಧ್ಯಪ್ರದೇಶದಂತಹ ಉತ್ತರದ ರಾಜ್ಯಗಳು ಜನಸಂಖ್ಯೆಯ ನಿಯಂತ್ರಣದಲ್ಲಿ ಸಂಪೂರ್ಣವಾಗಿ ವಿಫಲವಾಗಿರುವುದು ಮಾತ್ರವಲ್ಲ, ಅಭಿವೃದ್ಧಿಯ ಹಾದಿಯಲ್ಲಿ ಇನ್ನೂ ಕುಂಟುತ್ತಾ ಸಾಗಿದೆ.

ಇದರಿಂದಾಗಿ ಕ್ಷೇತ್ರ ಮರುವಿಂಗಡಣೆಯನ್ನು ಇತ್ತೀಚಿನ ಜನಗಣತಿಯಿಂದ ಪಡೆದ ಜನಸಂಖ್ಯೆಯ ಅನುಪಾತದ ಮೇಲೆ ನಡೆಸಿದರೆ ಜನಸಂಖ್ಯೆಯ ನಿಯಂತ್ರಣ ಮಾಡಿರುವ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳ ಲೋಕಸಭಾ ಕ್ಷೇತ್ರಗಳ ಸಂ–ಖ್ಯೆ ಒಂದೋ ಕಡಿಮೆಯಾಗಲಿದೆ. ಇಲ್ಲದೆ ಇದ್ದ–ರೆ ಉತ್ತರದ ರಾಜ್ಯಗಳ ಕ್ಷೇತ್ರಗಳ ಪ್ರಮಾಣದಲ್ಲಿ ಏರಿಕೆ ಆಗಲಾರದು. ಈ ಎರಡೂ ಬೆಳವಣಿಗಳಿಂದ ದಕ್ಷಿಣದ ರಾಜ್ಯಗಳೇ ನಷ್ಟ ಅನುಭವಿಸಲಿದೆ ಎನ್ನುವುದು ಗೃಹಸಚಿವ ಶಾ ಅವರಿಗೆ ತಿಳಿದಿಲ್ಲವೇ? ಕ್ಷೇತ್ರ ಮರುವಿಂಗಡಣೆಯ ಪರಿಣಾಮಗಳ ಬಗ್ಗೆ ಹಲವಾರು ಅಧ್ಯಯನಗಳು ನಡೆದಿವೆ. ಇವುಗಳ ಪ್ರಕಾರ ಇತ್ತೀಚಿನ ಜನಗಣತಿಯನ್ನು (2021 ಇಲ್ಲವೇ 2031) ಮಾತ್ರ ಆಧರಿಸಿ ಕ್ಷೇತ್ರ ಮರುವಿಂಗಡಣೆ ನಡೆದರೆ ಕರ್ನಾಟಕದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 28ರಿಂದ 26ಕ್ಕೆ ಇಳಿಯುವ ಸಾಧ್ಯತೆ ಇದೆ. ಇದೇ ರೀತಿ ಆಂಧ್ರಪ್ರದೇಶದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 42ರಿಂದ 34, ಕೇರಳದ ಸಂಖ್ಯೆ 20ರಿಂದ 12ಕ್ಕೆ, ತಮಿಳುನಾಡಿನ ಸಂಖ್ಯೆ 39ರಿಂದ 31ಕ್ಕೆ ಇಳಿಯಲಿದೆ. ಇದೇ ವೇಳೆ ಉತ್ತರಪ್ರದೇಶದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 80ರಿಂದ 91, ಬಿಹಾರದ ಸಂಖ್ಯೆ 40ರಿಂದ 50, ಮಧ್ಯಪ್ರದೇಶದ ಸಂಖ್ಯೆ 29ರಿಂದ 33ಕ್ಕೆ ಏರಿಕೆಯಾಗಲಿದೆ. ಇದನ್ನು ಅನ್ಯಾಯ ಎನ್ನದೆ ನ್ಯಾಯ ಎನ್ನಲು ಸಾಧ್ಯವೇ? ಈ ಅನ್ಯಾಯವನ್ನು ಖಂಡಿತ ಸಹಿಸಲು ಸಾಧ್ಯವಿಲ್ಲ. ಕ್ಷೇತ್ರ ಮರುವಿಂಗಡಣೆಯಿಂದ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಆಗಬಾರದೆಂದರೆ ಒಂದೋ 1971ರ ಜನಗಣತಿಯನ್ನು ಆಧಾರವಾಗಿಟ್ಟುಕೊಳ್ಳಬೇಕು. ಇಲ್ಲವಾದರೆ ಜನಸಂಖ್ಯೆಯ ಮಾನದಂಡವನ್ನು ಕೈಬಿಟ್ಟು ಈಗಿನ ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು ಅನುಪಾತಕ್ಕನುಗುಣವಾಗಿ ಹೆಚ್ಚಿಸಬೇಕು.


ಆದರೆ, ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಕ್ಷೇತ್ರ ಮರುವಿಂಗಡಣೆಗೆ ತೋರುತ್ತಿರುವ ಅತ್ಯುತ್ಸಾಹವನ್ನು ನೋಡಿದರೆ ತಮ್ಮ ಪಕ್ಷದ ಕೀರ್ತಿಪತಾಕೆ ಹಾರಿಸುವುದಕ್ಕೆ ಪ್ರತಿರೋಧ ಒಡ್ಡುತ್ತಿರುವ ದಕ್ಷಿಣದ ರಾಜ್ಯಗಳ ಜನತೆಗೆ ಶಿಕ್ಷಿಸುವ ದುರುದ್ದೇಶ ಇರುವಂತೆ ಕಾಣಿಸುತ್ತಿದೆ.

ಕರ್ನಾಟಕದ ಜನತೆ ಬಿಜೆಪಿಯನ್ನು ಬೆಂಬಲಿಸದೆ ಇದ್ದರೆ ರಾಜ್ಯಕ್ಕೆ ನರೇಂದ್ರ ಮೋದಿ ಅವರ ಆಶೀರ್ವಾದ ಇರುವುದಿಲ್ಲ ಎಂದು ವಿಧಾನಸಭಾ ಚುನಾವಣಾ ಪ್ರಚಾರದ ಕಾಲದಲ್ಲಿ ಬಿಜೆಪಿ ಅಧ್ಯಕ್ಷರಾದ ಜೆ.ಪಿ.ನಡ್ಡಾ ಅವರು ನೀಡಿದ್ದ ಎಚ್ಚರಿಕೆ ನಮ್ಮ ರಾಜ್ಯದ ವಿರುದ್ಧ ಕೇಂದ್ರ ಸರ್ಕಾರ ಕೈಗೊಳ್ಳುತ್ತಿರುವ ಒಂದೊಂದು ಕ್ರಮದಲ್ಲಿಯೂ ನಿಜವಾಗುತ್ತಿದೆ.

ತೆರಿಗೆ ಹಂಚಿಕೆ, ಜಿಎಸ್ ಟಿ ಮತ್ತು ಪ್ರಕೃತಿ ವಿಕೋಪ ಪರಿಹಾರದಲ್ಲಿ ಅನ್ಯಾಯ, ರಾಜ್ಯಕ್ಕೆ ಕಂಟಕವಾಗಿರುವ ಹೊಸ ಶಿಕ್ಷಣ ನೀತಿ ಮತ್ತು ಯುಜಿಸಿ ನಿಯಮಾವಳಿಗಳಿಗೆ ತಿದ್ದುಪಡಿಯೂ ಸೇರಿದಂತೆ ಕೇಂದ್ರ ಸರ್ಕಾರದ ಪ್ರತಿಯೊಂದು ಕ್ರಮವೂ ರಾಜ್ಯವನ್ನು ಶಿಕ್ಷಿಸುವ ದುರುದ್ದೇಶದಿಂದ ಕೂಡಿದೆ ಎನ್ನುವುದು ಸ್ಪಷ್ಟವಾಗುತ್ತಿದೆ. ಈ ಎಲ್ಲ ಅನ್ಯಾಯದ ವಿರುದ್ಧ ರಾಷ್ಟ್ರಮಟ್ಟದಲ್ಲಿ ದನಿ ಎತ್ತದಂತೆ ಮಾಡಲು ಸಂಸತ್ ನಲ್ಲಿ ದಕ್ಷಿಣದ ರಾಜ್ಯಗಳ ದನಿಯನ್ನು ಇನ್ನಷ್ಟು ಕ್ಷೀಣಗೊಳಿಸುವ ದುರುದ್ದೇಶದಿಂದ ಕೇಂದ್ರದ ಬಿಜೆಪಿ ಸರ್ಕಾರ ಈಗ ಕ್ಷೇತ್ರ ಮರುವಿಂಗಡಣೆಯ ಹೊಸ ಅಸ್ತ್ರವನ್ನು ಎತ್ತಿಕೊಂಡು ಹೊರಟಿದೆ. ರಾಜ್ಯಕ್ಕೆ ಆಗುತ್ತಿರುವ ಸರಣಿ ಅನ್ಯಾಯಗಳನ್ನು ನೋಡಿಯೂ ರಾಜ್ಯದಿಂದ ಲೋಕಸಭೆಗೆ ಆರಿಸಿಹೋಗಿರುವ ಹದಿನೇಳು ಬಿಜೆಪಿ ಮತ್ತು ಇಬ್ಬರು ಜೆಡಿಎಸ್ ಸದಸ್ಯರು ಜೀತದಾಳುಗಳಂತೆ ಬಾಯಿಗೆ ಬೀಗಹಾಕಿಕೊಂಡು ಕೂತಿದ್ದಾರೆ. ರಾಜ್ಯದ ಬಿಜೆಪಿ ನಾಯಕರು ಪರಸ್ಪರ ಕೆಸರೆರಚಾಟ ನಡೆಸುತ್ತಾ ಬೀದಿ ಜಗಳದಲ್ಲಿ ಮಗ್ನರಾಗಿದ್ದಾರೆ.

ಇಂತಹ ಸಂದರ್ಭದಲ್ಲಿ ಜಾತಿ–ಧರ್ಮ ಪಕ್ಷ–ಪಂಥಗಳ ಭೇದವನ್ನು ಮರೆತು ಕನ್ನಡಿಗರೆಲ್ಲರೂ ಒಂದಾಗಿ ಒಂದೇ ದನಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧ ದನಿ ಎತ್ತಬೇಕಾಗಿದೆ. ಈ ಅನ್ಯಾಯದ ವಿರುದ್ಧ ಸಮಗ್ರ ರೂಪದ ಹೋರಾಟವನ್ನು ನಡೆಸಲು ನೆರೆಯ ದಕ್ಷಿಣದ ರಾಜ್ಯಗಳ ಜೊತೆಯಲ್ಲಿಯೂ ಮಾತುಕತೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅನ್ಯಾಯಕ್ಕೀಡಾಗಿರುವ ಎಲ್ಲ ರಾಜ್ಯಗಳ ಜೊತೆಗೂಡಿ ಸಂಘಟಿತವಾದ ಹೋರಾಟ ನಡೆಸಲಾಗುವುದು.

## ವಿಧಾನಸೌಧದಲ್ಲಿ ಓದುಗರ, ಸಾಹಿತ್ಯಾಸಕ್ತರ ಹಬ



**ಬೆಂಗಳೂರು:** ಪುಸ್ತಕ ಮತ್ತು ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ. ಆದ್ದರಿಂದ ಓದುವ ಅಭ್ಯಾಸ ಹೆಚ್ಚಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ವಿಧಾನಸೌಧದಲ್ಲಿ ಪ್ರಪ್ರಥಮ ಬಾರಿಗೆ ಆಯೋಜಿಸಲಾಗಿರುವ ಪುಸ್ತಕ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.


ವಿಧಾನಸೌಧದಲ್ಲಿ ಓದುಗರ, ಸಾಹಿತ್ಯಾಸಕ್ತರ ಹಬ್ಬ. ಇದನ್ನು ಸಾಹಿತ್ಯಾಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕು. ಇನ್ನು ಮುಂದೆ ಪ್ರತೀ ವರ್ಷ ವಿಧಾನಸೌಧದಲ್ಲಿ ಸಾಹಿತ್ಯ, ಪುಸ್ತಕ ಹಬ್ಬ ನಡೆಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು.ಸಾಹಿತ್ಯದ ಓದು ಮನುಷ್ಯನನ್ನು ಹೆಚ್ಚೆಚ್ಚು ಮಾನವೀಯಗೊಳಿಸುತ್ತದೆ. ಪುಸ್ತಕಗಳನ್ನು ಖರೀದಿಸಿ, ಮನೆ ಮನೆಯಲ್ಲಿ ಗ್ರಂಥಾಲಯ ಮಾಡಿಕೊಳ್ಳಿ. ಮಕ್ಕಳು ಮೊಬೈಲ್ ಮತ್ತು ಡಿಜಿಟಲ್ ಚಟದಿಂದ ಹೊರಗೆ ಬಂದು ಪುಸ್ತಕಗಳನ್ನು ಓದುವ ಹವ್ಯಾಸ, ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಇದೇ ಸಂದರ್ಭದಲ್ಲಿ ಕರೆ ನೀಡಿದರು.

# ತಾವರೆಕೆರೆ ಶಿಲಾಮಠದಲ್ಲಿ ರೋಬೋಟ್ ಆನೆಯ ಲೋಕಾರ್ಪಣೆ

**ಚನ್ನಗಿರಿ:** ತಾವರೆಕೆರೆ ಶಿಲಾಮಠಕ್ಕೆ ಧಾರ್ಮಿಕ ಕಾರ್ಯಗಳನ್ನು ನಡೆಸಲು ಆನೆ ಬೇಕು ಎಂದು ಕಳೆದ 50ವರ್ಷಗಳ ಹಿಂದೆ ಅಂದಿನ ಸರ್ಕಾರಕ್ಕೆ ಮನವಿ ಮಾಡಿದ್ದೆವು ಕೆಲ ಕಾರಣಗಳಿಂದ ಆನೆ ತರಲಾಗಿರಲಿಲ್ಲ ಪ್ರಸ್ತುತವಾಗಿಕ್ಯೂಪಅಂಡ್ ಪೆಟಾ ಸಂಸ್ಥೆಯವರು ನಮ್ಮ ಮಠಕ್ಕೆರೋಬೋಟ್ಆನೆಯನ್ನುದಾನವಾಗಿ ನೀಡಿರುವುದು 50ವರ್ಷಗಳ ಮಠದ ಕನಸು ನನಸಾದಂತಿದೆಎಂದುಎಡೆಯೂರುಕ್ಷೇತ್ರದ ಶ್ರೀ ರೇಣುಕಾ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಅವರುತಾಲೂಕಿನತಾವರೆಕೆರೆಗ್ರಾಮದಲ್ಲಿರುವ ಶಿಲಾಮಠದ ಆವರಣದಲ್ಲಿಕ್ಯೂಪಅಂಡ್ ಪೆಟಾ ಸಂಸ್ಥೆಯವರು ಶ್ರೀಮಠಕ್ಕೆದಾನ ನೀಡಿದಉಮಾಮಹೇಶ್ವರ ನಾಮಾಂಕಿತರೋಬೋಟ್ಆನೆಯ ಲೋಕಾರ್ಪಣೆಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಮಾತನಾಡಿದಅವರುಭಾರತೀಯ ಸಂಸ್ಕೃತಿಯಲ್ಲಿಧಾರ್ಮಿಕ ಕಾರ್ಯಗಳಲ್ಲಿ ಆನೆಗಳನ್ನು ಬಳಸುವ ಪದ್ಧತಿಇದೆ ಎಂದರು.

ಪ್ರಸ್ತುತ ದಿನಗಳಲ್ಲಿ ಕಾಡಿನಲ್ಲಿ ಪ್ರಾಣಿಗಳೇ ಮಾಯವಾಗುತ್ತಿದ್ದು ಕಾಡುಪ್ರಾಣಿಗಳನ್ನು ಪಳಗಿಸುವುದು, ಸಾಕುವುದನ್ನು ಸರ್ಕಾರ ನಿಷೇಧಿಸಿರುವಕಾರಣಮಠಗಳಲ್ಲಿಆನೆಯನ್ನುಸಾಕಲುಸಾಧ್ಯವಾಗುವುದಿಲ್ಲಇದನ್ನುಮನಗಂಡಕ್ಯೂಪಅಂಡ್ಪೆಟಾಸಂಸ್ಥೆಯವರುರಾಜ್ಯದ 4ಮಠಗಳಿಗೆಇಂತಹರೋಬೋಟ್ಆನೆಯನ್ನುದಾನವಾಗಿನೀಡುತ್ತೀರುವ ಸಂಸ್ಥೆಯ ಸೇವಾ ಕಾರ್ಯದ ಬಗ್ಗೆ ಶ್ಲಾಘಿಸಿದರು.ಸಮಾರಂಭದಅಧ್ಯಕ್ಷತೆಯನ್ನುಕ್ಷೇತ್ರದ ಶಾಸಕ ಬಸವರಾಜವಿ.ಶಿವಗಂಗಾ ವಹಿಸಿ ಮಾತನಾಡಿ ಮನುಷ್ಯನುತನ್ನಸ್ವಾರ್ಥಕ್ಕಾಗಿಕಾಡನ್ನುನಾಶಮಾಡುತ್ತಿದ್ದುಕಾಡಿನಪ್ರಮಾಣಕಡಿಮೆಯಾದಂತೆಕಾಡಿನಲ್ಲಿವಾಸಿಸುವಪ್ರಾಣಿಗಳಸಂಖ್ಯೆಯೂ ಸಹಾ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದ್ದು ಪ್ರಾಣಿಗಳಿಗೆಹಿಂಸೆಕೊಡುವುದುಸಹಾಅಪರಾಧವಾಗಿದ್ದುಇಂತಹರೋಬೋಟ್ ಆನೆಗಳನ್ನು ಧಾರ್ಮಿಕ ಕಾರ್ಯಗಳಿಗೆ ಬಳಸಿಕೊಳ್ಳುವುದು ಉತ್ತಮವಾಗಿದೆ ಈ ರೋಬೋಟ್ ಆನೆ ನೈಜಆನೆಯನ್ನೇ ಹೋಲುವಂತಿದ್ದುದಾವಣಗೆರೆಜಿಲ್ಲೆಯಲ್ಲಿಯೇ ನನ್ನಕ್ಷೇತ್ರಕ್ಕೆಯಾಂತ್ರೀಕೃತ ಆನೆ ನಮ್ಮ ಮಠಕ್ಕೆ ಬಂದಿರುವುದು ಸಂತಸತಂದಿದೆಎಂದರು.



ಈ ಗ್ರಾಮದಲ್ಲಿ ಗೋಶಾಲೆ ತೆರೆಯಬೇಕೆನ್ನುವುದು ಶ್ರೀಗಳ ಆಶಯವಾಗಿದ್ದುಅವರ ಸಲಹೆಯಂತೆಗ್ರಾಮದಲ್ಲಿರುವ ಸರ್ಕಾರಿಜಮೀನನ್ನು ಗುರುತಿಸಿ ಮುಂದಿನ 15ದಿನಗಳಲ್ಲಿ ಗೋಶಾಲೆ ಪ್ರಾರಂಭಿಸಲು ಮುಂದಾಗುತ್ತೇನೆಎಂದರು.

ಮಾಜಿ ಶಾಸಕ ಮಾಡಾಳು ವಿರೂಪಾಕ್ಷಪ್ಪ ಮಾತನಾಡಿ ದಿನದಿಂದ ದಿನಕ್ಕೆ ಕಾಡುಪ್ರಾಣಿಗಳ ಸಂಖ್ಯೆಕ್ಷೀಣಿಸುತ್ತಿದ್ದು ಆನೆಗಳಿಗೆ ಆಗುತ್ತಿದ್ದ ಹಿಂಸೆಯನ್ನು ಮನಗಂಡ ಈ ಸಂಸ್ಥೆಯವರುರಾಜ್ಯದ ಪ್ರತಿಷ್ಠಿತ ಮಠಗಳಾದ ಸುತ್ತೂರು, ರಂಬಾಪುರಿ, ಎಡೆಯೂರು ಮತ್ತುತಾವರೆಕೆರೆ ಮಠಗಳಿಗೆ ರೋಬೋಟ್ಆನೆಯನ್ನು ನೀಡಿದ್ದು ಸಿರಿಗೆರೆ ಮಠಕ್ಕೂರೋಬೋಟ್ಆನೆಯನ್ನು ನೀಡುವಉದ್ದೇಶವನ್ನು ಹೊಂದದಿರುವುದು ಶ್ಲಾಘನೀಯಎಂದು ಹೇಳುತ್ತಾ ನೈಜಆನೆಯನ್ನೇ ಹೋಲುವಂತೆರೋಬೋಟ್ಆನೆಯನ್ನು ತಯಾರಿಸಿರುವ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದರು.

ಈ ಸಮಾರಂಭದಲ್ಲಿ ಬಿಳಕಿ ಹಿರೇಮಠದ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಶಿಲಾಮಠದ ಶ್ರೀ ಅಭಿನವ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹಾಜರಿದ್ದರು.

ಮುಖ್ಯಅತಿಥಿಗಳಾಗಿ ವಿಧಾನಪರಿಷತ್ಸದಸ್ಯಡಾ.ಧನಂಜಯಸರ್ಜಿ, ವಲಯಅರಣ್ಯಾಧಿಕಾರಿಶ್ವೇತವಿಶ್ವನಾಥ್, ಸಂಸ್ಥೆಯ ಪ್ರಮುಖರಾದ ಪ್ರೀಯಾ, ಅರುಣ್, ಅನುಷ್ಕಾ, ರೋಹನ್, ಎರಿಕಾ, ಶುಭಂ, ಶ್ರೇಯಾ, ರಾಗಿಣಿಸೇರಿದಂತೆ ಗ್ರಾಮಸ್ಥರುಮಠದಭಕ್ತಾಧಿಗಳು ಹಾಜರಿದ್ದರು.

# ಮಾಜಿ ಸಿಎಂ ಯಡಿಯೂರಪ್ಪನವರು ರೈತರ ಹಾಗೂ ಜನಪರ ಹೋರಾಟದ ಮೂಲಕವೇ ರಾಜಕೀಯಕ್ಕೆ ಬಂದ ದೀಮಂತ ನಾಯಕ : ಮತ್ತಿಮನೆ ಸುಬ್ರಹ್ಮಣ್ಯ




**ಹೊಸನಗರ:** ಕರ್ನಾಟಕದ ಮಾಜೀ ಮುಖ್ಯಮಂತ್ರಿಯಾಗಿ ಜನಸೇವೆ ರೈತರ ಪರ ಹೋರಾಟ ಹಾಗೂ ಜನಪರ ಕಾರ್ಯಕ್ರಮಗಳಿಂದ ಹೋರಾಟದ ಮೂಲಕವೇ ರಾಜಕೀಯ ಪ್ರವೇಶ ಪಡೆದವರು ಎಂದು ತಾಲ್ಲೂಕು ಬಿಜೆಪಿ ಮಂಡಲದ ಅಧ್ಯಕ್ಷ ಮತ್ತಿಮನೆ ಸುಬ್ರಹ್ಮಣ್ಯರವರು ಹೇಳಿದರು.ಹೊಸನಗರದ ಬಿಜೆಪಿ ಕಛೇರಿಯಲ್ಲಿ ಕರ್ನಾಟಕದ ಮಾಜೀ ಮುಖ್ಯಮಂತ್ರಿಯವರ ಹುಟ್ಟುಹಬ್ಬದ ಪ್ರಯುಕ್ತ ಸಹಿ ಹಂಚಿ ಹೊಸನಗರದ ಸಾರ್ವಜನಿಕ ಆಸ್ಪತ್ರೆಯ ಒಳ ಹಾಗೂ ಹೊರ ರೋಗಿಗಳಿಗೆ ಬ್ರೆಡು ಹಣ್ಣು ವಿತರಿಸಿ ಮಾತನಾಡಿದರು.ಸುಮಾರು 45ವರ್ಷಗಳ ಹಿಂದೆ ರಾಜ್ಯದಲ್ಲಿ ಯಡಿಯುರಪ್ಪನವರು ಒಬ್ಬರೇ ಶಾಸಕರಾಗಿ ವಿಧಾನಸಭೆ ಪ್ರವೇಶಿಸಿದ್ದು ಇವರ ನಾಯಕತ್ವದ ಗುಣ ಹಾಗೂ ಹೋರಾಟದ ಛಲದಿಂದ ಕರ್ನಾಟಕದಲ್ಲಿ ಬಿಜೆಪಿ ಪಕ್ಷ ಇಷ್ಟು ದೊಡ್ಡ ಮಟ್ಟದಲ್ಲಿ ಬೆಳೆದು ಅಧಿಕಾರ ನಡೆಸಲು ಸಹಕಾರಿಯಾಯಿತ್ತು ಇಂಥ ದೀಮಂತ ನಾಯಕರ ಹುಟ್ಟು ಹಬ್ಬ ಆಚರಿಸುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ ದೀರ್ಘ ಕಾಲ ಇವರಿಗೆ ದೇವರು ಆಯಸ್ಸು ನೀಡುವುದರ ಜೊತೆಗೆ ಬಿಜೆಪಿ ಪಕ್ಷ ಬೆಳೆಸುವ ಕಾರ್ಯಕ್ಕೆ ಮುಂದಾಗಲೀ ಎಂದರು. ಯಡಿಯೂರಪ್ಪನವರ ಹುಟ್ಟು ಹಬ್ಬದ ಸಂದರ್ಭದಲ್ಲಿ ಬಿಜೆಪಿ ಹಿರಿಯರಾದ ಉಮೇಶ್ ಕಂಚುಗಾರ್, ಕೆ.ವಿ. ಕೃಷ್ಣಮೂರ್ತಿ, ಮಾಜೀ ಜಿಲ್ಲಾ ಪರಿಷತ್ ಸದಸ್ಯರಾದ ಸುರೇಶ್ ಸ್ವಾಮಿರಾವ್,ಹಾಲಗದ್ದೆ ಉಮೇಶ್, ಎನ್.ಆರ್. ದೇವಾನಂದ್, ಶ್ರೀಪತಿರಾವ್, ಮಂಡಾಣಿ ಮೋಹನ, ಮಂಜುನಾಥ್ ಸಂಜೀವ, ಎಸ್. ಹೆಚ್. ನಿಂಗಮೂರ್ತಿ, ಶಕ್ತಿ ಕೇಂದ್ರದ ಅದ್ಯಕ್ಷರಾದ ಸತ್ಯನಾರಾಯಣ.ವಿ, ಕಾವೇರಿ ವಿಜಯಕುಮಾರ್, ಪಟ್ಟಣ ಪಂಚಾಯಿತಿ ಸದಸ್ಯೆ ಗಾಯಿತ್ರಿ ನಾಗರಾಜ್, ಕೃಷ್ಣವೇಣಿ, ಚಾಲುಕ್ಯ ಬಸವರಾಜ್, ಮಂಜುನಾಥ್, ಮನು ಇನ್ನೂ ಮುಂತಾದವರು ಉಪಸ್ಥಿತರಿದ್ದರು.

ಚಿತ್ರ: ಹೊಸನಗರದ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಕರ್ನಾಟಕದ ಮಾಜೀ ಮುಖ್ಯಮಂತ್ರಿ ಯಡಿಯೂರಪ್ಪನವರ ಹುಟ್ಟು ಹಬ್ಬದ ಪ್ರಯುಕ್ತ ಹಣ್ಣು ಹಂಪಲುಗಳನ್ನು ಬಿಜೆಪಿ ವತಿಯಿಂದ ಹಂಚುತ್ತಿರುವುದು.

# ನಡುರಸ್ತೆಯಲ್ಲಿ ಕಾಂಗ್ರೆಸ್ ಮುಖಂಡನ ಹತ್ಯೆ!

**ಬೆಂಗಳೂರು:** ಲೈವ್ ಬ್ಯಾಂಡ್ನಿಂದ ಹೊರ ಬರುತ್ತಿದ್ದ ಕಾಂಗ್ರೆಸ್ ಮುಖಂಡನನ್ನು ಅಡ್ಡಗಟ್ಟಿ ಭೀಕರ ಹತ್ಯೆಗೈದಿರುವ ಘಟನೆ ಬೆಂಗಳೂರಿನ ಅಶೋಕನಗರದ ಗರುಡ ಮಾಲ್ ಬಳಿ ನಡೆದಿದೆ. ಶೇಖ್ ಹೈದರ್ ಅಲಿ ಕೊಲೆಯಾದ ಕಾಂಗ್ರೆಸ್ ಮುಖಂಡ. ಹೈದರ್ ಅಲಿ ಲೈವ್ ಬ್ಯಾಂಡ್ನಿಂದ ರಾತ್ರಿ ಸ್ನೇಹಿತನ ಜೊತೆಗೆ ಬೈಕ್ನಲ್ಲಿ ಬರುತ್ತಿದ್ದ ವೇಳೆ ಆರೋಪಿಗಳು ಬೈಕ್ನಲ್ಲಿ ಹಿಂಬಾಲಿಸಿಕೊಂಡು ಬಂದು ಅಡ್ಡಗಟ್ಟಿಕೊಲೆ ಮಾಡಿದ್ದಾರೆ.

ಘಟನೆಯಲ್ಲಿ ಜೊತೆಯಲ್ಲಿದ್ದ ಸ್ನೇಹಿತನಿಗೆ ಗಾಯವಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ರಕ್ತದ ಮಡುವಲ್ಲಿ ಬಿದಿದ್ದ ಹೈದರ್ ಅವರನ್ನು ಪೊಲೀಸರು ಬೌರಿಂಗ್ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆ ವೇಳೆಗೆ ಆತ ಮೃತಪಟ್ಟಿದ್ದರು. ಘಟನೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಕೊಲೆ ಆರೋಪಿಗಳ ಪತ್ತೆಗೆ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

**Form-IV**

**STATEMENT OF OWNERSHIP**

Other Particulars about Newspaper

**KANNADA BHARATHI**

1. Place of Publication : Davanagere.
2. Periodicity of Publication : Daily
3. Printers Name : MALLIKARJUNAPPA H.G. SHIVA MEDIA HOUSE, NO.900/A2, Opp-Banashankari Temple Arch, Main Road, Shakti Nagara, Davanagere-577004. Karnataka.
4. Publishers Name : PRATHIBHA M.S. Nationality : Indian Address : NO.900/A2, Opp-Banashankari Temple Arch, Main Road, Shakti Nagara, Davanagere-577004. Karnataka.
5. Editors Name : MALLIKARJUNAPPA H.G. Nationality : Indian Address : NO.900/A2, Opp-Banashankari Temple Arch, Main Road, Shakti Nagara, Davanagere-577004. Karnataka.
6. Name and address of Individuals who own the Newspaper or Prtners of Shareholders holding of the Total cpital. : PRATHIBHA M.S. NO.900/A2, Opp-Banashankari Temple Arch, Main Road, Shakti Nagara, Davanagere-577004. Karnataka.

I, PRATHIBHA M.S. hereby declare that the particulars given above are true to the best of our knowledge and belief.

Davangere
Date: 28.02.2025

Sd/-
PRATHIBHA M.S.
Publisher.

# ಜಾತಿ ಹೆಸರಲ್ಲಿ ಹೊಡೆದಾಳುವವರ ಮಧ್ಯೆ ನಾವು ಹಿಂದೂಗಳನ್ನು ಒಗ್ಗೂಡಿಸಬೇಕು: ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್

**ಗುವಾಹಟಿ:** 'ಸಮಾಜಕ್ಕೆ ಅಗತ್ಯವಾದ 5 ಬದಲಾವಣೆಗಳಾದ ಸಾಮಾಜಿಕ ಸಾಮರಸ್ಯ, ಕುಟುಂಬ ಮೌಲ್ಯಗಳು, ಪರಿಸರ ಸಂರಕ್ಷಣೆ, ಸ್ವದೇಶಿ ಮತ್ತು ನಾಗರಿಕ ಕರ್ತವ್ಯದ ಕುರಿತು ಚರ್ಚೆ ನಡೆಯಬೇಕು' ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ. ಗುವಾಹಟಿಯಲ್ಲಿ ಆರ್‌ಎಸ್‌ಎಸ್ ಸಂಘದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಮೋಹನ್ ಭಾಗವತ್, ನಾವು ಎಲ್ಲಾ ಹಿಂದೂಗಳನ್ನು ಒಂದೇ ಎಂದು ಪರಿಗಣಿಸುತ್ತೇವೆ. ಆದರೆ ಕೆಲವರು ಜಾತಿಯ ಆಧಾರದ ಮೇಲೆ ಅವರ ನಡುವೆ ತಾರತಮ್ಯ ಮಾಡುತ್ತಾರೆ. ನಾವು ಎಲ್ಲಾ ಹಿಂದೂಗಳನ್ನು ಒಂದುಗೂಡಿಸಬೇಕು ಮತ್ತು ಅವರ ಸಂತೋಷ ಮತ್ತು ದುಃಖದಲ್ಲಿ ಅವರೊಂದಿಗೆ ಇರಬೇಕು. ಸಂಘದ ಶಾಖೆ ಇರುವಲ್ಲೆಲ್ಲಾ ನಾವು ಹಿಂದೂಗಳನ್ನು ಒಗ್ಗೂಡಿಸಲು ಕೆಲಸ ಮಾಡಿದ್ದೇವೆ. ಸಂಘ ಇರುವಲ್ಲೆಲ್ಲಾ ನಾವು ಹಿಂದೂಗಳ ನೀರು, ಭೂಮಿ, ಮನೆಗಳು, ದೇವಾಲಯಗಳು ಮತ್ತು ಸ್ಮಶಾನಗಳನ್ನು ರಕ್ಷಿಸಬೇಕು ಎಂದರು.'ನಾವು ಸ್ವದೇಶಿ ಅಭ್ಯಾಸ ಮಾಡಬೇಕು, ನಮ್ಮ ದೇಶದೊಳಗೆ ಇಂಗ್ಲಿಷ್ ಏಕೆ ಮಾತನಾಡಬೇಕು, ನಾವು ನಮ್ಮ ಮಾತೃಭಾಷೆಯನ್ನು ಮಾತನಾಡಬೇಕು' ಎಂದು ಆರ್‌ಎಸ್‌ಎಸ್ ಮುಖ್ಯಸ್ಥರು ಹೇಳಿದರು. ಅಗತ್ಯವಿರುವಲ್ಲೆಲ್ಲಾ ನಾವು ಇಂಗ್ಲಿಷ್ ಮಾತನಾಡುತ್ತೇವೆ. ಆದರೆ ನಾವು ಸ್ವದೇಶಿ ನಡವಳಿಕೆಯನ್ನು ಅಳವಡಿಸಿಕೊಳ್ಳಬೇಕು. ಕುಟುಂಬದಲ್ಲಿ ಭಾರತೀಯ ಮೌಲ್ಯಗಳನ್ನು ಉತ್ತೇಜಿಸಿದರೆ ಸಮಾಜವು ಸರಿಯಾದ ದಿಕ್ಕಿನಲ್ಲಿ ಸಾಗುತ್ತದೆ ಎಂದರು. ಮೋಹನ್ ಭಾಗವತ್ ತಮ್ಮ ಭಾಷಣದಲ್ಲಿ, 'ಸಮಾಜದಲ್ಲಿ ವಿವಿಧ ಜಾತಿಗಳು, ಧರ್ಮಗಳು, ಪ್ರದೇಶಗಳು ಮತ್ತು ಭಾಷೆಗಳ ನಡುವೆ ಸ್ನೇಹ ಮತ್ತು ಏಕತೆಯನ್ನು ಉತ್ತೇಜಿಸುವ ಮಹತ್ವವನ್ನು ಒತ್ತಿಹೇಳಬೇಕು. ಇದರಿಂದ ಸಾಮರಸ್ಯದ ಸಮಾಜವನ್ನು ಸೃಷ್ಟಿಸಬಹುದು. ನಿಮ್ಮ ಕುಟುಂಬದಲ್ಲಿ ಭಾರತೀಯ ಮೌಲ್ಯಗಳನ್ನು ಉತ್ತೇಜಿಸುವುದರಿಂದ ಸಮಾಜವು ಸರಿಯಾದ ದಿಕ್ಕಿನಲ್ಲಿ ಸಾಗಲು ದಾರಿ ಮಾಡಿಕೊಡುತ್ತದೆ. ಎಲ್ಲಾ ಹಿಂದೂ ದೇವಾಲಯಗಳು, ನೀರಿನ ಜಲಾಶಯಗಳು ಮತ್ತು ಸ್ಮಶಾನಗಳನ್ನು ಪರಸ್ಪರ ಸಹಕಾರದ ಮೂಲಕ ಬಳಸಿಕೊಳ್ಳಬೇಕು ಎಂದರು. ಪರಿಸರ ಸಂರಕ್ಷಣೆಯಲ್ಲಿ ಸಮಾಜದ ಸಾಮೂಹಿಕ ಜವಾಬ್ದಾರಿಯ ಬಗ್ಗೆಯೂ ಚರ್ಚೆ ನಡೆಯಬೇಕು. ಇದರಲ್ಲಿ ನೀರಿನ ಸಂರಕ್ಷಣೆ, ಪಾಲಿಥಿನ್ ಬಳಕೆ ಕಡಿತ ಮತ್ತು ಮರ ನೆಡುವಂತಹ ಚಟುವಟಿಕೆಗಳಿಗೆ ಪ್ರಾಮುಖ್ಯತೆ ನೀಡಬೇಕು ಎಂದು ಅವರು ಹೇಳಿದರು. ಪ್ರತಿಯೊಂದು ಭಾರತೀಯ ಕುಟುಂಬವು ತಮ್ಮ ಭಾಷೆ, ಬಟ್ಟೆ, ಆಹಾರ, ವಸತಿ ಮತ್ತು ಪ್ರಯಾಣದಲ್ಲಿ ಸ್ವದೇಶಿ ಭಾಷೆಯನ್ನು ಅಳವಡಿಸಿಕೊಳ್ಳಬೇಕು. ನಾವು ವಿದೇಶಿ ಭಾಷೆಗಳ ಬಳಕೆಯನ್ನು ಕಡಿಮೆ ಮಾಡಿ ನಮ್ಮ ಮಾತೃಭಾಷೆಯಲ್ಲಿ ಸಂವಹನವನ್ನು ಹೆಚ್ಚಿಸಬೇಕು ಎಂದು ಭಾಗವತ್ ಹೇಳಿದರು.

# ವಿದ್ಯುತ್ ಕ್ಷೇತ್ರದ ಖಾಸಗೀಕರಣ: ಜೂನ್ 26 ರಂದು ದೇಶಾದ್ಯಂತ ಪ್ರತಿಭಟನೆಗೆ ಎಐಪಿಇಎಫ್ ಕರೆ!

**ನವದೆಹಲಿ:** ವಿದ್ಯುತ್ ಕ್ಷೇತ್ರದ ಖಾಸಗೀಕರಣದ ವಿರುದ್ಧ ಅಖಿಲ ಭಾರತ ವಿದ್ಯುತ್ ಎಂಜಿನಿಯರ್ ಒಕ್ಕೂಟ (AIPEF) ಜೂನ್ 26 ರಂದು ದೇಶಾದ್ಯಂತ ಪ್ರತಿಭಟನೆಗೆ ಕರೆ ನೀಡಿದೆ.ವಿದ್ಯುತ್ ಉಪಯುಕ್ತತೆಗಳು ಮತ್ತು ಇಲಾಖೆಗಳ ಖಾಸಗೀಕರಣ ವಿರೋಧಿಸಿ ಜೂನ್ 26 ರಂದು ಪ್ರತಿಭಟನೆ ನಡೆಸಲು ವಿದ್ಯುತ್ ನೌಕರರು ಮತ್ತು ಎಂಜಿನಿಯರ್‌ಗಳ ರಾಷ್ಟ್ರೀಯ ಸಮನ್ವಯ ಸಮಿತಿ (NCCOEEE) ನಿರ್ಧರಿಸಿದೆ ಎಂದು ಂಋಕಇಈ ಭಾನುವಾರ ಹೇಳಿದೆ. ದೇಶಾದ್ಯಂತ ಪ್ರತಿಭಟನೆಯನ್ನು ಯಶಸ್ವಿಗೊಳಿಸಲು ಏಪ್ರಿಲ್ ತಿಂಗಳಲ್ಲಿ ದೇಶಾದ್ಯಂತ ಎಲ್ಲಾ ಪ್ರಾಂತ್ಯಗಳಲ್ಲಿ ಬೃಹತ್ ಸಮಾವೇಶ ನಡೆಸಲು ಓಅಅಔಇಇಇ ನಿರ್ಧರಿಸಿದೆ. ಉತ್ತರ ಪ್ರದೇಶದಲ್ಲಿ ನಡೆಯುತ್ತಿರುವ ವಿದ್ಯುತ್ ಕ್ಷೇತ್ರದ ಖಾಸಗೀಕರಣ ಪ್ರಕ್ರಿಯೆ ವಿರೋಧಿಸಿ ನಾಲ್ಕು ಬೃಹತ್ ಪ್ರತಿಭಟನಾ ರ್ಯಾಲಿಯನ್ನು ನಡೆಸಲು ತೀರ್ಮಾನಿಸಿದೆ.ಚಂಡೀಗಢದ ಲಾಭ ಗಳಿಸುವ ವಿದ್ಯುತ್ ಇಲಾಖೆಯ ಖಾಸಗೀಕರಣವನ್ನು NCCOEEE ಸಾಮಾನ್ಯ ಸಭೆಯ ನಿರ್ಣಯದಲ್ಲಿ ಟೀಕಿಸಲಾಗಿದ್ದು, ಇದು ಅತ್ಯಂತ ಆಕ್ಷೇಪಾರ್ಹ ಎಂದು ಹೇಳಿದೆ.ಸುಂಕ ಆಧಾರಿತ ಸ್ಪರ್ಧಾತ್ಮಕ ಬಿಡ್ಡಿಂಗ್ ಮತ್ತು ಆಸ್ತಿ ನಗದೀಕರಣದ ಹೆಸರಿನಲ್ಲಿ ವಿದ್ಯುತ್ ವಲಯವನ್ನು ವ್ಯಾಪಕವಾಗಿ ಖಾಸಗೀಕರಣಗೊಳಿಸಲಾಗುತ್ತಿದೆ. ವಿದ್ಯುತ್ ಉತ್ಪಾದನೆಯ ಖಾಸಗೀಕರಣದ ಶಾಪ ಸಾಮಾನ್ಯ ಜನರಿಗೆ ತಟ್ಟುತ್ತಿದೆ ಎಂದು ಎಂದು ಪ್ರಸ್ತಾವನೆಯಲ್ಲಿ ಹೇಳಲಾಗಿದೆ.




# ಅಕ್ರಮ ವಲಸೆ: ದೊಡ್ಡಣ್ಣನ ಹಾದಿಯಲ್ಲಿ ಬ್ರಿಟನ್

ಅಮೆರಿಕದ ನಂತರ ಬ್ರಿಟನ್ ಸರ್ಕಾರವು ಅಕ್ರಮ ವಲಸೆ ಮತ್ತು ಅಕ್ರಮ ವಲಸಿಗರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಿದೆ. ಅಕ್ರಮ ವಲಸಿಗರನ್ನು ಅವರ ಮೂಲದೇಶಗಳಿಗೆ ತಲುಪಿಸಲು ಸಜ್ಜಾಗಿರುವ ವಿಮಾನಗಳ ವಿಡಿಯೊಅನ್ನು ಫೆ.10ರಂದು ಅಲ್ಲಿನ ಗೃಹ ಇಲಾಖೆ ಹಂಚಿಕೊಂಡಿದೆ. ಅಕ್ರಮ ವಲಸೆಯ ವಿರುದ್ಧ ತಾನು ದೃಢ ನಿಲುವು ಹೊಂದಿರುವುದನ್ನು ಸಾಬೀತು ಪಡಿಸುವುದಕ್ಕಾಗಿ ಲೇಬರ್ ಪಾರ್ಟಿ ಸರ್ಕಾರವು ಈ ರೀತಿಮಾಡಿರುವುದಾಗಿ ಹೇಳಲಾಗುತ್ತಿದ್ದು, ಅಕ್ರಮ ವಲಸಿಗರ ವಿರುದ್ಧ ಕಠಿಣ ಕ್ರಮಗಳನ್ನು ಮುಂದುವರಿಸಲಾಗುವುದು ಎಂಬ ಸಂದೇಶವನ್ನೂ ಪ್ರಧಾನಿ ಕೀರ್ ಸ್ಟಾರ್ಮರ್ ಅವರು ಈ ಮೂಲಕ ರವಾನಿಸಿದ್ದಾರೆ.

ಜನವರಿ ತಿಂಗಳಲ್ಲಿ ಬ್ರಿಟನ್ನ ವಲಸೆ ವಿಭಾಗದ ಅಧಿಕಾರಿಗಳು ದೇಶದ 828 ಸ್ಥಳಗಳಲ್ಲಿ ದಾಳಿ ನಡೆಸಿ ಅಲ್ಲಿದ್ದವರ ವಲಸೆಯ ದಾಖಲೆಗಳನ್ನು ಪರಿಶೀಲಿಸಿದ್ದರು. ಅದರಲ್ಲಿ ಭಾರತ ಮೂಲದವರಿಗೆ ಸೇರಿದ ಒಂದು ರೆಸ್ಟೋರೆಂಟ್ ಕೂಡ ಇತ್ತು. ಈ ವೇಳೆ ಏಳು ಮಂ ದಿಯನ್ನು ಬಂಧಿಸಿ, ನಾಲ್ವರನ್ನು ವಶಕ್ಕೆ ಪಡೆದಿದ್ದರು.

ಐದು ವರ್ಷಗಳಲ್ಲಿ ಬ್ರಿಟನ್ನಲ್ಲಿ ಅಕ್ರಮ ವಲಸಿಗರ ವಿರುದ್ಧ ನಡೆಸಲಾದ ಅತಿ ದೊಡ್ಡ ಕಾರ್ಯಾಚರಣೆ ಇದು. ನಾಲ್ಕು 'ದೊಡ್ಡ ವಿಮಾನಗಳ'ಲ್ಲಿ 850ಕ್ಕೂ ಹೆಚ್ಚು ಅಕ್ರಮ ವಲಸಿಗರನ್ನು ದೇಶದಿಂದ ಹೊರ ಹಾಕಲಾಗಿದೆ ಎಂದು ಕೀರ್ ಸ್ಟಾರ್ಮರ್ ಸರ್ಕಾರ ಹೇಳಿಕೊಂಡಿದೆ. 2024ರ ಜುಲೈನಲ್ಲಿ ಸ್ಟಾರ್ಮರ್ ಸರ್ಕಾರ ಬಂದ ನಂತರ, ಇಲ್ಲಿಯವರೆಗೆ ಸುಮಾರು 19 ಸಾವಿರ ಅಕ್ರಮ ವಲಸಿಗರನ್ನು ದೇಶದಿಂದಹೊರಕ್ಕೆ ಕಳುಹಿಸಲಾಗಿದೆ ಎಂದು ಗೃಹ ಸಚಿವಾಲಯ ಹೇಳಿದೆ. 2018ರ ನಂತರ ಇಷ್ಟು ದೊಡ್ಡ ಪ್ರಮಾಣದಲ್ಲಿ ಅಕ್ರಮವಾಗಿ ನೆಲಸಿದ್ದವರನ್ನು ಅವರ ದೇಶಕ್ಕೆ ಕಳುಹಿಸಿದ್ದು ಇದೇ ಮೊದಲು.

ಒಂದು ಕಡೆ ದೇಶದೊಳಗಿನ ಅಕ್ರಮ ವಲಸಿಗರನ್ನು ಹೊರಹಾಕಲಾಗುತ್ತಿದೆ. ಇನ್ನೊಂದು ಕಡೆ, ದೇಶದೊಳಗೆ ವಲಸಿಗರು ಅಕ್ರಮವಾಗಿ ಪ್ರವೇಶಿಸುವುದನ್ನು ತಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ. ಉದ್ಯೋಗದ ಆಸೆಯೊಂದಿಗೆ ಸಣ್ಣ ದೋಣಿಗಳ ಮೂಲಕ ಬ್ರಿಟನ್ಗೆ ಬರುತ್ತಿರುವ ಕಾರ್ಮಿಕರ ವಿರುದ್ಧ ಬಿಗಿ ನಿಲುವು ತಳೆಯುವುದಾಗಿಯೂ ಪ್ರಧಾನಿ ಸ್ಟಾರ್ಮರ್ ಹೇಳಿದ್ದಾರೆ.

ಅಮೆರಿಕದ ಡೊನಾಲ್ಡ್ ಟ್ರಂಪ್ ಸರ್ಕಾರದ ಹಾದಿಯಲ್ಲಿಯೇ ಬ್ರಿಟನ್ನ ಕೀರ್ ಸ್ಟಾರ್ಮರ್ ಸರ್ಕಾರ ಕೂಡ ಅಕ್ರಮ ವಲಸಿಗರ ವಿರುದ್ಧ ತೀವ್ರವಾದ ಕ್ರಮಗಳನ್ನು ಜರುಗಿಸುತ್ತಿದೆ. ಅಮೆರಿಕದ ರೀತಿಯಲ್ಲಿಯೇ ಬ್ರಿಟನ್ನಿಂದಲೂ ಅಕ್ರಮ ವಲಸಿಗರನ್ನು ವಿಮಾನಗಳಲ್ಲಿ ದೇಶದಿಂದ ಹೊರಕ್ಕೆ ಕಳುಹಿಸಲಾಗಿದೆ. ಮತ್ತೂ ಮುಂದುವರಿದು, ಅಮೆರಿಕದ ರೀತಿಯಲ್ಲಿಯೇ ಈ ಬಗ್ಗೆ ವಿಡಿಯೊಗಳನ್ನೂ ಬಿಡುಗಡೆಮಾಡಲಾಗಿದೆ. ಬ್ರಿಟನ್ನ ಲೇಬರ್ ಪಾರ್ಟಿಯ ಸರ್ಕಾರದ ಈ ಕ್ರಮದಿಂದ ಅಲ್ಲಿರುವ ಭಾರತಮೂಲದ ಸಾವಿರಾರು ಅಕ್ರಮ ವಲಸಿಗರಲ್ಲಿ ಆತಂಕ ಸೃಷ್ಟಿಯಾಗಿದೆ

ಚುನಾವಣಾ ವಿಷಯ: ಇಂಗ್ಲಿಷ್ ಕಡಲ್ಗಾಲುವೆಯನ್ನು ಸಣ್ಣ ದೋಣಿಗಳಲ್ಲಿ ದಾಟಿ ಬ್ರಿಟನ್ ಸೇರುವವರ ಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿದೆ. ಅಮೆರಿಕಕ್ಕೆ ಕೆನಡಾ ಮತ್ತು ಮೆಕ್ಸಿಕೊಮೂಲಕ ಡಂಕಿಮಾರ್ಗಗಳಿದ್ದಂತೆ ಇದು ಬ್ರಿಟನ್ ಅನ್ನು ಅಕ್ರಮವಾಗಿ ಪ್ರವೇ ಶಿಸಲು ಬಯಸುವ ಹೆಚ್ಚಿನ ಜನ ಬಳಸುವ ದಾರಿಯಾಗಿದೆ. 2023ರಲ್ಲಿ ಬ್ರಿಟನ್ನ ಸಾರ್ವತ್ರಿಕ ಚುನಾವಣೆಯ ವೇಳೆ ಅಕ್ರಮ ವಲಸೆಯ ಪ್ರಮುಖ ವಿಷಯವಾಗಿತ್ತು. ಲೇಬರ್ ಪಾರ್ಟಿಯ ಎದುರು ಸೋಲುವ ಸೂಚನೆ ಸಿಕ್ಕಿದ್ದರಿಂದ ಆಗ ಪ್ರಧಾನಿಯಾಗಿದ್ದ ರಿಷಿ ಸುನಕ್ ಅವರು ತಮ್ಮ ಕನ್ಸರ್ವೇಟಿವ್ ಪಕ್ಷ ಮತ್ತೆ ಅಧಿಕಾರಕ್ಕೆ ಬಂದರೆ, ಇಂಗ್ಲಿಷ್ ಕಡಲ್ಗಾಲುವೆಯಮೂಲಕ ದೇಶದೊಳಗೆ ಪ್ರವೇಶಿಸುವ ದೋಣಿಗಳನ್ನು ನಿರ್ಬಂಧಿಸುವುದಾಗಿ ಭರವಸೆ ನೀಡಿದ್ದರು.

ಲೇಬರ್ ಪಾರ್ಟಿ ಅಧಿಕಾರಕ್ಕೆ ಬಂದ ನಂತರ ಅಕ್ರಮ ವಲಸಿಗರ ವಿರುದ್ಧ ಕಾರ್ಯಾ ಚರಣೆ ಚುರುಕುಗೊಂಡಿದೆ. ಸ್ಟಾರ್ಮರ್ ಸರ್ಕಾರವು ಏಳು ತಿಂಗಳಲ್ಲಿ ದೇಶದಿಂದ ಹೊರ ಹಾಕಲಾದ ಅಕ್ರಮ ವಲಸಿಗರಲ್ಲಿ ಏಷ್ಯಾ, ಯೂರೋಪ್, ಆಫ್ರಿಕಾ, ದಕ್ಷಿಣ ಅಮೆರಿಕ ರಾಷ್ಟ್ರದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇವರ ಪೈಕಿ ಬ್ಯೂಟಿ ಸಲೂನ್ಗಳಲ್ಲಿ ಕೆಲಸಮಾಡುವವರು, ಕಾರು ತೊಳೆಯುವವರು, ದಾಸ್ತಾನು ಮಳಿಗೆಗಳಲ್ಲಿ ಕೆಲಸಮಾಡುವವರು, ರೆಸ್ಟೊರೆಂಟ್ನಲ್ಲಿ ಕೆಲಸಮಾಡುವ ಕಾರ್ಮಿಕರೇ ಹೆಚ್ಚು.

ದೋಣಿಗಳಲ್ಲಿ ಹೋಗುವವರೇ ಅಧಿಕ

ಬ್ರಿಟನ್ಗೆ ಅಕ್ರಮವಾಗಿ ವಲಸೆ ಹೋಗುವವರಲ್ಲಿ ಬಹುತೇಕ ಮಂದಿ ಆಯ್ಕೆ ಮಾಡಿಕೊಳ್ಳುವಮಾರ್ಗ ಇಂಗ್ಲಿಷ್ ಕಡಲ್ಗಾಲುವೆ. ವಿವಿಧ ರಾಷ್ಟ್ರಗಳ ಜನರು ತಂಡೋಪತಂಡವಾಗಿಯುರೋಪ್ ಖಂಡದಿಂದ ಪುಟ್ಟ ಪುಟ್ಟ ದೋಣಿಗಳಲ್ಲಿ ಇಂಗ್ಲಿಷ್ ಕಡಲು ಕಾಲುವೆಯನ್ನು ದಾಟಿ ಬ್ರಿಟನ್ ಪ್ರವೇಶಿಸುತ್ತಾರೆ. 2021ರಿಂದೀಚೆಗೆ ಈ ಮಾರ್ಗದಲ್ಲಿ ಬರುತ್ತಿರುವ ಅನಧಿಕೃತ ವಲಸಿಗರ ಸಂಖ್ಯೆಯಲ್ಲಿ ಗಣನೀಯ ಹೆಚ್ಚಳವಾಗಿರುವುದನ್ನು ಬ್ರಿಟನ್ನ ಗೃಹ ಇಲಾಖೆಯ ಅಂಕಿ ಅಂಶಗಳು ಹೇಳುತ್ತವೆ.

ಅಫ್ಗಾನಿಸ್ತಾನ (2023ರಲ್ಲಿ 5,511 ಮಂದಿ), ವಿಯೆಟ್ನಾಂ (2024ರಲ್ಲಿ 3,132 ಜನರು), ಇರಾನ್ (2023ರಲ್ಲಿ 3,588 ಜನರು), ಸಿರಿಯಾ, ಸುಡಾನ್, ಎರಿಟ್ರಿಯಾ, ಇರಾಕ್, ಟರ್ಕಿ ಮುಂತಾದ ರಾಷ್ಟ್ರಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಅನಧಿಕೃತವಾಗಿ ವಲಸೆ ಹೋಗುತ್ತಾರೆ. ಇವರಲ್ಲಿ ಬಹುತೇಕರು ನಿರಾಶ್ರಿತರು.

ಮೂರು ವರ್ಷಗಳಿಂದ ಭಾರತದಿಂದಲೂ ಈ ಹಾದಿಯಲ್ಲಿ ಅಕ್ರಮವಾಗಿ ಬ್ರಿಟನ್ ಪ್ರವೇಶಿಸುತ್ತಿರುವ ಸಂಖ್ಯೆ ಜಾಸ್ತಿಯಾಗುತ್ತಿದೆ. ಉಳಿದಂತೆ, ಸಮರ್ಪಕ ದಾಖಲೆಗಳಿಲ್ಲದೆ ಅಥವಾ ನಕಲಿ ದಾಖಲೆಗಳನ್ನು ಸೃಷ್ಟಿಸಿ ವಿಮಾನದಮೂಲಕ ಬ್ರಿಟನ್ಗೆ ಬಂದಿಳಿರುವವರೂ ಇದ್ದಾರೆ. ಹಡಗುಗಳಲ್ಲಿ ಬಂದು ಬಂದರುಗಳ ಮೂಲಕ ಅಕ್ರಮವಾಗಿ ಪ್ರವೇಶಿಸುವ ವಲಸಿಗರೂ ಇದ್ದಾರೆ.

ಅಕ್ರಮವಾಗಿ ವಲಸೆಹೋದವರಲ್ಲಿ ಹಲವರು ಬ್ರಿಟನ್ನ ಆಶ್ರಯಕ್ಕಾಗಿ, ಪೌರತ್ವಕ್ಕಾಗಿ ಮನವಿಮಾಡುತ್ತಾರೆ. ಭಾರತದಿಂದ ಅಕ್ರಮವಾಗಿ ವಲಸೆ ಹೋದವರ ಪೈಕಿ 2023ರಲ್ಲಿ 4,942 ಮಂದಿ ಮನವಿಮಾಡಿದ್ದರು. ಕಳೆದ ವರ್ಷ ಸೆಪ್ಟೆಂಬರ್ ತಿಂಗಳವರೆಗೆ 4,176 ಮಂದಿ ಅರ್ಜಿ ಹಾಕಿದ್ದರು. ಇದೇ ರೀತಿ ವಿವಿಧ ರಾಷ್ಟ್ರಗಳಿಂದ ಬಂದಿರುವ ನಿರಾಶ್ರಿತರೂ ಅರ್ಜಿ ಸಲ್ಲಿಸುತ್ತಾರೆ. ಬ್ರಿಟನ್ ಸರ್ಕಾರ ಪರಿಶೀಲನೆ ನಡೆಸಿ ನಿರ್ಧಾರ ಕೈಗೊಳ್ಳುತ್ತದೆ. ಆದರೆ, ಕೆಲವು ದಿನಗಳ ಹಿಂದೆಯಷ್ಟೇ ಅಕ್ರಮವಾಗಿ ವಲಸೆ ಬಂದವರಿಗೆ ಪೌರತ್ವ ನೀಡದಿರಲು ಸರ್ಕಾರ ನಿರ್ಧರಿಸಿದೆ. ಗೃಹ ಇಲಾಖೆಯುವಾರದ ಹಿಂದೆಯಷ್ಟೇ ಹೊಸಮಾರ್ಗ ಸೂಚಿಹೊರಡಿಸಿದೆ. ಭಾರತಮೂಲದವರಿಗೆ ಸಂಕಷ್ಟ ಇತ್ತೀಚಿನ ವರ್ಷಗಳಲ್ಲಿ ಭಾರತದಿಂದ ಬ್ರಿಟನ್ಗೆ ಅಕ್ರಮ ಮಾರ್ಗಗಳ ಮೂಲಕ ಪ್ರವೇಶಿಸುವವರ ಸಂಖ್ಯೆ ಹೆಚ್ಚಾಗಿದೆ. ಅಲ್ಲಿನ ಗೃಹ ಇಲಾಖೆಯ ಅಂಕಿ ಅಂಶಗಳು ಇದನ್ನು ಹೇಳುತ್ತವೆ. 2023ರಲ್ಲಿ ಈ ಸಂಖ್ಯೆಯಲ್ಲಿ ಭಾರಿ ಹೆಚ್ಚಳ ಕಂಡುಬಂದಿತ್ತು. ಅದರ ಜತೆಗೆ, ಬ್ರಿಟನ್ನಲ್ಲಿ ಆಶ್ರಯ ಕೋರಿ ಅರ್ಜಿ ಸಲ್ಲಿಸುವ ಭಾರತ ಮೂಲದವರ ಸಂಖ್ಯೆಯಲ್ಲಿಯೂ ಹೆಚ್ಚಳವಾಗಿದೆ. 2023ರಲ್ಲಿ ಆಶ್ರಯಕ್ಕಾಗಿ ಅರ್ಜಿ ಸಲ್ಲಿಸಿದ ಭಾರತೀಯರ ಸಂಖ್ಯೆ ಮೊದಲ ಬಾರಿಗೆ 5,000 ಗಡಿ ತಲುಪಿತ್ತು.

ವಿಮಾನಗಳಲ್ಲಿ ದೇಶದಿಂದ ಹೊರಗೆ ಕಳುಹಿಸಲಾದ ಅಕ್ರಮ ವಲಸಿಗರ ಪೈಕಿಯಾವ ದೇಶದವರು ಎಷ್ಟು ಎನ್ನುವಮಾಹಿತಿ ಇನ್ನೂ ಬಹಿರಂಗಗೊಂಡಿಲ್ಲ. ಆದರೆ, ಈ ಹಿಂದಿನ ದತ್ತಾಂಶ ಪರಿಶೀಲಿಸಿದರೆ, ಬ್ರಿಟನ್ನಿಂದ ಹೊರಗೆ ಕಳಿಸಲಾದ ಆಶ್ರಯ ಕೋರಿ ಅರ್ಜಿ ಸಲ್ಲಿಸಿದ್ದ ವಲಸಿಗರ ಪೈಕಿ (2024ರ ಸೆಪ್ಟೆಂಬರ್ ಅಂತ್ಯದ ದತ್ತಾಂಶ) 118 ಮಂದಿ ಭಾರತೀಯರಿದ್ದು, ಎರಡನೇ ಸ್ಥಾನದಲ್ಲಿದ್ದಾರೆ. ಮೊದಲ ಸ್ಥಾನದಲ್ಲಿ ಅಲ್ಬೇನಿಯಾ ಮೂಲದವರಿದ್ದಾರೆ.

ಆಶ್ರಯ ಕೋರಿ ಅರ್ಜಿ ಸಲ್ಲಿಸದೇ ಇರುವವರ ವಿಭಾಗದಲ್ಲಿ ಮೊದಲ ಸ್ಥಾನದಲ್ಲಿ ರೊಮಾನಿಯಾದವರು ಇದ್ದರೆ, ಎರಡನೇ ಸ್ಥಾನದಲ್ಲಿ ಭಾರತ ಮೂಲದವರು ಇದ್ದಾರೆ (203). ಒಟ್ಟಾರೆ 321 ಮಂದಿ ಭಾರತ ಮೂಲದವರನ್ನು ಬ್ರಿಟನ್ನಿಂದ ವಾಪಸ್ ಕಳುಹಿಸಲಾಗಿದೆ.

ಜತೆಗೆ ಅಕ್ರಮವಾಗಿ ನೆಲಸಿದ್ದ, ಆಶ್ರಯ ಕೋರಿ ಅರ್ಜಿ ಸಲ್ಲಿಸದ 5,594 ಮಂದಿ ಭಾರತಮೂಲದವರು ಸ್ವಯಂ ಪ್ರೇರಿತರಾಗಿ ಬ್ರಿಟನ್ನಿಂದ ವಾಪಸ್ ಆಗಿದ್ದಾರೆ. ಇದೇ ವೇಳೆ ಆಶ್ರಯ ಕೋರಿ ಅರ್ಜಿ ಸಲ್ಲಿಸಿದ್ದ 504 ಮಂದಿ ಭಾರತೀಯರು ಬ್ರಿಟನ್ನಿಂದ ಭಾರತಕ್ಕೆ ತಾವಾಗಿಯೇ ಹಿಂದಿರುಗಿದ್ದಾರೆ.

ಅಕ್ರಮ ವಲಸಿಗರನ್ನು ಅವರ ದೇಶಗಳಿಗೆ ಕಳುಹಿಸಬೇಕು ಎಂಬ ನಿಲುವನ್ನು ಯುರೋಪ್ನ ಹಲವು ರಾಷ್ಟ್ರಗಳು ಹೊಂದಿವೆ. ಕೆಲವು ರಾಷ್ಟ್ರಗಳು ಅಕ್ರಮ ವಲಸಿಗರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತಿವೆ. ಫ್ರಾನ್ಸ್ ಕಳೆದ ವರ್ಷ 22 ಸಾವಿರ ಅನಧಿಕೃತ ವಲಸಿಗರನ್ನು ದೇಶದಿಂದ ಕಳುಹಿಸಿತ್ತು. ಐರ್ಲೆಂಡ್ ಕೂಡ ಕಳೆದ ವರ್ಷದ ನವೆಂಬರ್ ಹೊತ್ತಿಗೆ ದಾಖಲೆಗಳನ್ನು ಹೊಂದಿರದ 2000 ವಲಸಿಗರನ್ನು ಹೊರಗೆ ಹಾಕಿತ್ತು. ಇಟಲಿ ಕೂಡ ಬಿಗಿ ಕ್ರಮ ಕೈಗೊಳ್ಳುತ್ತಿದೆ.

# ದೇವಾಂಗ ಅಭಿವೃದ್ಧಿ ನಿಗಮ ಸ್ಥಾಪನೆ: ಸಿಎಂ ಜೊತೆ ಚರ್ಚೆ




**ಶಿವಮೊಗ್ಗ:** ದೇವಾಂಗ ಸಮಾಜದ ಅಭಿವೃದ್ಧಿಗಾಗಿ ಸರ್ಕಾರದಿಂದ ದೇವಾಂಗ ಅಭಿವೃದ್ಧಿ ನಿಗಮ ಸ್ಥಾಪನೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಮಾತನಾಡುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಭರವಸೆ ನೀಡಿದರು.

ಅವರು ಭಾನುವಾರ ನಗರದ ಕುವೆಂಪು ರಂಗಮಂದಿರದಲ್ಲಿ ಮಲೆನಾಡು ದೇವಾಂಗ ಸಮಾಜ (ಚಿಕ್ಕಮಗಳೂರು–ಶಿವಮೊಗ್ಗ ಜಿಲ್ಲೆ)ವು ಹಮ್ಮಿಕೊಂಡಿದ್ದ ಸುವರ್ಣ ಮಹೋತ್ಸವ ಕಟ್ಟಡದ ಉದ್ಘಾಟನೆ ಹಾಗೂ ಸುವರ್ಣ ಮಹೋತ್ಸವ ಆಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಯಾವುದೇ ನಿಗಮ, ಮಂಡಳಿ ಸ್ಥಾಪನೆ ಮಾಡಬೇಕಾದರೆ ಅದಕ್ಕೆ ಹಣ ಬೇಕು. ಹಣ ಇಲ್ಲದೆ ಅವುಗಳ ಸ್ಥಾಪನೆ ಕಷ್ಟಸಾಧ್ಯ. ದೇವಾಂಗ ಸಮಾಜದ ಪ್ರಮುಖರು ತಮ್ಮ ಮುಂದ ಇಟ್ಟ ಬೇಡಿಕೆಯನ್ನು ಮುಖ್ಯಮಂತ್ರಿಗಳ ಎದುರು ಇಟ್ಟು ಮಾತನಾಡಿ ಈಡೇರಿಸುವುದಾಗಿ ಸಚಿವರು ತಿಳಿಸಿದರು.

ಈ ಹಿಂದೆ ತಮ್ಮ ತಂದೆ ಎಸ್.ಬಂಗಾರಪ್ಪ ಮುಖ್ಯಮಂತ್ರಿಯಾಗಲು ದೇವಾಂಗ ಸಮಾಜವೇ ಕಾರಣ. ಅವರ ಸಹಕಾರ ಇಲ್ಲದಿದ್ದರೆ ತಮ್ಮ ತಂದೆ ಮುಖ್ಯಮಂತ್ರಿಯಾಗುತ್ತಿರಲಿಲ್ಲ ಎಂದ ಅವರು ಬೇಡಿಕೆ ಇದ್ದರೆ ಸಮಾಜ ಅಳಬೇಕು. ಸರ್ಕಾರ ಈಡೇರಿಸದಿದ್ದರೆ ಕಿರುಚಿ ತೆಗೆದುಕೊಳ್ಳಬೇಕು ಎಂದರು. ದೇವಾಂಗ ಸಮಾಜದ ಅಭಿವೃದ್ಧಿಗೆ ಸರ್ಕಾರದಿಂದ ಎಲ್ಲ ಸಹಕಾರ ನೀಡುವುದಾಗಿ ಸಚಿವರು ಹೇಳದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂಸದ ಬಿ.ವೈ.ರಾಘವೇಂದ್ರ, ಸರ್ಕಾರದ ಮತ್ತು ಸಮಾಜದ ನಡುವೆ ಸೇತುವೆಯಾಗಿ ಜನಪ್ರತಿನಿಧಿಗಳು ಕೆಲಸ ಮಾಡುತ್ತೇವೆ. ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ರಾಜ್ಯಗಳಲ್ಲಿರುವ ನೇಕಾರ, ದೇವಾಮಗ ಸಮಾಜದವರು ಹತ್ತಿ ಮತ್ತು ರೇಷ್ಮೆ ಬೆಳೆದು ತಮ್ಮ ವೃತ್ತಿಯನ್ನು ನಿಯತ್ತಿನಿಂದ ಮಾಡಿಕೊಂಡುಬರುತ್ತಿದ್ದಾರೆ. ತಮ್ಮ ಪರಂಪರೆಗೆ ಸೀಮಿತವಾಗದೆ ವಿಷಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬರುತ್ತಿದ್ದಾರೆ ಎಂದರು. ದೇವಾಂಗ ಸಮುದಾಯದವರು ಸ್ವಾಭಿಮಾನದ ಸಂಕೇತವಾಗಿ ಸಮಾಜ ಕಟ್ಟುವ ಕೆಲಸ ಮಾಡುತ್ತ ಬಂದಿದ್ದಾರೆ. ಇಂದಿನ ಮುಖಂಡರ ಪ್ರಯತ್ನದ ಫಲ ಮುಂದಿನ ಪೀಳಿಗೆಗೆ ದಾರಿದೀಪವಾಗಬೇಕು ಎಂದ ಅವರು ಈ ಸಮಾಜದ ಏಳ್ಗೆಗೆ ಪಕ್ಷಾತೀತವಾಗಿ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.ದೇವಾಂಗ ಸಮಾಜದ ಅಧ್ಯಕ್ಷ ಪಿ.ಆರ್.ಗಿರಿಯಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿ ಸಮುದಾಯ ಭವನ ಕಟ್ಟಡ ಅಭಿವೃದ್ಧಿಗೊಳಿಸಲು ಇನ್ನೂ ಎರಡು ಕೋಟಿ ರೂಪಾಯಿ ಅನುದಾನ ನೀಡುವಂತೆ ಸಚಿವ ಮಧು ಬಂಗಾರಪ್ಪ ಅವರನ್ನು ಕೇಳಿಕೊಂಡರು.ಹಂಪಿ ಹೇಮಕೂಟದ ಗಾಯತ್ರಿ ಪೀಠದ ಪೀಠಾಧ್ಯಕ್ಷ ಪ.ಪೂ.ಶ್ರೀ ದಯಾನಂದಪುರಿ ಮಹಾಸ್ವಾಮಿಗಳು, ಧಾರವಾಡದ ಕವಲಗೇರಿ ಶಿವಾನಂದ ಮಠದ ಶ್ರೀ ಶಿವಾನಂದ ಸ್ವಾಮೀಜಿಗಳು ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಸಾಧಕರಾದ ಅಂತಾರಾಷ್ಟ್ರೀಯ ಯೋಗಪಟು ಡಾ.ಡಿ.ನಾಗರಾಜು, ಹಿರಿಯ ಚಲನಚಿತ್ರ ನಟ ಶ್ರೀನಿವಾಸಮೂರ್ತಿ, ಇಸ್ರೋದ ನಿವೃತ್ತ ಹಿರಿಯ ವಿಜ್ಞಾನಿ ಕಲ್ಪನಾ ಅರವಿಂದ್, ಲೇಖಕ ರಮೇಶ್ ಬಾಬು ಯಾಳಗಿ, ಡಿ.ಆರ್.ಡಿ.ಒ.ಡೈರೆಕ್ಟರ್ ಜನರಲ್ (ನಿ.) ಡಾ.ಎಸ್.ಗುರುಪ್ರಸಾದ್, ಮೇಜರ್ ಎಚ್. ಆರ್.ಮಧುಸೂದನ ಅವರನ್ನು ಸನ್ಮಾನಿಸಲಾಯಿತು.

ಸಮಾಜದ ಮುಖಂಡರಾದ ಅರೇಕಲ್ ಆರ್.ಪ್ರಕಾಶ್, ಕೆ. ಆರ್.ಶ್ರೀನಿವಾಸ, ಎಸ್.ಆರ್.ಮಂಜುನಾಥ್, ಕೆ.ಟಿ.ಭಾಸ್ಕರಯ್ಯ, ಕೆ.ಎಸ್.ರಮೇಶ್, ಎಂ.ಗುರುಶಾಂತಪ್ಪ ಆಲದಹಳ್ಳಿ, ಜಿ.ಮೋಹನಮೂರ್ತಿ ಮತ್ತಿತರರಿದ್ದರು.

# ಶ್ರೀ ಆಂಜನೇಯಸ್ವಾಮಿಯ ಬ್ರಹ್ಮ ರಥೋತ್ಸವ

**ಹೊನ್ನಾಳಿ:** ತಾಲ್ಲೂಕಿನ ಮಲೇಕುಂಬಳೂರು ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವರ ಬ್ರಹ್ಮರಥೋತ್ಸವ ಭಾನುವಾರ ಸಾವಿರಾರು ಭಕ್ತಾಧಿಗಳ ನಡುವೆ ಅತ್ಯಂತ ಸಡಗರ, ಸಂಭ್ರಮದಿಂದ ಜರುಗಿತು.

ಫೆ. 19 ರಂದು ಮಹಾ ಅಭಿಷೇಕ್, ಸಂಜೆ 7.30 ಕ್ಕೆ ಕಂಕಣಧಾರಣೆ, ಧ್ವಜಾರೋಹಣ ನಡೆದಿತ್ತು. ಫೆ. 23 ರಂದು ಗಜೋತ್ಸವ ನಡೆಯಿತು. ನಂತರ ಬ್ರಹ್ಮರಥೋತ್ಸವ ನಡೆಯಿತು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಕೆ.ಆರ್. ವರದರಾಜು, ಕೆ.ಬಿ. ರಾಜಶೇಖರ್, ಬಿ.ಎಚ್. ವಾಗೀಶ್, ಬಿ. ಸುಧಾಕರ್, ಎನ್.ಎಚ್. ಕೃಷ್ಣಪ್ಪ, ಜಿ.ಪಿ. ಪ್ರಕಾಶ್, ಟಿ.ಎಸ್. ಕೃಷ್ಣಪ್ಪ, ಟಿ. ಲಕ್ಷ್ಮೀಪತಿ. ಬಿ. ಸೋಮಶೇಖರ್, ರಂಗನಾಥ್ ಸೇರಿದಂತೆ ಹಲವರು ಹಾಜರಿದ್ದರು.

ಶ್ರೀಮಾರುತಿ ಯುವಕರ ಅನ್ನದಾಸೋಹ ಟ್ರಸ್ಟ್ ಕಮಿಟಿ(ರಿ) ಗೌರವಧ್ಯಕ್ಷ ಗೋವಿಂದರಾಜು,ಅಧ್ಯಕ್ಷ ಕೆ.ಎಸ್. ರಂಗನಾಥ್‌ಸ್ವಾಮಿ,ಉಪಾಧ್ಯಕ್ಷ ಜೆ.ಶ್ರೀನಿವಾಸ್,ಕಾರ್ಯಧರ್ಶಿ ಎ.ಬಿ.ತಿಪ್ಪೇಸ್ವಾಮಿ ಪದಾಧಿಕಾರಿಗಳು ಇದ್ದರು.

ಇಂದು ಮಹಾ ರಥೋತ್ಸವ : ಫೆ. 24 ರಂದು ಶ್ರೀ ಆಂಜನೇಯಸ್ವಾಮಿಯ ಮಹಾರಥೋತ್ಸವ ಬೆಳಿಗ್ಗೆ 5 ಗಂಟೆಗೆ ಜರುಗಲಿದೆ. ನಂತರ 10.40 ರಿಂದ 11.15 ರವರೆಗೆ ಸಾಮೂಹಿಕ ವಿವಾಹ ನಡೆಯಲಿದೆ. ಸಂಜೆ 4 ಗಂಟೆಗೆ ಮುಳ್ಳೋತ್ಸವ, ಕಾರ್ಣಿಕ ಹಾಗೂ ಫೆ. 25 ರಂದು ಅವಭೃಥ ಸ್ನಾನ, ಭೂತನಸೇವೆ ನಡೆಯಲಿದೆ. ಆದ್ದರಿಂದ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ತನುಮನಧನ ಸೇವೆ ಸಲ್ಲಿಸಬೇಕು ಎಂದು ಮುಖಂಡರು ಮನವಿ ಮಾಡಿದ್ದಾರೆ.

# ತಾಯಿ ಭುವನೇಶ್ವರಿ ಪ್ರತಿಯೊಬ್ಬ ಕನ್ನಡಿಗನ ಸ್ವಾಭಿಮಾನದ ಪ್ರತೀಕ

**ಚಿಕ್ಕಮಗಳೂರು:** ಕರ್ನಾಟಕದ ಅದಿದೇವತೆ ತಾಯಿ ಭುವನೇಶ್ವರಿ ಪ್ರತಿಯೊಬ್ಬ ಕನ್ನಡಿಗನ ಸ್ವಾಭಿಮಾನದ ಪ್ರತೀಕ ಎಂದು ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ನಾಡೋಜ ಡಾಕ್ಟರ್ ಮಹೇಶ್ ಜೋಷಿ ತಿಳಿಸಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ನೂತನವಾಗಿ ಪ್ರತಿಷ್ಠಾಪಿಸಿರುವ ತಾಯಿ ಭುವನೇಶ್ವರಿಯ ಪುತ್ತಳಿಯನ್ನು ಅನಾವರಣಗೊಳಿಸಿ ಮಾತನಾಡಿದ ಅವರು ಭಾರತೀಯರಿಗೆ ಮೂರ್ತಿಪ್ರತಿಷ್ಠಾಪನೆ, ಆರಾಧನೆ ಎಂಬುದಕ್ಕೆ ಭಾವನಾತ್ಮಕ ಸಂಬಂಧವಿದೆ ಆ ಹಿನ್ನೆಲೆಯಲ್ಲಿ ನಗರದ ಕನ್ನಡ ಭವನದಲ್ಲಿ ತಾಯಿ ಭುವನೇಶ್ವರಿಯ ಪುತ್ತಳಿ ಅನಾವರಣ ಮಾಡಿರುವುದು ಹೆಮ್ಮೆ ತಂದೆ ಎಂದು ಹೇಳಿದರು.

ಕನ್ನಡದ ಮೊದಲ ಕದಂಬ ದೊರೆ ಮಯೂರವರ್ಮನ ಕಾಲದಿಂದಲೂ ತಾಯಿ ಭುವನೇಶ್ವರಿಯನ್ನು ಆರಾಧನೆಯನ್ನು ಮಾಡಲಾಗುತ್ತಿದೆ. ಅದರೊಂದಿಗೆ ವಿಜಯನಗರ ಸ್ಥಾಪನೆ ಮಾಡಲು ಸಂಕಲ್ಪಿಸಿದ ವಿದ್ಯಾರಣ್ಯರು ತಾಯಿ ಭುವನೇಶ್ವರಿಯ ಪೂಜೆಯೊಂದಿಗೆ ತಮ್ಮ ಕಾರ್ಯವನ್ನು ಆರಂಭಿಸಿದ್ದರು ಎಂದು ನೆನಪಿಸಿದರು.87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರು ಹಾಗೂ ಜಿಲ್ಲೆಯ ಹಿರಿಯ ಸಾಹಿತಿ ಗೊರೂರು ಚೆನ್ನಬಸಪ್ಪನವರು ಮಾತನಾಡಿ ಕರ್ನಾಟಕ ಏಕೀಕರಣಕ್ಕಾಗಿ ಜನ ಜಾಗೃತಿ ಮೂಡಿಸಿ ಹಗಲಿರುಳು ಶ್ರಮಿಸಿದರು ಹೋರಾಟಕ್ಕೆ ದೊರೆಯದಿದ್ದ ದಿನಗಳಲ್ಲಿ ಹೋರಾಟಕ್ಕೆ ಆಧ್ಯಾತ್ಮಿಕ ಶಕ್ತಿ ತುಂಬುವ ನಿಟ್ಟಿನಲ್ಲಿ ಕನ್ನಡದ ಕಟ್ಟಾಳು ಶಾಸಕರು ಆಗಿದ್ದ ಅಂದಾನಪ್ಪ ದೊಡ್ಡ ಮೇಟಿ ಯವರು 1953ರಲ್ಲಿ ಕಲಾವಿದರಿಂದ ಆಳೆತ್ತರದ ತಾಯಿ ಭುವನೇಶ್ವರಿಯ ಚಿತ್ರಪಟವನ್ನು ಚಿತ್ರಿಸಿ ಆ ಚಿತ್ರಣದ ಮೂಲಕ ಸ್ಫೂರ್ತಿಪಡೆದು ಹೋರಾಟವನ್ನು ಮುನ್ನಡೆಸಿದ್ದರು ಎಂದು ನೆನಪಿಸಿಕೊಂಡವರು.ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ನಗರದ ಖ್ಯಾತ ವೈದ್ಯ ಜೆ.ಪಿಕೃಷ್ಣೇಗೌಡ, ಪರಿಷತ್ತಿನ ಅಧ್ಯಕ್ಷಸೂರಿ ಶ್ರೀನಿವಾಸ್ ಮಾತನಾಡಿದರು.ಈ ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾವಿದ್ಯಾಲಯದ ಉಪಕುಲಪತಿ, ಸಿ.ಕೆ ಸುಬ್ಬರಾಯ ಉಪಸ್ಥಿತರಿದ್ದರು ವಕೀಲ ವೆಂಕಟೇಶ್ ಸ್ವಾಗತಿಸಿ, ಮಹಾಲಕ್ಷ್ಮಿನಾಗರಾಜ್, ಸುನೀತಕಿರಣ್ ಪ್ರಾರ್ಥಿಸಿದರು, ರೂಪನಾಯಕ್ ನಿರೂಪಿಸಿದರು.

# ನಟನೆಯತ್ತ ಮರಳಿದ ರವಿಚಂದ್ರನ್; 'ಪ್ಯಾರ್' ಚಿತ್ರದಲ್ಲಿ ತಂದೆ ಪಾತ್ರದಲ್ಲಿ ಮಿಂಚಲು ಸಜ್ಜು



ರವಿ ಬೋಪಣ್ಣ' ಚಿತ್ರದಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡಿದ್ದ ನಟ-ನಿರ್ದೇಶಕ ರವಿಚಂದ್ರನ್ ಮತ್ತೆ ದೊಡ್ಡ ಪರದೆಗೆ ಮರಳಲು ಸಜ್ಜಾಗಿದ್ದಾರೆ. ಈ ಬಾರಿ, ಅವರು ಸುಪ್ರೀತ್ ನಿರ್ದೇಶನದ 'ಪ್ಯಾರ್' ಚಿತ್ರದಲ್ಲಿ ತಂದೆಯ ಪಾತ್ರವನ್ನು ನಿರ್ವಹಿಸಲಿದ್ದಾರೆ. ಚಿತ್ರವನ್ನು ಎಸ್‌ಎಂ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ನಾಗಶ್ರೀ ನಿರ್ಮಿಸಿದ್ದು, ತಂದೆ ಮತ್ತು ಮಗಳ ನಡುವಿನ ಬಾಂಧವ್ಯದ ಕುರಿತು ಹೇಳುತ್ತದೆ.

ರವಿಚಂದ್ರನ್ ಜೊತೆ ಹೊಸಬರಾದ ಭರತ್ ಮತ್ತು ರಶಿಕಾ ಶೆಟ್ಟಿ ಪ್ರಮುಖ ಪಾತ್ರಗಳಲ್ಲಿ ನಟಿಸುತ್ತಿದ್ದಾರೆ. ಈ ಕುರಿತು ಮಾತನಾಡಿದ ರವಿಚಂದ್ರನ್, 'ಈ ಪಾತ್ರಕ್ಕಾಗಿ ಚಿತ್ರತಂಡ ನನ್ನನ್ನು ಸಂಪರ್ಕಿಸಿತು. ಚಿತ್ರದ ಮೇಲಿನ ಅವರ ಪ್ರೀತಿ ಮತ್ತು ಉತ್ಸಾಹವನ್ನು ಕಂಡು ನಾನು ಪ್ಯಾರ್‌ನ ಭಾಗವಾಗಲು ನಿರ್ಧರಿಸಿದೆ. ಈ ಚಿತ್ರವು ನಿಜವಾದ ಪ್ರೀತಿಯ ಸಾರ ಮತ್ತು ಅದು ಬೇಡುವ ತ್ಯಾಗಗಳನ್ನು ಸೆರೆಹಿಡಿಯುತ್ತದೆ. ನಾನು ನಾಯಕಿಯ ತಂದೆಯ ಪಾತ್ರವನ್ನು ನಿರ್ವಹಿಸುತ್ತಿದ್ದೇನೆ ಮತ್ತು ಇದು ನನ್ನ ಹೃದಯಕ್ಕೆ ಪ್ರಿಯವಾದ ಪಾತ್ರ. ಒಬ್ಬ ನಟನಾಗಿ, ನಿರ್ದೇಶಕ ಸುಪ್ರೀತ್ ಈ ಪಾತ್ರದಲ್ಲಿ ನನ್ನ ಅಭಿನಯಕ್ಕೆ ಒಂದು ರೂಪ ಕೊಡುತ್ತಾರೆ ಎಂದು ನಾನು ನಂಬುತ್ತೇನೆ' ಎಂದು ಹೇಳಿದರು.

ನಿರ್ಮಾಪಕಿ ನಾಗಶ್ರೀ ಮತನಾಡಿ, 'ನಮ್ಮ ಚಿತ್ರದಲ್ಲಿ ರವಿ ಸರ್ ಅವರಿರುವುದು ನನ್ನ ಕನಸು ನನಸಾದ ಕ್ಷಣ. ನಾನು ನಿರ್ದೇಶನದ ಆಕಾಂಕ್ಷೆಯೊಂದಿಗೆ ಚಿತ್ರರಂಗಕ್ಕೆ ಬಂದೆ ಮತ್ತು ನಮ್ಮ ಯೋಜನೆಯಲ್ಲಿ ಅಂತಹ ದೊಡ್ಡ ನಟ ಇರುವುದು ಹೆಮ್ಮೆಯ ವಿಚಾರ. ಚಿತ್ರದಲ್ಲಿನ ತಂದೆ ಪಾತ್ರವು ಖಂಡಿತವಾಗಿಯೂ ಪ್ರೇಕ್ಷಕರಿಗೆ ಇಷ್ಟವಾಗುತ್ತದೆ. ಇದು ಫ್ಯಾಮಿಲಿ ಎಂಟರ್‌ಟೈನರ್ ಚಿತ್ರವಾಗಿದೆ' ಎಂದರು.

ಪ್ಯಾರ್ ಈಗಾಗಲೇ ಶೇ 80 ರಷ್ಟು ಚಿತ್ರೀಕರಣವನ್ನು ಪೂರ್ಣಗೊಳಿಸಿದೆ. ನಿರ್ದೇಶಕ ಸುಪ್ರೀತ್ ಮಾತನಾಡಿ, 'ನಾವು ತಂದೆ ಮತ್ತು ಮಗಳ ನಡುವಿನ ಸಂಬಂಧದ ಆಳವನ್ನು ಅನ್ವೇಷಿಸಲು ಬಯಸಿದ್ದೇವೆ. ಪ್ಯಾರ್‌ನಲ್ಲಿ, ಮಗಳು ತನ್ನ ತಂದೆಯ ಮೇಲಿನ ಪ್ರೀತಿ ಮತ್ತು ತ್ಯಾಗ ಕಥೆಯ ಮೂಲವಾಗಿದೆ. ಚಿತ್ರವು ರೂಪುಗೊಳ್ಳುತ್ತಿರುವ ಬಗ್ಗೆ ನಮಗೆ ಹೆಮ್ಮೆಯಿದೆ' ಎಂದು ತಿಳಿಸಿದರು.

# ಧನ್ವೀರ್, ರೀಷ್ಮಾ ನಾಣಯ್ಯ ಅಭಿನಯದ ವಾಮನ ಬಿಡುಗಡೆಗೆ ದಿನಾಂಕ ಫಿಕ್ಸ್



ಎಲ್ಲವೂ ಅಂದುಕೊಂಡಂತೆ ಆಗಿದ್ದರೆ ಧನ್ವೀರ್ ಮತ್ತು ರೀಷ್ಮಾ ನಾಣಯ್ಯ ನಟನೆಯ ವಾಮನ ಚಿತ್ರ ಒಂದು ವರ್ಷದ ಹಿಂದೆಯೇ ಚಿತ್ರಮಂದಿರಗಳಲ್ಲಿ ತೆರೆಕಾಣಬೇಕಿತ್ತು. ಆದರೆ, ಅನಿರೀಕ್ಷಿತ ಕಾರಣಗಳಿಂದಾಗಿ ಚಿತ್ರ ಬಿಡುಗಡೆ ವಿಳಂಬವಾಗಿದ್ದು, ಕೊನೆಗೂ ಬಹುನಿರೀಕ್ಷಿತ ಚಿತ್ರ ಏಪ್ರಿಲ್ 10 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ಘೋಷಿಸಿದೆ.

ಚಿತ್ರದ 'ಮುದ್ದು ರಾಕ್ಷಸಿ' ಮತ್ತು 'ವಾ ವಾ ವಾಮನ' ಎಂಬ ಹಾಡುಗಳನ್ನು ಬಿಡುಗಡೆ ಮಾಡಿದ್ದು, ಚಿತ್ರದ ಬಗ್ಗೆ ತೀವ್ರ ಕುತೂಹಲ ಹುಟ್ಟುಹಾಕಿವೆ. ಚಿತ್ರದ ಟೀಸರ್ ಕೂಡ ಎಲ್ಲರ ಗಮನ ಸೆಳೆದಿದೆ.

ಕಥೆ, ಚಿತ್ರಕಥೆ ಮತ್ತು ಸಂಭಾಷಣೆ ಬರೆದಿರುವ ಶಂಕರ್ ರಾಮನ್ ವಾಮನ ಚಿತ್ರದ ಮೂಲಕ ನಿರ್ದೇಶಕನಾಗಿ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. ಏಕ್ ಲವ್ ಯಾ, ಯುಐ ಮತ್ತು ಬಾನದಾರಿಯಲ್ಲಿ ಚಿತ್ರಗಳ ಪಾತ್ರಗಳಿಗೆ ಹೆಸರುವಾಸಿಯಾದ ರೀಷ್ಮಾ ನಾಣಯ್ಯ ಧನ್ವೀರ್ ಜೊತೆ ಮೊದಲ ಬಾರಿಗೆ ತೆರೆ ಹಂಚಿಕೊಂಡಿದ್ದಾರೆ. ಚಿತ್ರದಲ್ಲಿ ತಾರಾ, ಸಂಪತ್ ರಾಜ್, ಆದಿತ್ಯ ಮೆನನ್, ಅವಿನಾಶ್, ಅಚ್ಯುತ್ ಕುಮಾರ್, ಪೆಟ್ರೋಲ್ ಪ್ರಸನ್ನ, ಶಿವರಾಜ್ ಕೆಆರ್ ಪೇಟೆ ಮತ್ತು ಕಾಕ್ರೋಚ್ ಸುಧಿ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಚಿತ್ರಕ್ಕೆ ಅಜನೀಶ್ ಲೋಕನಾಥ್ ಸಂಗೀತ ಸಂಯೋಜಿಸಿದ್ದು, ವಿ ನಾಗೇಂದ್ರ ಪ್ರಸಾದ್ ಸಾಹಿತ್ಯ ಬರೆದಿದ್ದಾರೆ. ಭೂಷಣ್ ಅವರು ನೃತ್ಯ ಸಂಯೋಜನೆ ಮಾಡಿದ್ದಾರೆ ಮತ್ತು ಮಹೇಂದ್ರ ಸಿಂಗ್ ಅವರ ಛಾಯಾಗ್ರಹಣವಿದೆ. ಈಕ್ವಿನಾಕ್ಸ್ ಗ್ಲೋಬಲ್ ಎಂಟರ್‌ಟೈನ್‌ಮೆಂಟ್ ಬ್ಯಾನರ್ ಅಡಿಯಲ್ಲಿ ಚೇತನ್ ಗೌಡ ಈ ಚಿತ್ರವನ್ನು ನಿರ್ಮಿಸಿದ್ದಾರೆ.

2019ರಲ್ಲಿ ಸಿಂಪಲ್ ಸುನಿ ನಿರ್ದೇಶನದ ಬಜಾರ್ ಚಿತ್ರದ ಮೂಲಕ ಧನ್ವೀರ್ ಸ್ಯಾಂಡಲ್‌ವುಡ್‌ಗೆ ಎಂಟ್ರಿ ನೀಡಿದರು. ನಂತರ ಹರಿ ಸಂತೋಷ್ ನಿರ್ದೇಶನದ 'ಬೈ ಟು ಲವ್' ಮತ್ತು ಜಯತೀರ್ಥ ನಿರ್ದೇಶನದ 'ಕೈವ' ಚಿತ್ರಗಳಲ್ಲಿ ಕಾಣಿಸಿಕೊಂಡರು. ಇದೀಗ ತಮ್ಮ ನಾಲ್ಕನೇ ಚಿತ್ರ ವಾಮನದಲ್ಲಿ ಮಾಸ್-ಆ?ಯಕ್ಷನ್ ಹೀರೋ ಆಗಿ ಧನ್ವೀರ್ ಪ್ರೇಕ್ಷಕರ ಎದುರಿಗೆ ಬರಲು ಸಜ್ಜಾಗಿದ್ದಾರೆ.

## ಹಿಂದಿಯಲ್ಲಿ ಬ್ಲಾಕ್‌ಬಸ್ಟರ್: ವಿಕ್ಕಿ ಕೌಶಲ್-ರಶ್ಮಿಕಾ ಮಂದಣ್ಣ



ನಟನೆಯ 'ಛಾವಾ' ತೆಲುಗಿನಲ್ಲಿ ಬಿಡುಗಡೆಗೆ ಸಿದ್ಧ

ವಿಕ್ಕಿ ಕೌಶಲ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ, ಲಕ್ಷ್ಮಣ್ ಉಟೇಕರ್ ನಿರ್ದೇಶನದ 'ಛಾವಾ' ಇದೀಗ ತೆಲುಗಿನಲ್ಲೂ ಬಿಡುಗಡೆಯಾಗಲು ಸಜ್ಜಾಗಿದೆ. ಹಿಂದಿಯಲ್ಲಿ ತೆರೆಕಂಡು ದೇಶದಾದ್ಯಂತ ಛಾವಾ ಭಾರಿ ಸದ್ದು ಮಾಡುತ್ತಿದೆ. ತೆಲುಗಿಗೆ ಡಬ್ ಮಾಡುವಂತೆ ಅಭಿಮಾನಿಗಳು ಸಾಮಾಜಿಕ ಮಾಧ್ಯಮದಲ್ಲಿ ನಿರ್ಮಾಪಕರನ್ನು ಒತ್ತಾಯಿಸಿದ್ದರು.

ಚಿತ್ರ ನಿರ್ಮಾಣ ಕಂಪನಿ ಮ್ಯಾಡಾಕ್ ಬುಧವಾರ ತಮ್ಮ ಇನ್‌ಸ್ಟಾಗ್ರಾಂ ಖಾತೆಯಲ್ಲಿ, ಛತ್ರಪತಿ ಸಂಭಾಜಿ ಮಹಾರಾಜ್ ಪಾತ್ರದಲ್ಲಿರುವ ವಿಕ್ಕಿ ಕೌಶಲ್ ಅವರನ್ನು ಒಳಗೊಂಡ ಪೋಸ್ಟರ್ ಅನ್ನು ಬಿಡುಗಡೆ ಮಾಡಿದ್ದು, 'ಬೇಡಿಕೆಯ ಮೇರೆಗೆ' ಚಿತ್ರವು ತೆಲುಗಿನಲ್ಲಿ ಬಿಡುಗಡೆಯಾಗಲಿದೆ ಎಂದು ಘೋಷಿಸಿದೆ.

'ಭಾರತದ ಧೈರ್ಯಶಾಲಿ ಪುತ್ರ ಛಾವಾ ಅವರ ಸಿನಿಮಾ ಇದೀಗ ಬೇಡಿಕೆಯಿಂದಾಗಿ ತೆಲುಗಿನಲ್ಲಿ ಘರ್ಜಿಸಲು ಸಿದ್ಧವಾಗಿದೆ. ಮಾರ್ಚ್ 7 ರಿಂದ ತೆಲುಗಿನಲ್ಲಿ ಛಾವಾವನ್ನು ವೀಕ್ಷಿಸಲು ಲಭ್ಯವಿರುತ್ತದೆ. ಗೀತಾ ಆರ್ಟ್ಸ್ ಡಿಸ್ಟ್ರಿಬ್ಯೂಷನ್ಸ್ ತೆಲುಗು ಆವೃತ್ತಿಯನ್ನು ವಿತರಿಸಿದೆ. ಛಾವಾ ತೆಲುಗು ಭಾಷೆಯಲ್ಲಿ ಗ್ರ್ಯಾಂಡ್ ರಿಲೀಸ್ ಆಗಲಿದೆ' ಎಂದು ಅವರು ಬರೆದಿದ್ದಾರೆ.

ಸಂಭಾಜಿ ಪಾತ್ರದಲ್ಲಿ ನಟ ವಿಕ್ಕಿ ಕೌಶಲ್ ಕಾಣಿಸಿಕೊಂಡಿದ್ದು, ಸಂಭಾಜಿ ಪತ್ನಿ ಯಶುಬಾಯಿ ಪಾತ್ರದಲ್ಲಿ ನಟಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಜೊತೆಗೆ ಅಕ್ಷಯ್ ಖನ್ನಾ, ದಿವ್ಯಾ ದತ್ತ ಮತ್ತು ವಿನೀತ್ ಕುಮಾರ್ ಸಿಂಗ್ ಕೂಡ ನಟಿಸಿದ್ದಾರೆ. ಈ ಚಿತ್ರವು ಛತ್ರಪತಿ ಸಂಭಾಜಿ ಮಹಾರಾಜ್ ಅವರ ಕಥೆಯನ್ನು ಹೇಳುತ್ತದೆ.

ಮಹಾರಾಷ್ಟ್ರವು ಈ ಚಿತ್ರಕ್ಕೆ ಪ್ರಬಲ ಮಾರುಕಟ್ಟೆಯಾಗಿ ಹೊರಹೊಮ್ಮಿದ್ದು, ರಾಜಸ್ಥಾನ ಮತ್ತು ಪಶ್ಚಿಮ ಬಂಗಾಳದಲ್ಲಿ ಕೂಡ ವಾರದ ಮಧ್ಯದಲ್ಲಿ ಹೆಚ್ಚಿನ ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಕರೆತರುವಲ್ಲಿ ಯಶಸ್ವಿಯಾಗಿದೆ.

# ಪಿನಾಕ'ದಲ್ಲಿ ಗಣೇಶ್‌ಗೆ ನಯನ್ ಸಾರಿಕಾ ಜೋಡಿ

**'ಕೃಷ್ಣಂ ಪ್ರಣಯ ಸಖಿ' ಮೂಲಕ ಸಂಚಲನ ಮೂಡಿಸಿದ್ದ ಗಣೇಶ್, ಸದ್ಯ 'ಯುವರ್ಸ್ ಸಿನ್ಸಿಯರ್ಲಿ ರಾಮ್' ಸಿನಿಮಾದ ಚಿತ್ರೀಕರಣದಲ್ಲಿದ್ದಾರೆ. ಈ ಚಿತ್ರದಲ್ಲಿ ರಮೇಶ್ ಅರವಿಂದ್ ಕೂಡ ನಟಿಸಿದ್ದಾರೆ.**

**ಇದರ ನಡುವೆ ನಟ ಗಣೇಶ್ ತಮ್ಮ ಮುಂದಿನ 'ಪಿನಾಕ' ಚಿತ್ರಕ್ಕೂ ಸಜ್ಜಾಗುತ್ತಿದ್ದಾರೆ ಎನ್ನಲಾಗಿದೆ. ಸೆಲೆಬ್ರಿಟಿ ಕ್ರಿಕೆಟ್ ಲೀಗ್‌ಗಾಗಿ ಸಣ್ಣ ವಿರಾಮ ತೆಗೆದುಕೊಳ್ಳುತ್ತಿರುವ ಗಣೇಶ್, ಮಾರ್ಚ್ ಮೊದಲ ವಾರದಲ್ಲಿ 'ಪಿನಾಕಾ' ಚಿತ್ರದ ಚಿತ್ರೀಕರಣ ಪ್ರಾರಂಭಿಸುವ ನಿರೀಕ್ಷೆಯಿದೆ.**

**ಈ ಚಿತ್ರವು ನೃತ್ಯ ಸಂಯೋಜಕ-ನಿರ್ದೇಶಕ ಧನಂಜಯ್ ಅವರ ನಿರ್ದೇಶನದ ಚೊಚ್ಚಲ ಚಿತ್ರವಾಗಿದ್ದು, ಪೀಪಲ್ ಮೀಡಿಯಾ ಫ್ಯಾಕ್ಟರಿ ಅಡಿಯಲ್ಲಿ ಟಿಜಿ ವಿಶ್ವಪ್ರಸಾದ್ ಮತ್ತು ಟಿಜಿ ಕೃತಿ ಪ್ರಸಾದ್ ನಿರ್ಮಿಸುತ್ತಿದ್ದಾರೆ.**



ಕೆಎ ಮತ್ತು ಆಯ್‌ನಂತಹ ತೆಲುಗು ಚಿತ್ರಗಳ ಮೂಲಕ ಗಮನ ಸೆಳೆದ ನಯನ ಸಾರಿಕಾ ಅವರನ್ನು ನಾಯಕಿಯಾಗಿ ಅಂತಿಮಗೊಳಿಸಲಾಗಿದೆ ಎಂದು ಸಿನಿಮಾ ಎಕ್ಸ್ ಪ್ರೆಸ್ ಗೆ ತಿಳಿದುಬಂದಿದೆ. ಪಿನಾಕಾ ಅವರ ಕನ್ನಡ ಚೊಚ್ಚಲ ಚಿತ್ರವಾಗಲಿದೆ. ಆದರೆ ತಂಡದಿಂದ ಅಧಿಕೃತ ದೃಢೀಕರಣಕ್ಕಾಗಿ ಕಾಯಲಾಗುತ್ತಿದೆ. ನಯನ ನಂದ ಕಿಶೋರ್ ನಿರ್ದೇಶನದ ಮೋಹನ್ ಲಾಲ್ ಅಭಿನಯದ ಪ್ಯಾನ್-ಇಂಡಿಯಾ ಚಿತ್ರ 'ವೃಷಭ'ದಲ್ಲೂ ನಟಿಸಿದ್ದಾರೆ.

ಪಿನಾಕ ಚಿತ್ರದ ನಿರ್ಮಾಪಕರು ಇತ್ತೀಚೆಗೆ ಬಿಡುಗಡೆಯಾದ ಟೈಟಲ್ ಟೀಸರ್ ಮೂಲಕ ಈಗಾಗಲೇ ಸಂಚಲನ ಮೂಡಿಸಿದ್ದಾರೆ, ಇದು ಗಣೇಶ್ ಅವರ ಹಿಂದೆಂದೂ ನೋಡಿರದ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ.

ನಿರ್ದೇಶಕ ಮತ್ತು ನಿರ್ಮಾಣ ಸಂಸ್ಥೆಯೊಂದಿಗೆ ಗಣೇಶ್ ಮೊದಲ ಬಾರಿಗೆ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಈ ಚಿತ್ರವು ಕನ್ನಡ ಮತ್ತು ತೆಲುಗು ಎರಡರಲ್ಲೂ ನಿರ್ಮಾಣವಾಗಲಿದೆ. ತಮ್ಮ ಸಾಮಾನ್ಯ ಪ್ರಣಯ ನಾಯಕನ ಚಿತ್ರಗಳಿಗಿಂತ ಪಿನಾಕ ಸಂಪೂರ್ಣವಾಗಿ ಭಿನ್ನವಾಗಿರುತ್ತದೆ ಎಂದು ಗಣೇಶ್ ಈ ಹಿಂದೆ ಹೇಳಿದರು.

ಪಾತ್ರವರ್ಗ ಮತ್ತು ತಾಂತ್ರಿಕ ತಂಡದ ಕುರಿತು ಹೆಚ್ಚಿನ ಮಾಹಿತಿ ಇನ್ನೂ ಬಹಿರಂಗವಾಗಿಲ್ಲ.

ಈ ಚಿತ್ರಕ್ಕೆ ಹರಿ ಕೆ ವೇದಾಂತಮ್ ಅವರ ಛಾಯಾಗ್ರಹಣ ಮತ್ತು ಸಂತೋಷ್ ಪಾಂಚಾಲ್ ಅವರ ಕಲಾ ನಿರ್ದೇಶನವಿದೆ ನಿರ್ಮಾಣವಾಗಲಿದೆ. ತಮ್ಮ ಸಾಮಾನ್ಯ ಪ್ರಣಯ ನಾಯಕನ ಚಿತ್ರಗಳಿಗಿಂತ ಪಿನಾಕ ಸಂಪೂರ್ಣವಾಗಿ ಭಿನ್ನವಾಗಿರುತ್ತದೆ ಎಂದು ಗಣೇಶ್ ಈ ಹಿಂದೆ ಹೇಳಿದರು. ಪಾತ್ರವರ್ಗ ಮತ್ತು ತಾಂತ್ರಿಕ ತಂಡದ ಕುರಿತು ಹೆಚ್ಚಿನ ಮಾಹಿತಿ ಇನ್ನೂ ಬಹಿರಂಗವಾಗಿಲ್ಲ. ಈ ಚಿತ್ರಕ್ಕೆ ಹರಿ ಕೆ ವೇದಾಂತಮ್ ಅವರ ಛಾಯಾಗ್ರಹಣ ಮತ್ತು ಸಂತೋಷ್ ಪಾಂಚಾಲ್ ಅವರ ಕಲಾ ನಿರ್ದೇಶನವಿದೆ.

ಚಿತ್ರದಲ್ಲಿ ಶ್ರೀಧರ್, ಗೌತಮ್, ಸೋಮಶೇಖರ್,

ವಿಹಾನ್ ಕೃಷ್ಣ, ಶೋಭರಾಜ್, ವತ್ಸಲಾ ಮೋಹನ್,

ಸಿದ್ಲಿಂಗು ಶ್ರೀಧರ್ ಮತ್ತು ಅರುಣ್ ರಾಥೋಡ್ ಸೇರಿದಂತೆ ಅನೇಕ ಕಲಾವಿದರು ನಟಿಸಿದ್ದಾರೆ. ರಾಕ್ಷಸ ಸಿನಿಮಾದ ಶೇ 80 ರಷ್ಟು ಚಿತ್ರೀಕರಣ ರಾಮೋಜಿ ಫಿಲಂ ಸಿಟಿಯಲ್ಲಿ ನಡೆದಿದ್ದು, ಚಿತ್ರದ ಇನ್ನುಳಿದ ಭಾಗವನ್ನು ಬೆಂಗಳೂರಿನಲ್ಲಿ ಚಿತ್ರೀಕರಣ ನಡೆಸಲಾಗಿದೆ.

## ಧರ್ಮ ಕೀರ್ತಿರಾಜ್ ನಟನೆಯ 'ಅಮರಾವತಿ ಪೊಲೀಸ್ ಸ್ಟೇಷನ್' ಬಿಡುಗಡೆಗೆ ಸಿದ್ಧ



ಬಿಗ್ ಬಾಸ್ ಸೀಸನ್ 11 ರ ಸ್ಪರ್ಧಿ ಧರ್ಮ ಕೀರ್ತಿರಾಜ್ ಪೊಲೀಸ್ ಅಧಿಕಾರಿಯಾಗಿ ನಟಿಸಿರುವ ಮುಂಬರುವ ಸಸ್ಪೆನ್ಸ್ ಥ್ರಿಲ್ಲರ್ ಅಮರಾವತಿ ಪೊಲೀಸ್ ಠಾಣೆ ಬಿಡುಗಡೆಗೆ ಸಿದ್ಧವಾಗಿದೆ. ಚಿತ್ರದಲ್ಲಿ ಗುರುರಾಜ್ ಜಗ್ಗೇಶ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದು, ವೇದ್ವಿಕಾ ಸೋನಿ ನಾಯಕಿಯಾಗಿ ನಟಿಸಿದ್ದಾರೆ. ಕಾಲ್ಪನಿಕ ಕರಾವಳಿ ಪಟ್ಟಣವಾದ ಅಮರಾವತಿಯಲ್ಲಿ ಚಿತ್ರ ನಡೆಯಲಿದೆ. ಚಿತ್ರದ ಟೀಸರ್ ಅನ್ನು ಇತ್ತೀಚೆಗಷ್ಟೇ ಬಿಡುಗಡೆ ಮಾಡಿದ್ದು, ನಿಗೂಢ ಕಣ್ಮರೆಗಳು, ಆಘಾತಕಾರಿ ಕೊಲೆಗಳು ಮತ್ತು ಅನಿರೀಕ್ಷಿತ ತಿರುವುಗಳ ಒಂದು ಝಲಕ್ ಅನ್ನು ನೀಡುತ್ತದೆ.

ಪುನೀತ್ ಅರಸೀಕೆರೆ ಅವರ ಕಥೆ, ಚಿತ್ರಕಥೆ ಮತ್ತು ನಿರ್ದೇಶನ ಚಿತ್ರಕ್ಕಿದೆ. ಚಿತ್ರವು ಗ್ರಾಮದ ಮುಖ್ಯಸ್ಥನ ನಾಪತ್ತೆಯ ಸುತ್ತ ಸುತ್ತುತ್ತದೆ. ನಂತರ ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸ್ ಅಧಿಕಾರಿ ಕಣ್ಮರೆಯಾಗುತ್ತಾರೆ. ಈ ರಹಸ್ಯವು ಬಯಲಾಗುತ್ತಿದ್ದಂತೆ, ನಾಗಾ ಸಾಧುಗಳೊಂದಿಗಿನ ಸಂಪರ್ಕವು ಬೆಳಕಿಗೆ ಬರುತ್ತದೆ.

ಧರ್ಮ ಕೀರ್ತಿರಾಜ್ ಮಾತನಾಡಿ, 'ನಾನು ಅಂಡರ್ ಕಾಪ್ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಸಾಹಸ ದೃಶ್ಯಗಳು ಅನನ್ಯವಾಗಿವೆ, ಚಿತ್ರದಲ್ಲಿ ಪುನೀತ್ ಅವರ ಕಥೆಯು ಅಸಾಧಾರಣವಾಗಿದೆ' ಎಂದರು.

ಚಿತ್ರದ ಶೇ 90 ರಷ್ಟು ಚಿತ್ರೀಕರಣ ಮುಗಿದಿದ್ದು, ಇದನ್ನು ಕೇವಲ 36 ದಿನಗಳಲ್ಲಿ ಮುಗಿಸಲಾಗಿದೆ. ಕ್ಲೈಮ್ಯಾಕ್ಸ್ ಮತ್ತು ಹಾಡಿನ ಸೀಕ್ವೆನ್ಸ್ ಮಾತ್ರ ಗೋವಾ ಮತ್ತು ಹಿಂದೂಪುರದಲ್ಲಿ ಚಿತ್ರೀಕರಣಗೊಳ್ಳಲಿದೆ ಎಂದು ನಿರ್ದೇಶಕ ಪುನೀತ್ ಅರಸೀಕೆರೆ ಬಹಿರಂಗಪಡಿಸಿದ್ದಾರೆ. ಮಾರ್ಚ್ 17 ರಂದು ಪುನೀತ್ ರಾಜ್‌ಕುಮಾರ್ ಅವರ ಜನ್ಮದಿನದಂದು ರೋಮ್ಯಾಂಟಿಕ್ ಟ್ರ್ಯಾಕ್ ಬಿಡುಗಡೆಯಾಗಲಿದೆ. ಮಾರ್ಚ್ ಅಂತ್ಯದಲ್ಲಿ ಅಥವಾ ಏಪ್ರಿಲ್ ಆರಂಭದಲ್ಲಿ ಚಿತ್ರ ತೆರೆಗೆ ಬರುವ ನಿರೀಕ್ಷೆಯಿದೆ.

# ಕ್ಷೇತ್ರಪತಿ ಸಿನಿಮಾ ಕಿರುತೆರೆಯಲ್ಲಿ ವರ್ಲ್ಡ್ ಪ್ರೀಮಿಯರ್!



ನಮ್ಮ ಮಣ್ಣಿನ ಹೆಮ್ಮೆಯ ಚಿತ್ರ ಎಂದು ಕನ್ನಡ ಚಿತ್ರರಸಿಕರು ಹೆಮ್ಮೆಯಿಂದ ಹೇಳಬಹುದಾದ ಚಿತ್ರ ಕ್ಷೇತ್ರಪತಿ. ಒಂದು ಗಂಭೀರ ಮತ್ತು ಜನಪರ ಅಂಶಗಳನ್ನು ಮನರಂಜನಾತ್ಮಕವಾಗಿ ಬೆರೆಸಿ ಜನರ ಮನ ಗೆದ್ದಿದೆ. ಇದು ನಟ ನವೀನ್ ಶಂಕರ್ ಗೆ ಹೊಸ ಇಮೇಜ್ ಗಳಿಸಿ ಕೊಟ್ಟ ಚಿತ್ರ. ಕೆ ಜಿ ಎಫ್ ಖ್ಯಾತಿಯ ಅರ್ಚನಾ ಜೋಯಿಸ್, ಅಚ್ಯುತ್ ಕುಮಾರ್ ತಾರಾಗಣದ ಈ ಚಿತ್ರಕ್ಕೆ ರವಿ ಬಸ್ರೂರ್ ಸಂಗೀತವಿದೆ.

ಕ್ಷೇತ್ರಪತಿ ಸಿನಿಮಾ ಕಲರ್ಸ್ ಕನ್ನಡದಲ್ಲಿ ಶಿವರಾತ್ರಿಯಂದು ಮಧ್ಯಾಹ್ನ ಎರಡು ಗಂಟೆಗೆ ಪ್ರಸಾರವಾಗಲಿದೆ.

ಶ್ರೀಕಾಂತ ಕಟಗಿ ನಿರ್ದೇಶನದ ಕ್ಷೇತ್ರಪತಿ ರೈತರ ಸಮಸ್ಯೆಗಳ ಬಗ್ಗೆ ಸಮಾಜದ ಗಮನ ಸೆಳೆದ ಸಿನಿಮಾ. ರೈತ ಪರ ಸಿನಿಮಾ ಎಂದು ವಿಮರ್ಶಕರಿಂದ ಮನ್ನಣೆ ಪಡೆದ, ಈ ಚಿತ್ರ ಹಲವಾರು ಪ್ರಶ್ನೆಗಳನ್ನು ಹುಟ್ಟು ಹಾಕುತ್ತದೆ.

"ರೈತ ನಮ್ಮ ದೇಶದ ಬೆನ್ನೆಲುಬು, ಲಿವರ್, ಕಿಡ್ನಿ, ಜಠರ ಎಂದೆಲ್ಲ ಹೇಳಿ ನಮ್ಮನ್ನು ಉಬ್ಬಿಸಿ ಬಿಟ್ಟಿದ್ದಾರೆ. ಆದರೆ ನಮಗೇನು ಬೇಕು ಎಂದು ಈವರೆಗೆ ಯಾರಾದ್ರೂ ನಮ್ಮನ್ನು ಕೇಳಿದ್ದರೇನು?' ಎನ್ನುವುದು ಚಿತ್ರದ ನಾಯಕ ಬಸವ ಕೇಳುವ ಪ್ರಶ್ನೆ.

ಕಥಾನಾಯಕ ಬಸವ ಇಂಜಿನಿಯರಿಂಗ್ ವಿದ್ಯಾರ್ಥಿ. ಅಮೇರಿಕಾದಲ್ಲಿ ಬದುಕು ಕಟ್ಟಿಕೊಳ್ಳುವ ಮಹದಾಸೆ ಹೊಂದಿರುವ ಜಾಣ ತರುಣ. ತಂದೆಯ ಸಾವಿನಿಂದ ಬಸವ ಹಳ್ಳಿಗೆ ಬರುವಂತಾಗುತ್ತದೆ.

ಈರುಳ್ಳಿ ಬೆಲೆ ಕುಸಿತದಿಂದ ಕಂಗೆಟ್ಟು, ಬ್ಯಾಂಕ್ ಸಾಲದ ಶೂಲಕ್ಕೆ ಅಂಜಿ, ಬಸವನ ತಂದೆ ಉರುಳು ಹಾಕಿಕೊಂಡಿದ್ದಾನೆ. ಅಪ್ಪನ ಸಂಸ್ಕಾರಕ್ಕೆ ಬರುವ ಬಸವ ಊರಿನಲ್ಲಿಯೇ ಉಳಿಯಲು ನಿಶ್ಚಯಿಸುತ್ತಾನೆ. ಇಂಜಿನಿಯರಿಂಗ್ ಬಿಟ್ಟು ಕೃಷಿಯಲ್ಲಿಯೇ ತೊಡಗುತ್ತೇನೆ ಅನ್ನುವ ಕಥಾನಾಯಕನ ನಿರ್ಧಾರವನ್ನು ಮಲತಾಯಿಯೂ ವಿರೋಧಿಸುತ್ತಾಳೆ. ಅಪ್ಪನ ಸಾವಿಗೆ ಬಂದಿರುವ ಪರಿಹಾರ ಧನ ಬಳಸಿಕೊಂಡು ಇಂಜಿನಿಯರಿಂಗ್ ಮುಗಿಸಿ ಒಳ್ಳೆಯ ಕೆಲಸ ಹಿಡಿದು ತಂಗಿಯ ಮದುವೆ ಮಾಡಿದ ನಂತರ ಏನಾದರೂ ಮಾಡಿಕೊ ಎನ್ನುವುದು ತಾಯಿಯ ಒತ್ತಾಯ. ಬಸವ ಯಾರ ಮಾತಿಗೂ ಕಿವಿಗೊಡದೆ ಕಾಲೇಜು ತೊರೆದು ಮಣ್ಣಿನ ಅಂಗಳಕ್ಕೆ ಇಳಿಯುತ್ತಾನೆ.

ಅಲ್ಲಿಂದ ಕತೆ ಪ್ರತಿಕ್ಷಣಕ್ಕೂ ಕುತೂಹಲ ಹೆಚ್ಚಿಸುತ್ತ ಭರಪೂರ ಮನರಂಜನೆ ನೀಡುತ್ತ ಸಾಗುತ್ತದೆ.

ಉತ್ತರ ಕರ್ನಾಟಕದ ಜವಾರಿ ಭಾಷೆಯ ಸಿನೆಮಾ ಯಾವ ಹಂತದಲ್ಲೂ ಕುಸಿಯದೆ, ತೀವ್ರತೆ ಕಳೆದುಕೊಳ್ಳದೆ ಪ್ರೇಕ್ಷಕರನ್ನು ಕೊನೆಯವರೆಗೂ ಹಿಡಿದಿಟ್ಟುಕೊಳ್ಳುವ ಕ್ಷೇತ್ರಪತಿ", ಮಹಾಮನರಂಜನೆ ಅನ್ನುವುದು ಉತ್ಪ್ರೇಕ್ಷೆಯಲ್ಲ.

# ತೆರೆಗೆ ಬರಲಿದೆ 'ಶಭಾಷ್ ಬಡ್ಡಿಮಗ್ನೆ

## 'ರೊಮ್ಯಾಂಟಿಕ್ ಲುಕ್‌ನಲ್ಲಿ ಪ್ರಮೋದ್ ಶೆಟ್ಟಿ ಮಿಂಚಿಂಗ್



ನಟ ಪ್ರಮೋದ್ ಶೆಟ್ಟಿ ಇದೀಗ ಪೊಲೀಸ್ ಆಗಿ ಕಾಣಿಸಿಕೊಂಡಿದ್ದರೂ, ಇದೀಗ ಹೊಸ ಅವತಾರದಲ್ಲಿ ಪ್ರೇಕ್ಷಕರ ಎದುರು ಬರಲು ಸಜ್ಜಾಗಿದ್ದಾರೆ. ಬಿಎಸ್ ರಾಜಶೇಖರ್ ನಿರ್ದೇಶನದ 'ಶಭಾಷ್ ಬಡ್ಡಿಮಗ್ನೆ' ಚಿತ್ರದಲ್ಲಿ ರೊಮ್ಯಾಂಟಿಕ್ ಲುಕ್‌ನಲ್ಲಿ ನಟಿಸಿದ್ದಾರೆ. ಚಿತ್ರವು ಫೆಬ್ರುವರಿ 28ರಂದು ಚಿತ್ರವು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಗೆ ಸಿದ್ಧವಾಗಿದೆ.

ಚಿತ್ರವು ತನ್ನ ಗೆಳೆಯರ ದೃಷ್ಟಿಯಲ್ಲಿ ಅಸಮರ್ಥನಾಗಿರುವ ಪೊಲೀಸ್ ಅಧಿಕಾರಿಯ ಕಥೆಯನ್ನು ಹೇಳುತ್ತದೆ. ಆದರೆ, ಅಂತಿಮವಾಗಿ ಒಂದು ಪ್ರಮುಖ ಪ್ರಕರಣವನ್ನು ಪರಿಹರಿಸುವಲ್ಲಿ ಕೊನೆಗೊಳ್ಳುತ್ತದೆ.

'ನಾನು ವಿವಿಧ ಪೊಲೀಸ್ ಪಾತ್ರಗಳನ್ನು ನಿರ್ವಹಿಸಿದ್ದೇನೆ. ಆದರೆ, ಈ ಚಿತ್ರದಲ್ಲಿ ಸೋಂಬೇರಿ ಪೊಲೀಸ್ ಅಧಿಕಾರಿಯಾಗಿ ನಟಿಸುವುದು ಸಂಪೂರ್ಣವಾಗಿ ಹೊಸದು ಮತ್ತು ಸವಾಲಿನ ಸಂಗತಿಯಾಗಿದೆ. ಸ್ಕ್ರಿಪ್ಟ್‌ನಲ್ಲಿರುವ ಕುತೂಹಲಕಾರಿ ಮತ್ತು ಹಾಸ್ಯಮಯ ಅಂಶಗಳ ಬಗ್ಗೆ ನಾನು ಉತ್ಸುಕನಾಗಿದ್ದೆ ಮತ್ತು ಈ ಪಾತ್ರ ಬೇಡ ಎಂದು ಹೇಳಲು ಸಾಧ್ಯವಾಗಲಿಲ್ಲ' ಎಂದು ಹೇಳುತ್ತಾರೆ ಪ್ರಮೋದ್.

'ಇಡೀ ಚಿತ್ರವು ಪೊಲೀಸ್ ಠಾಣೆಯಲ್ಲಿ ನಡೆಯುತ್ತದೆ ಮತ್ತು ನನ್ನ ಪಾತ್ರವು ನಿಷ್ಪ್ರಯೋಜಕವಾಗಿ ಕಂಡರೂ, ನನ್ನ ಪಾತ್ರವು ಪ್ರಕರಣವೊಂದನ್ನು ಪರಿಹರಿಸುತ್ತದೆ. ಹೇಗೆ ಎಂಬುದನ್ನು ತಿಳಿಯಲು ಪ್ರೇಕ್ಷಕರು ಚಿತ್ರವನ್ನು ನೋಡಬೇಕು' ಎಂದು ಹೇಳುತ್ತಾರೆ.

ಕಿಶನ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಚೈತ್ರ ಪ್ರಕಾಶ್ ನಿರ್ಮಿಸಿರುವ ಶಭಾಷ್ ಬಡ್ಡಿಮಗ್ನೆ ಚಿತ್ರವು ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಗಳಲ್ಲಿ ನಡೆದ 1980ರ ದಶಕದ ನೈಜ ಘಟನೆಯಿಂದ ಸ್ಫೂರ್ತಿ ಪಡೆದಿದೆ.

ಚಿತ್ರಕ್ಕೆ ರಾಜಶೇಖರ್ ಕಥೆ ಬರೆದಿದ್ದಾರೆ. ಇದು ಪೊಲೀಸ್ ಅಧಿಕಾರಿಯ ಪ್ರಯಾಣವನ್ನು ಅನುಸರಿಸುತ್ತದೆ. ಆತ ತನ್ನ ಕೆಲಸಕ್ಕೆ ಸಮರ್ಪಿತರಾಗಿದ್ದರೂ, ಆತನ ವೈಯಕ್ತಿಕ ಜೀವನದಲ್ಲಿ ಹೆಚ್ಚಿನ ಆಸಕ್ತಿ ತೋರಿಸುತ್ತಾರೆ. ಅವರ ಅಧಿಕಾರ ವ್ಯಾಪ್ತಿಯಲ್ಲಿರುವ ಅಪರಾಧವು ಹಾಸ್ಯ, ಪಂಚ್ ಡೈಲಾಗ್‌ಗಳು ಮತ್ತು ಕುತೂಹಲಕಾರಿ ತಿರುವುಗಳಿಂದ ಕೂಡಿದ ತನಿಖೆಗೆ ಕಾರಣವಾಗುತ್ತದೆ ಎಂದು ನಿರ್ದೇಶಕರು ಹೇಳುತ್ತಾರೆ.

ಆದ್ಯಪ್ರಿಯಾ ನಾಯಕಿಯಾಗಿ ನಟಿಸಿದ್ದು, ಈ ಚಿತ್ರದ ಮೂಲಕ ಸಾಮ್ರಾಟ್ ಶೆಟ್ಟಿ ಪದಾರ್ಪಣೆ ಮಾಡುತ್ತಿದ್ದಾರೆ. ಚಿತ್ರದ ತಾರಾಗಣದಲ್ಲಿ ಕಾವ್ಯ ಪ್ರಕಾಶ್, ರವಿತೇಜ, ಮಿತ್ರ, ಶಂಕರ್ ಅಶ್ವತ್ಥ್ ಮತ್ತು ಪ್ರಕಾಶ್ ತೂಮಿನಾಡ್ ಕೂಡ ಇದ್ದಾರೆ. ಚಿತ್ರಕ್ಕೆ ಪ್ರಶಾಂತ್ ಸಿದ್ದಿ ಸಂಗೀತ ನೀಡಿದ್ದು, ಅಣ್ಣಾಜಿ ನಾಗರಾಜ್ ಅವರ ಛಾಯಾಗ್ರಹಣವಿದೆ.

# ತೆಲುಗು ಹಿರಿಯ ನಟ ಪೋಸಾನಿ ಕೃಷ್ಣ ಮುರಳಿ ಬಂಧನ



**ಅಮರಾವತಿ:** ತೆಲುಗು ಚಿತ್ರರಂಗದ ಹಿರಿಯ ನಟ ಹಾಗೂ ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ಸದಸ್ಯ ಪೋಸಾನಿ ಕೃಷ್ಣ ಮುರಳಿ ಅವರನ್ನು ಫೆ.26ರ ರಾತ್ರಿ 8:45ರ ಸುಮಾರಿಗೆ ಆಂಧ್ರ ಪ್ರದೇಶದ ಪೊಲೀಸರು ಹೈದರಾಬಾದ್ ನಲ್ಲಿ ಬಂಧಿಸಿದ್ದಾರೆ.

ನಟನ ವಿರುದ್ಧ ಓಬುಲವಾರಿಪಲ್ಲಿ ಪೊಲೀಸ್ ಠಾಣೆಯಲ್ಲಿ ಸೆಕ್ಷನ್ 196, 353(2), ಮತ್ತು 111 ಹಾಗೂ ಎಸ್‌ಸಿ/ಎಸ್‌ಟಿ ಕಾಯ್ದೆಯ ಸೆಕ್ಷನ್ 3(5) ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಸದ್ಯ ನಟನನ್ನು ಬಂಧಿಸಿರುವ ಪೊಲೀಸರು ರಾಜಂಪೇಟೆಯ ಹೆಚ್ಚುವರಿ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲು ಮುಂದಾಗಿದ್ದಾರೆ.ಸಮುದಾಯವೊಂದ ರ ವಿರುದ್ಧ ನಟ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಈ ಹೇಳಿಕೆಯು ಎರಡು ಗುಂಪುಗಳ ನಡುವೆ ವೈಷಮ್ಯಕ್ಕೂ ಕಾರಣವಾಯಿತು. ಈ ಹಿನ್ನೆಲೆ ಪೋಸಾನಿ ಕೃಷ್ಣ ವಿರುದ್ಧ ಕೇಸ್ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಪೋಸಾನಿ ಕೃಷ್ಣ ಅವರು ಕಾನೂನು ಸಂಕಷ್ಟ ಎದುರಿಸುತ್ತಿರುವುದು ಇದೇ ಮೊದಲೇನಲ್ಲ. 2024ರ ನವೆಂಬರ್‌ನಲ್ಲಿ ಸಿಎಂ ಚಂದ್ರಬಾಬು ನಾಯ್ಡು ವಿರದ್ಧವೂ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಆಗಲೂ ತಮ್ಮ ವಿರುದ್ಧ ಕೇಸ್ ದಾಖಲಾಗಿತ್ತು.

# 'ದೇವರ' ಚಿತ್ರ ಮಾರ್ಚ್ 28 ರಂದು ಜಪಾನ್ ನಲ್ಲಿ ಬಿಡುಗಡೆ

**ಹೈದರಾಬಾದ್:** ತೆಲುಗು ಸೂಪರ್‌ಸ್ಟಾರ್ ಜೂನಿಯರ್ ಎನ್‌ಟಿಆರ್ ಅಭಿನಯದ 'ದೇವರ: ಭಾಗ 1' ಚಿತ್ರ ಮಾರ್ಚ್ 28 ರಂದು ಜಪಾನ್‌ನಲ್ಲಿ ಬಿಡುಗಡೆಯಾಗಲಿದೆ.

ಈ ಹಿಂದೆ ಎನ್‌ಟಿಆರ್ ನಟಿಸಿದ 2022 ರ 'ಆರ್‌ಆರ್‌ಆರ್' ಚಿತ್ರ ಜಪಾನ್ ನಲ್ಲಿ ಬಿಡುಗಡೆಯಾಗಿದ್ದು, ಇದು ಚಲನಚಿತ್ರ ಪ್ರೇಕ್ಷಕರಿಂದ ಹೆಚ್ಚಿನ ಪ್ರಶಂಸೆ ಪಡೆದಿತ್ತು.

ಇದೀಗ 'ದೇವರ' ಚಿತ್ರ ಬಿಡುಗಡೆಯಾಗುತ್ತಿದ್ದು, ಇದಕ್ಕು ಮೊದಲು,



ನಟ ಜೂ. ಎನ್ ಟಿ ಆರ್ ಅವರು ಮಾರ್ಚ್ 22 ರಂದು ಚಿತ್ರದ ಪ್ರಚಾರಕ್ಕಾಗಿ ಜಪಾನ್‌ಗೆ ಪ್ರಯಾಣಿಸಲಿದ್ದಾರೆ.ಕೊರಟಾಲ ಶಿವ ನಿರ್ದೇಶನದ 'ದೇವರ' ಚಿತ್ರದಲ್ಲಿ ಜಾನ್ವಿ ಕಪೂರ್ ಮತ್ತು ಸೈಫ್ ಅಲಿ ಖಾನ್ ಕೂಡ ನಟಿಸಿದ್ದಾರೆ. ಸೈಫ್ ಹಾಗೂ ಜಾನ್ವಿ ಅವರ ಮೊದಲ ಪ್ಯಾನ್-ಇಂಡಿಯಾ ತೆಲುಗು ಚಿತ್ರ ಇದಾಗಿದೆ.ಈ ಚಿತ್ರ ಕಳೆದ ಸೆಪ್ಟೆಂಬರ್ 27 ರಂದು ಭಾರತದಾದ್ಯಂತ ಬಿಡುಗಡೆಯಾಗಿದ್ದು, ಚಿತ್ರವನ್ನು ಯುವಸುಧಾ ಆರ್ಟ್ಸ್ ಮತ್ತು ಎನ್‌ಟಿಆರ್ ಆರ್ಟ್ಸ್ ನಿರ್ಮಿಸಿದ್ದು, ನಂದಮೂರಿ ಕಲ್ಯಾಣ ರಾಮ್ ಪ್ರಸ್ತುತಪಡಿಸಿದ್ದಾರೆ.

## ಬಿರುಬೇಸಿಗೆಯ ದಾಹ ತಣಿಸಲು ನೀರು, ಮಜ್ಜಿಗೆ ವಿತರಣೆ: ದಾನಿಗಳ ಸಹಕಾರಕ್ಕೆ ಕರೆ

**ದಾವಣಗೆರೆ:** ಕರುಣಾ ಜೀವ ಕಲ್ಯಾಣ ಟ್ರಸ್ಟ್ ವತಿಯಿಂದ ಕಳೆದ 8 ವರ್ಷಗಳಿಂದ ಸತತವಾಗಿ ಬೇಸಿಗೆಯ ಒಂದು ತಿಂಗಳ ಕಾಲ ಉಚಿತ ಮಜ್ಜಿಗೆ ಹಾಗೂ ನೀರಿನ ವಿತರಣೆಯನ್ನು ದಾನಿಗಳೆಲ್ಲರ ಸಹಾಯ, ಸಹಕಾರದಿಂದ ನಡೆಸುತ್ತಾ ಬರಲಾಗಿದೆ.

ಈ ವರ್ಷವೂ ಕೂಡ ಮಾರ್ಚ್ 4 ರಿಂದ ಮಾರ್ಚ್ 29 ರವರೆಗೆ ಮಜ್ಜಿಗೆ ವಿತರಣಾ ಕಾರ್ಯಕ್ರಮವನ್ನು ನಡೆಸಲಾಗುವುದು. ನೀರಿನ ಹಾಗೆಯೇ ಮಜ್ಜಿಗೆ ಕೂಡ ದಾಹ ಮತ್ತು ನಮ್ಮ ಆರೋಗ್ಯವನ್ನು ಕಾಪಾಡಲು ನೆರವಾಗುತ್ತದೆ. ಬಿಸಿಲ ಬೇಗೆಗೆ ಬಳಲಿ, ನೀರಿನ ದಾಹ ತೀರಿಸಿಕೊಳ್ಳಲಾಗದೆ ತಹತಹಿಸುವ ಸಂದರ್ಭದಲ್ಲಿ ನೀರು, ಮಜ್ಜಿಗೆ ಏನಾದರೂ ಸಿಕ್ಕರೆ ಅಮೃತವೇ ಸಿಕ್ಕಂತೆ ಎಲ್ಲರಿಗೂ ಆಗಿರುತ್ತದೆ.

ದಾವಣಗೆರೆಗೆ ವ್ಯಾಪಾರಕ್ಕಾಗಿ ಮತ್ತು ಆಸ್ಪತ್ರೆಗಾಗಿ ಬಂದಂತಹ ಸುತ್ತ ಮುತ್ತಲಿನ ಗ್ರಾಮಸ್ಥರು ಹಾಗೂ ನಗರ ಜನತೆ, ಆಟೋ ಚಾಲಕರು, ಬಡವರು, ದಾರಿಹೋಕರು ಎಲ್ಲಾ ಕಡೆ ಕುಡಿಯುವ ನೀರಿನ ಬಾಟಲಿಗಳನ್ನು ಕೊಂಡು ಹೋಗಲು ಆಗುವುದಿಲ್ಲ. ಅಲ್ಲದೆ ದುಡ್ಡು ಕೊಟ್ಟು ಮಜ್ಜಿಗೆಯನ್ನು ಕುಡಿಯಲು ಬಡವರಿಗೆ ಆಗದಿರಬಹುದು. ಈ ನಿಟ್ಟಿನಲ್ಲಿ ದಾವಣಗೆರೆಗೆ ಬಂದ ಜನರು ಬಿಸಿಲಿನ ಬೇಗೆಗೆ ಬಳಲಬಾರದೆಂಬ ಸದುದ್ದೇಶದಿಂದ ನೀರು ಹಾಗೂ ಮಜ್ಜಿಗೆಯನ್ನು ವಿತರಿಸಲಾಗುವುದು.

ದಾವಣಗೆರೆ ನಗರದ ಜಯದೇವ ಸರ್ಕಲ್ , ಚಿಗಟೇರಿ ಜಿಲ್ಲಾ ಆಸ್ಪತ್ರೆ, ರಾಮ್ ಅಂಡ್ ಕೋ ಸರ್ಕಲ್ ಒಟ್ಟು 3 ಸ್ಥಳಗಳಲ್ಲಿ ಮಜ್ಜಿಗೆ ಹಾಗೂ ನೀರಿನ ವಿತರಣೆ ಕಾರ್ಯಕ್ರಮವನ್ನು ಮಾರ್ಚ್ 4 ರಿಂದ ಮಾರ್ಚ್ 29 ರವರೆಗೆ ಸತತವಾಗಿ ನಡೆಸಲಾಗುವುದು.

ಮೂರು ಕಡೆಗಳಲ್ಲಿ 1 ದಿನದ ಮಜ್ಜಿಗೆ ಮತ್ತು ನೀರಿನ ವಿತರಣಾ ಖರ್ಚು 6000 ರೂಪಾಯಿಗಳಾಗುತ್ತದೆ.

ಒಂದು ಸ್ಥಳದಲ್ಲಿ ಒಂದು ದಿನದ ಮಜ್ಜಿಗೆ ಮತ್ತು ನೀರಿನ ವಿತರಣಾ ಖರ್ಚು 2000 ರೂಪಾಯಿ. ದಾನಿಗಳು ಸಹಕರಿಸುವ ಮೂಲಕ ಸಾರ್ವಜನಿಕರ ದಾಹ ತೀರಸೋಣ. ಹೆಚ್ಚಿನ ಮಾಹಿತಿಗೆ ಮಂಜುಳಾ ಬಸವಲಿಂಗಪ್ಪ– 7483809312 ಸಂಪರ್ಕಿಸಲು ಅಧ್ಯಕ್ಷರಾದ ಡಾ. ಹೆಚ್.ಎನ್. ಮಲ್ಲಿಕಾರ್ಜುನ್, ಕಾರ್ಯದರ್ಶಿ ಶಿವನಕೆರೆ ಬಸವಲಿಂಗಪ್ಪ ತಿಳಿಸಿದ್ದಾರೆ.

Karuna jeeva kalyana trust Davangere.
Account No. 50100332805356
IFSC code HDFC 0000403

## ಅಂಜುಮನ್ ವೆಲ್ಫೇರ್ ತಂಡಕ್ಕೆ ಗೆಲುವು

**ಚಿಕ್ಕಮಗಳೂರು:** ನಗರದ ಅಂಡೆಛತ್ರ ಮುಸಾಫಿರ್ ಖಾನ್, ಅಂಜುಮನ್ ಇ ಇಸ್ಲಾಮಿಯಾ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆಗೆ ಶನಿವಾರ ನಡೆದ ಚುನಾವಣೆಯಲ್ಲಿ ಅಂಜುಮನ್ ವೆಲ್ಫೇರ್ ಗ್ರೂಪ್ ಭರ್ಜರಿ ಜಯಸಾದಿಸಿದೆ. ನಗರದ ಐ.ಜಿ ರಸ್ತೆಯಲ್ಲಿರುವ ಉರ್ದು ಪ್ರಾಥಮಿಕ ಸರಕಾರಿ ಶಾಲೆಯಲ್ಲಿ ಮತದಾನ ನಡೆಯಿತು. 57 ಮಂದಿ ಸ್ಪರ್ಧಾ ಕಣದಲ್ಲಿದ್ದರು. ಅಂಜುಮನ್ ವೆಲ್ಫೇರ್ ಗ್ರೂಪ್‌ನಿಂದ 17 ಮಂದಿ ಕಣದಲ್ಲಿದ್ದು ಅದರಲ್ಲಿ 14 ಮಂದಿ ವಿಜೇತರಾಗಿದ್ದಾರೆ. ಸಿಡಿಎ ಅಧ್ಯಕ್ಷ ನಯಾಜ್ ಅಹ್ಮದ್ ಅವರ ತಂಡದಿಂದ 17 ಮಂದಿ ಚುನಾವಣೆಯಲ್ಲಿ ಸ್ಪರ್ದಿಸಿದ್ದು ಅದರಲ್ಲಿ 5 ಮಂದಿ ಮಾತ್ರ ಗೆಲುವು ಸಾದಿಸಿದ್ದಾರೆ. ಯಾವುದೇ ಗ್ರೂಪ್‌ಗೆ ಸೇರದೆ ಪಕ್ಷೇತರರಾಗಿ 2 ಮಂದಿ ವಿಜಯಶಾಲಿಗಳಾಗಿದ್ದು ಒಟ್ಟು 21 ಮಂದಿ ಅಂಜುಮನ್ ಇ ಇಸ್ಲಾಮಿಯಾ ಸಂಸ್ಥೆಗೆ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ವಿಜಯ ಗಳಿಸಿದವರಲ್ಲಿ ಅಬ್ದುಲ್‌ರಜಾಕ್, ಹಫೀಜ್ ಮೊಹಮದ್‌ರಿಯಾಜ್‌ಖಾನ್, ಮಸೂದ್ ಅಹ್ಮದ್, ನಜೀರ್ ಅಹ್ಮದ್, ನಾಸೀರ್‌ಖಾನ್, ಸಿ.ಪಿ.ಬಾಬರ್, ಸಿ.ಎ.ಮೊಹಮದ್ ಇಸ್ಮಾಯಿಲ್, ಅಬ್ರಾರ್‌ಖಾನ್, ಮೊಸಿನ್‌ಖಾನ್, ಹಸನ್ ಸಲೀಂ, ಮೊಹಮ್ಮದ್‌ಇರ್ಷಾದ್, ಮೊಹಮದ್ ಉಮರ್, ಶಿರಾಜ್‌ಖಾನ್, ಮೊಹಮದ್ ಜಿಯಾ, ಮೊಹಮ್ಮದ್‌ರಾಹಿಲ್ ಪಾಷಾ, ನೂರ್ ಮೊಹಮದ್, ತಬ್ರೀಜ್ ಅಹ್ಮದ್, ಸಯದ್‌ಜಬೀ, ಮೊಹಮದ್ ಅಜ್ಮಲ್‌ಬಾಗಿ, ಅಜ್ಮಲ್, ಮೊಹಮದ್ ಅಬ್ರಾರ್ ಇವರುಗಳು ಚುನಾವಣೆಯಲ್ಲಿ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಕಾರಿ ನಿಸಾರ್ ಅಹ್ಮದ್ ತಿಳಿಸಿದ್ದಾರೆ.

## ಇ–ಖಾತಾ ಅಭಿಯಾನ

**ದಾವಣಗೆರೆ:** ಫೆಬ್ರವರಿ 19 ರಿಂದ ಮೇ 10 ರವರೆಗೆ ಮಹಾನಗರ ಪಾಲಿಕೆಯ ವಲಯ ಕಚೇರಿಯಲ್ಲಿ ಇ–ಖಾತಾ ಅಭಿಯಾನವನ್ನು ಆಯೋಜಿಸಲಾಗಿದೆ.

ನಗರದಲ್ಲಿನ ನಿವೇಶನಗಳು, ಕಟ್ಟಡಗಳು ಭೂಪರಿವರ್ತನೆಯಾಗದೆ ಉಪವಿಭಜನೆ ಮಾಡಿ ಮಾರಾಟ ಮಾಡಿರುವ ನಿವೇಶನ, ಕಟ್ಟಡಗಳಿಗೆ 24 ಸೆಪ್ಟೆಂಬರ್ 2024 ರ ಒಳಗೆ ನೋಂದಣಿಯಾಗಿರುವ ಆಸ್ತಿಗಳಿಗೆ ಇ–ಆಸ್ತಿ ತಂತ್ರಾಂಶದಿಂದ 2ಎ ನಮೂನೆ ಸೃಜಿಸಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮಹಾನಗರಪಾಲಿಕೆಯಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಸಂ:08192–234444, ವಾಟ್ಸಪ್ ನಂ: 8277234444 ನ್ನು ಸಂಪರ್ಕಿಸಬೇಕೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

# ಅವಘಡಗಳಿಗೆ ಬೇಕು ಕಡಿವಾಣ

**ಮೊಳಕಾಲ್ಮೂರು:** ಬಿರು ಬೇಸಿಗೆ ಕಾಲದಲ್ಲಿ ಘಟಿಸುವ ಅಗ್ನಿ ಅವಘಡಗಳಿಗೆ ಬಯಲುಸೀಮೆ ಅರಣ್ಯ, ವನ್ಯಜೀವಿ ಸಂಪತ್ತಿಗೆ ಕಂಟಕ ಸಾಮಾನ್ಯವಾಗಿದೆ.

ಬಯಲುಸೀಮೆ ಊಟಿ ಎಂದೇ ಖ್ಯಾತಿ ಗಳಿಸಿರುವ ಜೋಗಿಮಟ್ಟಿ ಅರಣ್ಯ ಪ್ರದೇಶ ಖ್ಯಾತಿ ಗಳಿಸಿದ್ದರೇ, ಬಿ.ಜಿ.ಕೆರೆ ಸಮೀಪದ ಕವರ ಕಾವಲ್ ಮೊಳಕಾಲ್ಮೂರು ತಾಲ್ಲೂಕಿನ ಏಕೈಕ ಅರಣ್ಯ ಸಂಪತ್ತು ಆಗಿದೆ. ಆದರೆ, ಈಚೆಗೆ ಆಕಸ್ಮಿಕ ಅವಘಢ ಹಾಗೂ ಕಿಡಿಗೇಡಿಗಳ ಕೃತ್ಯಕ್ಕೆ ಬಯಲುಸೀಮೆ ಅರಣ್ಯ ಪ್ರದೇಶ ಕ್ಷೀಣಿಸುತ್ತಿದೆ.

ಮೊಳಕಾಲ್ಮೂರು ತಾಲೂಕಿನಲ್ಲಿರುವ ಕುರುಚಲು ಕಾಡು, ಕಮರ ಕಾವಲ್‌ನಂಥ ಅರಣ್ಯ ಪ್ರದೇಶದಲ್ಲಿ ಸಾಕಷ್ಟು ಪ್ರಬೇಧದ ಮರ, ಗಿಡಗಳು, ವನ್ಯ ಪ್ರಾಣಿಗಳಿವೆ. ಇಂಥ ಅಪಾರ ಸಂಪತ್ತು ಹೊಂದಿರುವ ಕಾಡಿನಲ್ಲಿ ತುಮಕೂರ್ಲಹಳ್ಳಿ ಸಮೀಪದ ಅರಣ್ಯ ಪ್ರದೇಶದಲ್ಲಿ ಕಾಣಿಸಿಕೊಂಡ ಬೆಂಕಿಯ ಕೆನ್ನಾಲಿಗೆಗೆ ಅಂದಾಜು 50 ಹೆಕ್ಟೇರ್‌ಗೂ ಅಧಿಕ ಪ್ರದೇಶ ಹಾನಿಯಾಗಿದೆ.

ಗಿಡ, ಮರಗಳು ಸುಟ್ಟು ಕರಕಲಾಗಿವೆ. ಹೀಗೆ, ವನ ಸಂಪತ್ತು ಹಾಳಾಗುವುದರಿಂದ ಅರಣ್ಯ ಇಲಾಖೆಯು ಕೋಟ್ಯಂತರ ರೂ. ಅನುದಾನವನ್ನು ಬಳಸಿ ಸಾಕಷ್ಟು ಜತನದಿಂದ ಬೆಳೆಸಿ, ಸಂರಕ್ಷಿಸಿದ ಗಿಡ, ಮರಗಳು ಕಣ್ಣೆದುರೇ ಕಮರುವಂತಾಗಿದೆ. ಆದ್ದರಿಂದ ಬೇಸಿಗ ಆರಂಭವಾಗುವ ಸಂದರ್ಭ ಇಂಥ ಅನಾಹುತಗಳನ್ನು ತಡೆಯಲು ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹೆಚ್ಚಿನ ನಿಗಾ ವಹಿಸುವ ಜರೂರತ್ತಿದೆ. ಜತೆಗೆ ಜನರ ಸಹಕಾರ ಬೇಕಾಗಿದೆ.

ಏಕೈಕ ಕಮರ ಕಾವಲ್: ಬಿ.ಜಿ.ಕೆರೆ, ತುಮಕರ್ಲಹಳ್ಳಿ, ಮುತ್ತಿಗಾರಹಳ್ಳಿ, ಸೂರಮ್ಮನಹಳ್ಳಿ ಸೇರಿ ನಾನಾ ಭಾಗದಲ್ಲಿ ಹರಡಿಕೊಂಡಿರುವ ಕಮರ ಕಾವಲ್ ಅರಣ್ಯ ಪ್ರದೇಶವು ಮೊಳಕಾಲ್ಮೂರು ತಾಲೂಕಿನ ಏಕೈಕ ಅರಣ್ಯ ಪ್ರದೇಶವಾಗಿದೆ. ಈ ಕಮರಕಾವಲನ್ನು



ಮರಗಳ್ಳರು ಮತ್ತು ಬೆಂಕಿಯಿಂದ ಕಾಪಾಡಿಕೊಳ್ಳದಿದ್ದರೆ ಕ್ರಮೇಣವಾಗಿ ಅರಣ್ಯಭೂಮಿ ಬಯಲುಪ್ರದೇಶವಾಗಿ ಮಾರ್ಪಡುವುದರಲ್ಲಿ ಸಂದೇಹವಿಲ್ಲ.

ಈಗಾಗಲೇ ರೈತರಿಗಾಗಿಯೇ ಮೀಸಲಿದ್ದ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಮೃತ್ ಮಹಲ್ ಕಾವಲ್‌ಗೆ ಈಗ ಸರ್ಕಾರಗಳು ನಾನಾ ಯೋಜನೆಗಳ ಉದ್ದೇಶಕ್ಕಾಗಿ ಬೇಲಿ ಹಾಕಿದೆ. ಅದರಂತೆಯೇ, ಕಮರದ ಕಾವಲ್ ಅರಣ್ಯ ಪ್ರದೇಶವು ಬೆಂಕಿಯಿಂದ ಬೋಳಾದರೆ, ದನ, ಕುರಿ ಸೇರಿ ಜಾನುವಾರು ಮೇಯಿಸಲು ಆಸರೆ ಇಲ್ಲದಂತಾಗಲಿದೆ.

ಮುಂದೊಂದು ದಿನ, ಈ ಬರಿದಾದ ಅರಣ್ಯ ಪ್ರದೇಶದ ಮೇಲೂ ಆಳುವ ಮತ್ತು ಬಂಡಾವಾಳಶಾಹಿಗಳ ವಕ್ರದೃಷ್ಟಿ ಬಿದ್ದರೆ, ತಾಲೂಕಿನಲ್ಲಿ ಅರಣ್ಯ ಪ್ರದೇಶವೇ ಇಲ್ಲದಂತಾಗಲಿದೆ. ಹೀಗಾಗಿ, ಈಗಿರುವ ಕಮರ ಕಾವಲ್ ಅರಣ್ಯ ಪ್ರದೇಶವನ್ನು ಸಂರಕ್ಷಿಸುವ ಹೊಣೆಗಾರಿಕೆ ಅರಣ್ಯ ಇಲಾಖೆ ಜತೆಗೆ ಸಾರ್ವಜನಿಕರು, ಕುರಿಗಾಹಿಗಳು ಸೇರಿ ಎಲ್ಲರ ಮೇಲಿದೆ.

ಬಿ.ಜಿ.ಕೆರೆ ಸೇರಿ ಮೊಳಕಾಲ್ಮೂರು ತಾಲೂಕಿನಲ್ಲಿ ಕುರುಚಲು ಕಾಡು ಇರುವುದರಿಂದ ಯಥೇಚ್ಛವಾಗಿ ಹುಲ್ಲಿಗೆ ಬಿದ್ದ ಬೆಂಕಿ ಇಡೀ ಕಾಡನ್ನೇ ಆವರಿಸಿಕೊಳ್ಳುತ್ತದೆ. ಅದಕ್ಕಾಗಿ ಕಾವಲುಗಾರರು ಸದಾ ಗಸ್ತಿನಲ್ಲಿರುವಂತೆ ಎಚ್ಚರ ವಹಿಸಲಾಗಿದೆ. ಕಾಡಂಚಿನ ಹಳ್ಳಿಗಳ ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಲಾಗುವುದು. ಬೆಂಕಿ ನಂದಿಸಲು ಆಧುನಿಕ ಪರಿಕರಗಳ ಅಗತ್ಯವಿದೆ.
**–ಹರ್ಷ**, ವಲಯ ಅರಣ್ಯಾಧಿಕಾರಿ, ಮೊಳಕಾಲ್ಮೂರು

### ಕರಡಿಧಾಮಕ್ಕೆ ಅಪಾಯ?

ಮೊಳಕಾಲ್ಮೂರು ತಾಲೂಕಿನ ಅರಣ್ಯ ಪ್ರದೇಶದೊಂದಿಗೆ ಗಡಿ ಹಂಚಿಕೊಂಡಿರುವ ದೇಶದ ಎರಡನೇ ಅತಿದೊಡ್ಡ ಕರಡಿಧಾಮ ಹೊಂದಿರುವ ಕೂಡ್ಲಿಗಿ ತಾಲೂಕಿನ ಅರಣ್ಯ ಪ್ರದೇಶ ಇದೆ. ಹೀಗಾಗಿ, ಅಗ್ನಿ ಅವಘಡಗಳು ತಾಲೂಕಿನ ಅರಣ್ಯ ಪ್ರದೇಶದಲ್ಲಿ ಜರುಗಿದರೆ ಗುಡೇಕೋಟೆ ಕರಡಿಧಾಮದಲ್ಲಿರುವ ಅಪಾರವಾದ ಸಸ್ಯ ಸಂಪತ್ತಿನ ಜತೆಗೆ ವನ್ಯಪ್ರಾಣಿಗಳಾದ ಕರಡಿ, ಚಿರತೆ, ಹಂದಿ, ಚಿಪ್ಪುಹಂದಿ, ನರಿ, ಕಡವೆ ಸೇರಿ ಅಪರೂಪದ ಸರಿಸೃಪಗಳಿಗೂ ಅಪಾಯ ಕಟ್ಟಿಟ್ಟ ಬುತ್ತಿಯಾಗಲಿದೆ. ಹೀಗಾಗಿ, ತಾಲೂಕಿನ ಅರಣ್ಯಾಧಿಕಾರಿಗಳ ಜವಾಬ್ದಾರಿ ಹೆಚ್ಚು ಇದೆ.

## ಮಕ್ಕಳ ಮುಗ್ದ ಮನಸ್ಸು ಹಸಿ ಮಣ್ಣಿನ ಮುದ್ದೆಯಂತೆ

**ಚಿಕ್ಕಮಗಳೂರು:** ಮಕ್ಕಳ ಮುಗ್ಧ ಮನಸ್ಸು ಹಸಿ ಮಣ್ಣಿನ ಮುದ್ದೆಯಂತೆ, ವಾಲಿದ ಕಡೆ ಬಾಗುವುದು ಸಹಜ, ಶಿಕ್ಷಕರು ಮಕ್ಕಳ ಮನಸ್ಸನ್ನು ಸ್ಥಿರವಾಗಿ ಗಟ್ಟಿಗೊಳಿಸಿ ದೇಶದ ಸತ್ಪ್ರಜೆಗಳಾಗಿ ಮಾಡ ಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ವ್ಯಾಲಿ ಕಿಡ್ಸ್‌ನ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿ ಮಕ್ಕಳನ್ನು ಸಂಸ್ಕಾರವಂತ, ಶಿಕ್ಷಣವಂತ ,ರಾಷ್ಟಪೇಮಿಗಳಾಗಿ ರೂಪುಗೊಳಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಆ ನಿಟ್ಟಿನಲ್ಲಿ ವ್ಯಾಲಿ ಕಿಡ್ಸ್ ಶಾಲೆ ಲಾಭದ ಆಸೆಗೆ ಒಳಗಾಗದೇ, ಮಕ್ಕಳಲ್ಲಿ ರಾಷ್ಟಭಕ್ತಿ, ಮೌಲ್ಯ ಯು ತ ಶಿಕ್ಷಣ ಹಾಗೂ ಸಂಸ್ಕಾರವನ್ನು ಬೋಧಿಸುತ್ತಿದೆ ಎಂದರು.

ಇತ್ತೀಚಿಗೆ ದಿನದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಚಟ, ಅಧಿಕ ಅಂಕ ಗಳಿಸದ ಕಾರಣ ಆತ್ಮಹತ್ಯೆಗೆ ತುತ್ತಾ ಗುತ್ತಿವೆ. ಇದಕ್ಕೆ ಮೌಲ್ಯಧಾರಿತ ಶಿಕ್ಷಣದ ಕೊರತೆಯೇ ಕಾರಣ. ಪಾಲಕರು ಕೇವಲ ಅಂಕ ಗಳಿಕೆಗೆ ಮಾತ್ರ ಮಕ್ಕಳನ್ನು ಸೀಮಿತಗೊಳಿಸದೇ ವ್ಯವಹಾರಿಕ ಜ್ಞಾನದ ಪರಿಪಾಠವನ್ನು ಬೋಧಿಸುವತ್ತ ಗಮನಹರಿಸಬೇಕು ಎಂದರು.

ನಗರಸಭೆ ಸದಸ್ಯ ಕವಿತಾ ಶೇಖರ್ ಮಾತನಾಡಿ ಮಕ್ಕಳ ಜೀವನ ಖಾಲಿ ಚೀಲದಂತೆ, ಆಸಕ್ತಿ ಹೊಂ ದಿರುವ ವಿಷಯದಲ್ಲಿ ಶಿಕ್ಷಕರು ಜ್ಞಾನವನ್ನು ತುಂಬಿಸಬೇಕು. ಭವಿಷ್ಯದಲ್ಲಿ ಸಚ್ಚಿನ್ ತೆಂಡೂಲ್ಕರ್, ಲತಾ ಮಂಗೇಶ್ವರ್, ಪಿಟಿಉಷಾ ಅಥವಾ ದೇಶದ ಹೆಮ್ಮೆಯ ಮಾಜಿ ರಾಷ್ಟಪತಿ ಕಲಾಂ ಮಾದರಿಯಲ್ಲಿ ಸಾಧನೆಗೈ ಯ್ಯಲು ಸಾಧ್ಯವಾಗಲಿದೆ ಎಂದರು.

ವೈದ್ಯ ಡಾ॥ ಉಮೇಶ್ ರಾವ್ ಮಾತನಾಡಿ ವಿದ್ಯಾರ್ಥಿಗಳ




ಉಜ್ವಲ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಮೊದಲು ಪಾಲಕರು ಟಿವಿ ಧಾರವಾಹಿಗಳನ್ನು ಬದಿಗಿರಿಸಿ, ವಿದ್ಯಾರ್ಜನೆ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು. ಅಲ್ಲದೇ ದೇವಾಲಯ ಕಳಿಸುವ ಜೊತೆಗೆ ಇತಿಹಾಸ ಧರ್ಮಗ್ರಂಥದ ಸಾರವನ್ನು ಪರಿಚಯಿಸಿದರೆ ನಾಡಿನ ಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ ಎಂಧರು.

ವೇದಿಕೆ ಕಾರ್ಯಕ್ರಮದ ನಂತರ ಶಾಲಾಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ವ್ಯಾಲಿ ಕಿಡ್ಸ್ ಶಾಲೆಯ ಪೌಂಡರ್ ಮಂಜುಳಾ ಗಂಗಾಧರ್, ವಿದ್ಯಾರ್ಥಿಗಳು, ಪಾಲಕರು ಉಪಸ್ಥಿತರಿದ್ದರು.

## ಬಡಾವಣೆಗಳ ನಿವೇಶನ ಮಾರಾಟಕ್ಕೆ ಇ–ಸ್ವತ್ತು ಪೂರಕ: ಶಾಸಕ ಬಿ.ದೇವೇಂದ್ರಪ್ಪ



**ಜಗಳೂರು:** ಬಡಾವಣೆಗಳ ನಿವೇಶನ ಮಾರಾಟ ವಹಿವಾಟುಗಳಿಗೆ ಇ– ಖಾತೆ ಪೂರಕವಾಗಲಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಗುರುವಾರ ಪಟ್ಟಣದ ಪಟ್ಟಣ ಪಂಚಾಯತಿ ಸಭಾಂಗಣದಲ್ಲಿ ಪಟ್ಟಣ ಪಂಚಾಯತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಇ– ಖಾತಾ ಅಭಿಯಾನ , ಇ– ಸ್ವತ್ತು ಪಡೆಯಲು ಸರಳ ವಿಧಾನ ಕುರಿತು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ವೈಯಕ್ತಿಕವಾಗಿ ಭೂಪರಿವರ್ತನೆಗೊಳಿಸಿ ಬಡಾವಣೆಗಳಲ್ಲಿ ನಿವೇಶನ ಖರೀದಿಮಾಡುವಾಗ ಅಗತ್ಯದಾಖಲೆಗಳಿಲ್ಲದೆ ಸಾಕಷ್ಟು ತೊಂದರೆಯಿಂದ ಆರ್ಥಿಕ ವಹಿವಾಟುಗಳಿಗೆ ಹಿನ್ನೆಡೆಯಾಗಿ ವನವಾಸ ಅನುಭವಿಸುವಂತಾಗಿತ್ತು. ರಾಜ್ಯಮಟ್ಟದ ಸಮಸ್ಯೆಯಾಗಿರುವ ಈ ಬಗ್ಗೆ ನಾನು ಅಧಿವೇಶನದಲ್ಲಿ ಸಂಬಂಧಿಸಿದ ಸಚಿವರು, ಹಾಗೂ ಸರ್ಕಾರದ ಗಮನಸೆಳೆದ ಪರಿಣಾಮ ಇ ಖಾತಾ ಅಭಿಯಾನಕ್ಕೆ ಕಾನೂನು ಆದೇಶ ಹೊರಡಿಸಿರುವುದು ಸ್ವಾಗತರ್ಹ. ಪಟ್ಟಣದ 13 ಬಡವಾಣೆಗಳಲ್ಲಿನ ನಿವಾಸಿಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಇ–ಖಾತೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಪ.ಪಂ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ ಮಾತನಾಡಿ, ರಾಜ್ಯದಲ್ಲಿ ಅನಧಿಕೃತ ಬಡಾವಣೆಗಳ ಸಂಖ್ಯೆ ಅಧಿಕವಾಗಿದ್ದವು ಮಾನ್ಯ ಶಾಸಕ ಬಿ. ದೇವೇಂದ್ರಪ್ಪ ಅಧಿವೇಶನದಲ್ಲಿ ಹಲವಾರು ಭಾರಿ ಗಮನಕ್ಕೆ ತಂದು ಚರ್ಚೆ ಮಾಡಿದ್ದರ ಹಿನ್ನಲೆಯಲ್ಲಿ ಸರಕಾರ ಉಪ ಸಮಿತಿ ರಚನೆ ಮಾಡಿತು ಸಮಿತಿಯ ತಿರ್ಮಾ ನದಂತೆ ಸರಕಾರ ಅನುಮೊದನೆ ನೀಡಿತು ಹಾಗಾಗಿ ಇಂದು ಬಿ ಖಾತೆ ನೀಡಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ನವೀನ್ ಕುಮಾರ್, ಉಪಾಧ್ಯಕ್ಷೆ ಲೋಕಮ್ಮ ಓಬಳೇಶ್, ಸದಸ್ಯರಾದ ವಿಶಾಲಾಕ್ಷಿ, ಮಂಜಮ್ಮ, ಲಲಿತಮ್ಮ ,ದೇವರಾಜ್, ತಿಪ್ಪೇಸ್ವಾಮಿ, ರಮೇಶ್ ರೆಡ್ಡಿ, ಆದರ್ಶ, ಲುಕ್ಮಾನ್ ಖಾನ್, ಶಕೀಲ್ ಅಹಮ್ಮದ್, ನಜರುನ್ನೀಸಾ, ಲೋಲಾಕ್ಷಮ್ಮ, ನಿರ್ಮಲಕುಮಾರಿ, ರೇವಣ್ಣ, ಮಹಮ್ಮದ್ ಅಲಿ, ಮಂಜುನಾಥ್, ಪಾಪಲಿಂಗಪ್ಪ, ನಾಮನಿರ್ದೇಶಿತ ಸದಸ್ಯರಾದ ಶಾಂತಪ್ಪ, ಜಯ್ಯಣ್ಣ, ತಾನಾಜಿಗೋಸಾಯಿ, ಶಾಸಕರ ಆಪ್ತರಾದ ಗೌಸ್ ಅಹಮ್ಮದ್, ಸೇರಿದಂತೆ ಉಪಸ್ಥಿತರಿದ್ದರು.

## ರಾಷ್ಟ್ರೀಯ ವೃತ್ತಿ ರಂಗೋತ್ಸವದ ಪೂರ್ವಭಾವಿ ಸಭೆ

**ದಾವಣಗೆರೆ:** ವೃತ್ತಿ ರಂಗಭೂಮಿ ರಂಗಾಯಣ ವತಿಯಿಂದ ಮಾರ್ಚ್ 15 ರಿಂದ 17 ರವರೆಗೆ 3 ದಿನಗಳ ಕಾಲ ನಗರದ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ವೃತ್ತಿ ರಂಗೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಪ್ರಯುಕ್ತ ಮಾರ್ಚ್ 3 ರಂದು ಸಂಜೆ 4 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ವೃತ್ತಿ ರಂಗಭೂಮಿ ರಂಗಾಯಣದ ನಿರ್ದೇಶಕರಾದ ಮಲ್ಲಿಕಾರ್ಜುನ ಕಡಕೋಳ ಅವರಿಂದ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ ಎಂದು ವಿಶೇಷಾಧಿಕಾರಿ ರವಿಚಂದ್ರ ತಿಳಿಸಿದ್ದಾರೆ.

## ಸಂವಿಧಾನ ರಚಿಸಿದ ಅಂಬೇಡ್ಕರ್ ಸ್ಮರಣೆ ಅಗತ್ಯ: ಪಾಲಯ್ಯ ಅಭಿಮತ



**ಜಗಳೂರು:** ಸಮಾನತೆ ಸಾರುವ ಶ್ರೇಷ್ಠ ಸಂವಿಧಾನ ರಚಿಸಿದ ಅಂಬೇಡ್ಕರ್ ಸ್ಮರಿಸುವ ಜಾಗರಣೆ ಪ್ರಸ್ತುತ ಅವಶ್ಯಕವಾಗಿದೆ ಎಂದು ಮಾಜಿ ಜಿ.ಪಂ ಸದಸ್ಯ ಕೆ.ಪಿ. ಪಾಲಯ್ಯ ಅಭಿಪ್ರಾಯ ವ್ಯಕ್ತಪಡಿಸಿದರು.

ಬುಧವಾರ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಪ್ರಗತಿಪರ ಸಂಘಟನೆವತಿಯಿಂದ ಮಹಾಶಿವರಾತ್ರಿ ಹಬ್ಬದ ಅಂಗವಾಗಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಮಹಾರಾತ್ರಿ ಜಾಗರಣೆ'ವಿಶೇಷ ಕಾರ್ಯಕ್ರಮದಲ್ಲಿ ಪುತ್ಥಳಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಭಾರತ ಹಲವುಧರ್ಮ, ಬಹು ಸಂಸ್ಕೃತಿಯ ನೆಲೆಬೀಡು. ಸಮಾಜದಲ್ಲಿ ಜಾತ್ಯಾತೀತ, ಧರ್ಮಾತೀತವಾಗಿ ಶಾಂತಿ ಸಾಮರಸ್ಯತೆಯೊಂದಿಗೆ ಧಾರ್ಮಿಕ ಹಬ್ಬ ಹರಿದಿನಗಳು ಜರುಗಬೇಕು. ದೇವರು ಧರ್ಮದ ಹೆಸರಿನಲ್ಲಿ ಜನತೆಯ ಮೇಲೆ ಭಾವನಾತ್ಮಕ ಹಲ್ಲೆಗಳು, ಮೌಢ್ಯತೆ, ಕಂದಾಚಾರಗಳು ಕೊನೆಯಾಗಬೇಕು. ಮಹಿಳೆಯರು ಸೇರಿದಂತೆ ಶೋಷಿತ ವರ್ಗಗಳು ಶಿಕ್ಷಣಪಡೆದು ಮುಖ್ಯವಾಹಿನಿಗೆ ಬರಬೇಕಿದೆ ಎಂದು ಸಲಹೆ ನೀಡಿದರು.

ವಕೀಲ ಸಂಘದ ತಾಲ್ಲೂಕು ಅಧ್ಯಕ್ಷ ಟಿ.ಬಸವರಾಜ್ ಮರೇನಹಳ್ಳಿ ಮಾತನಾಡಿ, ದೇಶದಲ್ಲಿ ಮನುಸ್ಮೃತಿ ವಿಜೃಂಭಿಸುತ್ತಿದ್ದ ವೇಳೆ ಅತ್ಯಂತ ಶೋಷಣೆಗೊಳಗಾಗಿದ್ದ ಮಹಿಳೆಯರಿಗೆ ಸಂವಿಧಾನಬದ್ದ ಧಾರ್ಮಿಕ ಹಕ್ಕು ನೀಡಿ ದೇವಾಲಯಗಳ ಪ್ರವೇಶನೀಡಿದ ಡಾ.ಬಿ.ಆರ್ ಅಂಬೇಡ್ಕರ್ ಅವರನ್ನು ಸ್ಮರಿಸದೆ ದೇವಾಲಯಗಳ ಮುಂದೆ ಸಾಲಾಗಿ ನಿಲ್ಲುತ್ತಿರುವುದು, ಮೌಢ್ಯಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು. ವೈಜ್ಞಾನಿಕ ಮತ್ತು ವೈಚಾರಿಕತೆ ಮೈಗೂಡಿಸಿಕೊಳ್ಳಬೇಕು ಎಂದರು.

ದಲಿತ ಮುಖಂಡ ಬಿ.ಶಂಭುಲಿಂಗಪ್ಪ ಮಾತನಾಡಿ, ಅಂಬೇಡ್ಕರ್ ಅವರನ್ನು ಜಾತಿಗೆ ಸೀಮಿತಗೊಳಿಸದೆ ಮೀಸಲಾತಿ ಅನುಭವಿಸುವ ಎಲ್ಲಾ ವರ್ಗದವರು ಇಂತಹ ವಿನೂತನ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಸಂಘಟನೆಗಳು ಜನಜಾಗೃತಿ ಮೂಡಿಸಬೇಕು. ಶಿವರಾತ್ರಿ ಜಾಗರಣೆಯ ದಿನದಂದು ಆಹಾರ ಪದ್ದತಿ ಆಯ್ಕೆ ಪ್ರತಿಯೊಬ್ಬರ ಹಕ್ಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ದೊಣೆಹಳ್ಳಿ ಗ್ರಾ.ಪಂ ಅಧ್ಯಕ್ಷ ತಿಪ್ಪೇಸ್ವಾಮಿ, ಪ್ರಾಂಶುಪಾಲ ನಾಗಲಿಂಗಪ್ಪ, ವಕೀಲರಾದ ಸಣ್ಣ ಓಬಯ್ಯ, ನಾಗೇಶ್, ಪ್ರಗತಿಪರ ಸಂಘಟನೆ ಮುಖಂಡರಾದ ಚಿಕ್ಕಮ್ಮನಹಟ್ಟಿ ಮಂಜಣ್ಣ, ಕುಬೇಂದ್ರಪ್ಪ, ಗುತ್ತಿದುರ್ಗ ರುದ್ರೇಶ್, ಅಹಮ್ಮದ್ ಅಲಿ, ರಾಜಪ್ಪ ವ್ಯಾಸಗೊಂಡನಹಳ್ಳಿ, ಮಾದಿಹಳ್ಳಿ ಮಂಜಪ್ಪ, ಸತೀಶ್ ಮಲೆಮಾಚಿಕೆರೆ, ಸಿದ್ದಮ್ಮನಹಳ್ಳಿ ಬಸವರಾಜ್, ವಕೀಲ ಅಂಜಿನಪ್ಪ, ಭರಮಸಮುದ್ರ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.




## ಮಾರ್ಚ್ 5 ಬಿಸಿಯೂಟ ತಯಾರಕರಿಂದ ಬೆಂಗಳೂರು ಚಲೋ




**ದಾವಣಗೆರೆ:** ಕಳೆದ 23 ವರ್ಷಗಳಿಂದ ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಅಕ್ಷರ ದಾಸೋಹದಡಿ ಕಾರ್ಯನಿರ್ವಹಿಸುತ್ತಿರುವ ಬಿಸಿಯೂಟ ತಯಾರಕರ ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇದೇ ಮಾರ್ಚ್ 5 ರಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಧರಣಿಯನ್ನು ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಅಕ್ಷರ ದಾಸೋಹ ಬಿಸಿಯೂಟ ತಯಾರಕರ ಫೆಡರೇಷನ್ ಎಐಟಿಯುಸಿ ಪ್ರಧಾನ ಕಾರ್ಯದರ್ಶಿ ಕಾಂ. ಆವರಗೆರೆ ಚಂದ್ರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಸಿಯೂಟ ತಯಾರಕರ ಕೆಲಸ ಖಾಯಂಗೊಳಿಸಿ, ಬಿಸಿಯೂಟ ಯೋಜನೆ ಎನ್ನುವುದನ್ನು ಕೈಬಿಡಬೇಕು. ಹಾಗೂ ಕೆಲಸಗಾರರನ್ನು ಕಾರ್ಮಿಕರೆಂದು ಪರಿಗಣಿಸುವಂತೆ ಸರ್ಕಾರವನ್ನು ಒತ್ತಾಯಿಸಲು 'ಬೆಂಗಳೂರು ಚಲೋ' ನಡೆಸಲಾಗುವುದು ಎಂದರು.

ರಾಜ್ಯದ ಶಾಲೆಗಳಲ್ಲಿ 1 ಲಕ್ಷ 18 ಸಾವಿರ ಜನರು ಬಿಸಿಯೂಟ ಯೋಜನೆಯಡಿ ಕಾರ್ಯನಿರ್ವಹಿಸುತ್ತಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ 3,500 ಬಿಸಿಯೂಟ ತಯಾರಕರಿದ್ದಾರೆ. ಇವರಲ್ಲಿ ಕಾರ್ಯನಿರ್ವಹಿಸುವ ವೇಳೆ ಆಕಸ್ಮಿಕ ಘಟನೆಗಳಿಗೆ ಸಿಲುಕಿದ 15 ಕೆಲಸಗಾರರು ಸಾವನ್ನಪ್ಪಿದ್ದು, ಯಾವುದೇ ಪರಿಹಾರವನ್ನು ನೀಡಿಲ್ಲ. ಮುಖ್ಯ ಆಡುಗೆಯವರಿಗೆ ತಿಂಗಳಿಗೆ 3,700 ರೂ. ಹಾಗೂ ಸಹಾಯಕರಿಗೆ 3600 ರೂ. ನೀಡಲಾಗುತ್ತಿದ್ದು, ಕನಿಷ್ಠ ವೇತನ ಜಾರಿಗೊಳಿಸಲು ಆಗ್ರಹಿಸಲಾಗುವುದು ಎಂದು ತಿಳಿಸಿದರು.

ಕಾರ್ಮಿಕರೆಂದು ಪರಿಗಣಿಸಿ ಪಿಎಫ್, ಇಎಸ್‌ಐ ಮತ್ತು ಗ್ರಾಜುಯಿಟಿ ಜಾರಿಗೊಳಿಸಬೇಕು. 2ಲಕ್ಷ ರೂಪಾಯಿ ಇಡುಗಂಟು ಹಾಗೂ ಪಿಂಚಣಿ ಜಾರಿಗೊಳಿಸಬೇಕು. ಮೊಟ್ಟೆ ಸುಲಿಯುವ ಭತ್ಯೆಯನ್ನು 1 ರೂಪಾಯಿಗೆ ಹೆಚ್ಚಿಸಬೇಕು ಇತ್ಯಾದಿ ಬೇಡಿಕೆಗಳ ಈಡೇರಿಕೆಗೆ ಹಗಲು–ರಾತ್ರಿ ನಿರಂತರ ಧರಣಿ ನಡೆಸಲಾಗುವುದು. ಧರಣಿ ನಡೆಯುವಷ್ಟು ದಿನಗಳ ಕಾಲ ಶಾಲೆಗಳಲ್ಲಿ ಅಡುಗೆ ಕೆಲಸವನ್ನು ನಿಲ್ಲಿಸಲಾಗುವುದು. ಜಿಲ್ಲೆಯಿಂದ 3000 ಕ್ಕೂ ಹೆಚ್ಚು ಕೆಲಸಗಾರರು 'ಬೆಂಗಳೂರು ಚಲೋ'ನಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ಸಂಘಟನೆಯ ಮಹಮ್ಮದ್ ಬಾಷಾ, ಜ್ಯೋತಿಲಕ್ಷ್ಮಿ, ಪದ್ಮ, ಸುಧಾ, ಸಾವಿತ್ರಮ್ಮ, ಭಾರತಿ, ಚನ್ನಮ್ಮ, ಸರೋಜಾ, ಮಹಮ್ಮದ್ ರಫೀಕ್ ಉಪಸ್ಥಿತರಿದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankri Temple Arch, Main Road, Davanagere, Karnataka-577004. Editor: **MALLIKARJUNAPPA H.G.**